ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 108 ಸಂಚಿಕೆ- 108 | PAGE-8 ಪುಟ-8 | ಗುರುವಾರ 05.06.2025 | RS.2/- ಬೆಲೆ 2/-

# ಆರ್‌ಸಿಬಿ ವಿಜಯೋತ್ಸವ: ಚಿನ್ನಸ್ವಾಮಿ ಕ್ರೀಡಾಂಗಣ ಬಳಿ ಕಾಲ್ತುಳಿತ; 11 ಅಭಿಮಾನಿಗಳ ಸಾವು



ಬೆಂಗಳೂರು:ಜೂ.4: ಸತತ 18 ವರ್ಷಗಳ ನಂತರ ಚೊಚ್ಚಲ ಐಪಿಎಲ್ ಟ್ರೋಫಿ ಮುಡಿಗೇರಿಸಿಕೊಂಡ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಸಂಭ್ರಮಾಚರಣೆಗೆ ಬಂದಿದ್ದ 11 ಅಭಿಮಾನಿಗಳು ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಉಂಟಾದ ಕಾಲ್ತುಳಿತದಿಂದ ಸಾವನ್ನಪ್ಪಿದ್ದಾರೆ. ಮೃತರ ಸಂಖ್ಯೆ ಮತ್ತಷ್ಟು ಹೆಚ್ಚಾಗುವ ಸಾಧ್ಯತೆಯಿದೆ.

ಟ್ರೋಫಿ ಗೆದ್ದ ತಂಡವನ್ನು ಕಣ್ತುಂಬಿಕೊಳ್ಳಲು ನಗರದ ವಿವಿಧೆಡೆಯಿಂದ ಅಪಾರ ಸಂಖ್ಯೆಯಲ್ಲಿ ಆಗಮಿಸಿದ್ದ ಯುವಕ, ಯುವತಿಯರು ಕ್ರೀಡಾಂಗಣದ ಬಳಿ ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸಿದ್ದಾರೆ. ಈ ವೇಳೆ ಉಂಟಾದ ತಳ್ಳಾಟ, ನೂಕುನುಗ್ಗಲಿನಿಂದ ಗಂಭೀರವಾಗಿ

(2ನೇ ಪುಟ ನೋಡಿ)

## ಆರ್‌ಸಿಬಿ ಸಂಭ್ರಮಾಚರಣೆ ವೇಳೆ ಕಾಲ್ತುಳಿತ : ಪ್ರಧಾನಿ ಮೋದಿ ಸಂತಾಪ



ಬೆಂಗಳೂರು:ಜೂ.4: ಆರ್‌ಸಿಬಿ ವಿಜಯೋತ್ಸವದ ವೇಳೆ ನಡೆದ ಕಾಲ್ತುಳಿತದಿಂದ ನಡೆದ ಅವಘಡಕ್ಕೆ ಪ್ರಧಾನಿ ನರೇಂದ್ರ ಮೋದಿಯವರು ಸಂತಾಪ ಸೂಚಿಸಿದ್ದಾರೆ.

ಈ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಬೆಂಗಳೂರಿನಲ್ಲಿ ನಡೆದಿರುವುದು ನಿಜಕ್ಕೂ ಹೃದಯವಿದ್ರಾವಕ ಘಟನೆ. ಈ ದುರಂತದಲ್ಲಿ ಹಲವರು ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡಿದ್ದಾರೆ. ಅವರ ಬಗ್ಗೆ ಕನಿಕರವಿದೆ. ಗಾಯಗೊಂಡವರು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ನಾನು ಪ್ರಾರ್ಥಿಸುತ್ತೇನೆ ಎಂದು ಬರೆದುಕೊಂಡಿದ್ದಾರೆ. ಆರ್‌ಸಿಬಿ ಗೆಲುವು ವಿಜಯೋತ್ಸವದ ವೇಳೆ ಚಿನ್ನಸ್ವಾಮಿ ಸ್ಟೇಡಿಯಂ ಬಳಿ ಸಂಭವಿಸಿದ ಕಾಲ್ತುಳಿತಕ್ಕೆ 11 ಆರ್‌ಸಿಬಿ ಫ್ಯಾನ್ಸ್ ದುರ್ಮರಣಕ್ಕೀಡಾಗಿದ್ದಾರೆ. 50ಕ್ಕೂ ಹೆಚ್ಚು ಗಂಭೀರವಾಗಿ ಗಾಯಗೊಂಡಿರುವ ಘಟನೆ ನಡೆದಿದೆ.

ಗಾಯಾಳುಗಳಿಗೆ ಬೌರಿಂಗ್ ಆಸ್ಪತ್ರೆ, ವೈದೇಹಿ ಆಸ್ಪತ್ರೆ ಹಾಗೂ ಮಣಿಪಾಲ್ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಸಾವಿನ ಸಂಖ್ಯೆ ಮತ್ತಷ್ಟು ಏರಿಕೆಯಾಗುವ ಸಾಧ್ಯತೆ ಇದೆ.

## ಮೃತರ ಕುಟುಂಬಕ್ಕೆ ತಲಾ 10 ಲಕ್ಷ ರೂ. ಪರಿಹಾರ:ಸಿಎಂ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜೂ.4: 18 ವರ್ಷಗಳ ನಂತರ ಚೊಚ್ಚಲ ಐಪಿಎಲ್ ಟ್ರೋಫಿ ಮುಡಿಗೇರಿಸಿಕೊಂಡ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಸಂಭ್ರಮಾಚರಣೆ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಕಾಲ್ತುಳಿತ ಸಂಭವಿಸಿ ಮೃತಪಟ್ಟವರ ಸಂಖ್ಯೆ 11ಕ್ಕೆ ಏರಿಕೆಯಾಗಿದೆ.

ಕಾಲ್ತುಳಿತ ದುರಂತದ ನಂತರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಸಿಎಂ ಸಿದ್ದರಾಮಯ್ಯ ಅವರು, ವಿಧಾನಸೌಧದ ಬಳಿ ಯಾವುದೇ ದುರಂತ ಸಂಭವಿಸಿಲ್ಲ. ಆದರೆ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ದುರಂತ ಸಂಭವಿಸಿದೆ. ಇಂತಹ ದೊಡ್ಡ ದುರಂತ ಸಂಭವಿಸಬಾರದಿತ್ತು. ಇದರಿಂದ ತುಂಬ ದುಃಖವಾಗುತ್ತಿದೆ ಎಂದರು.

ಭಾರಿ ಸಂಖ್ಯೆಯಲ್ಲಿ ಅಭಿಮಾನಿಗಳು ಜಮಾಯಿಸಿದ ಹಿನ್ನೆಲೆಯಲ್ಲಿ ನೂಕುನುಗ್ಗಲು ಹಾಗೂ ಕಾಲ್ತುಳಿತ ಸಂಭವಿಸಿ 11 ಜನ ಸಾವನ್ನಪ್ಪಿದ್ದಾರೆ ಮತ್ತು 33 ಮಂದಿ ಗಾಯಗೊಂಡಿದ್ದಾರೆ ಎಂದರು.

ಮೃತರ ಕುಟುಂಬಕ್ಕೆ ತಲಾ 10 ಲಕ್ಷ ರೂಪಾಯಿ ಪರಿಹಾರ ನೀಡಲಾಗುವುದು. ಗಾಯಾಳುಗಳಿಗೆ ಸಂಪೂರ್ಣ ಉಚಿತ ಚಿಕಿತ್ಸೆ ನೀಡಲಾಗುವುದು. ಇದು ಸರ್ಕಾರದ ಕಾರ್ಯಕ್ರಮ ಅಲ್ಲ. ತಪ್ಪಿತಸ್ಥರ ವಿರುದ್ಧ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಸಿಎಂ ತಿಳಿಸಿದರು.

ನ್ಯಾಯಾಂಗ ತನಿಖೆಗೆ ಆದೇಶ "ಈ ಘಟನೆಯನ್ನು ನಾನು ಸಮರ್ಥಿಸಿಕೊಳ್ಳಲು ಬಯಸುವುದಿಲ್ಲ. ನಮ್ಮ ಸರ್ಕಾರ ಇದರಲ್ಲಿ ರಾಜಕೀಯ

(2ನೇ ಪುಟ ನೋಡಿ)

## ಎರಡು ಹಂತಗಳಲ್ಲಿ ಜನಗಣತಿಯೊಂದಿಗೆ ಜಾತಿ ಗಣತಿ: ಕೇಂದ್ರ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಜೂ.4: ದೇಶದಲ್ಲಿ ಎರಡು ಹಂತಗಳಲ್ಲಿ ಜನ ಗಣತಿಯೊಂದಿಗೆ ಜಾತಿ ಗಣತಿ ನಡೆಸಲಾಗುವುದು ಎಂದು ಕೇಂದ್ರ ಗೃಹ ವ್ಯವಹಾರಗಳ ಸಚಿವಾಲಯ ಬುಧವಾರ ತಿಳಿಸಿದೆ.

ಅಕ್ಟೋಬರ್ 1,2026 ರಿಂದ ಲಡಾಖ್, ಜಮ್ಮು ಮತ್ತು ಕಾಶ್ಮೀರ, ಹಿಮಾಚಲ ಪ್ರದೇಶ ಮತ್ತು ಉತ್ತರಾಖಂಡದಂತಹ ಹಿಮಚ್ಛಾದಿತ ಪ್ರದೇಶಗಳಲ್ಲಿ ಮತ್ತು ಮಾರ್ಚ್ 1,2027 ರಿಂದ ದೇಶದ ಉಳಿದ ಭಾಗಗಳಲ್ಲಿ ಜನ ಗಣತಿಯೊಂದಿಗೆ ಜಾತಿ ಗಣತಿ ನಡೆಸಲಾಗುವುದು ಎಂದು ಸಚಿವಾಲಯ ಪ್ರಕಟಿಸಿದೆ.

ಜನಗಣತಿ-2027ನ್ನು ಎರಡು ಹಂತಗಳಲ್ಲಿ

(2ನೇ ಪುಟ ನೋಡಿ)

## ಸರ್ಕಾರದ ಪ್ರಚಾರದ ಹುಚ್ಚಿಗೆ ಜನ ಬಲಿ: ವಿಜಯೇಂದ್ರ



ಮಲ್ಲಮ್ಮನುಡಿ ವಾರ್ತೆ ಬೆಂಗಳೂರು:ಜೂ.4: ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಾಲ್ತುಳಿತದಿಂದ ಆದ ಅಪಾರ ಸಾವು-ನೋವಿಗೆ ರಾಜ್ಯ ಸರ್ಕಾರವೇ ಹೊಣೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಕಿಡಿಕಾರಿದ್ದಾರೆ.

ಆರ್‌ಸಿಬಿ ಅಭಿಮಾನಿಗಳ ದುರಂತ ಸಾವಿನ ಕುರಿತು ಮಾತನಾಡಿದ ವಿಜಯೇಂದ್ರ, ಇದು ರಾಜ್ಯ ಸರ್ಕಾರದ ನಿರ್ಲಕ್ಷ್ಯ. ಯಾವುದೇ ತಯಾರಿ ಮಾಡಿಕೊಳ್ಳದೇ ಈ ಕಾರ್ಯಕ್ರಮ ಮಾಡಿದೆ ಎಂದು ಅಸಮಾಧಾನ ಹೊರಹಾಕಿದ್ದಾರೆ.

ಪೊಲೀಸರ ಅನುಮತಿ ಇರಲಿಲ್ಲ. ಆದರೂ ಮುಖ್ಯಮಂತ್ರಿಗಳು ಒತ್ತಾಯ ಮಾಡಿ ಕಾರ್ಯಕ್ರಮ ಮಾಡಿದ್ದಾರೆ. ಹೆಣ್ಣುಮಕ್ಕಳಿಗೆ ಯಾವುದೇ ಭದ್ರತೆ ಇರಲಿಲ್ಲ. ಅಧಿಕಾರಿಗಳ ಮಕ್ಕಳು, ಅಧಿಕಾರಿಗಳು ಸೆಲ್ಫಿ ತಗೊಂಡು ಈ ರೀತಿ ಮಾಡಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಸರ್ಕಾರದ ಪ್ರಚಾರದ ಹುಚ್ಚಿಗೆ ಜನಬಲಿಯಾಗಿದ್ದಾರೆ. ಅಲ್ಲಿ ಯಾವುದೇ ಸೂಕ್ತ ವ್ಯವಸ್ಥೆ ಮಾಡಿಕೊಂಡಿರಲಿಲ್ಲ. ನ್ಯಾಯಾಂಗ ತನಿಖೆ ಆಗಬೇಕು ಎಂದು ಆಗ್ರಹಿಸಿದ್ದಾರೆ. ಹನ್ನೊಂದಕ್ಕೂ ಹೆಚ್ಚು ಜನ ಸಾವು, ನೂರಾರು ಜನ ಚಿಕಿತ್ಸೆ ಪಡಿತಿದ್ದಾರೆ. ಬೌರಿಂಗ್‌ನಲ್ಲಿ ಆರು ಮಂದಿ ಸತ್ತಿದ್ದಾರೆ. ವೈದೇಹಿಯಲ್ಲಿ ನಾಲ್ಕು ಅಂತಿದ್ದಾರೆ. ಇನ್ನೂ ಹಲವರು ಗಾಯಗೊಂಡಿದ್ದಾರೆ. ರಾಜ್ಯ ಸರ್ಕಾರ ಯಾಕೆ ಆತುರ ಪಟ್ಟಿತು. ಇದಕ್ಕೆ ನೇರ ಕಾರಣ ಸರ್ಕಾರವೇ ಎಂದು ಆರೋಪಿಸಿದ್ದಾರೆ.

## ವಿಧಾನಸೌಧದ ಎದುರು ಐಪಿಎಲ್ ಚಾಂಪಿಯನ್ ಆರ್‌ಸಿಬಿ ತಂಡಕ್ಕೆ ಸಿಎಂ ಸಿದ್ದರಾಮಯ್ಯ ಸನ್ಮಾನ




ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಜೂ.4: 18 ವರ್ಷಗಳ ಕಾಯುವಿಕೆಯ ನಂತರ ಮೊದಲ ಬಾರಿ ಐಪಿಎಲ್ ಚಾಂಪಿಯನ್ಸ್ ಆಗಿ ಬೆಂಗಳೂರಿಗೆ ಆಗಮಿಸಿದ ಬೆಂಗಳೂರು ರಾಯಲ್ ಚಾಲೆಂಜರ್ಸ್ ತಂಡವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಬುಧವಾರ ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಸನ್ಮಾನಿಸಿದರು. ಗುಜರಾತ್‌ನ ಅಹ್ಮದಾಬಾದ್‌ನಿಂದ ಬೆಂಗಳೂರಿನ ಎಚ್‌ಎಎಲ್ ವಿಮಾನ ನಿಲ್ದಾಣಕ್ಕೆ ಬಂದಿಳಿದ ಆರ್‌ಸಿಬಿ ಆಟಗಾರರನ್ನು ಸರ್ಕಾರದ ಪರವಾಗಿ ಖುದ್ದು ಡಿಸಿಎಂ ಡಿಕೆ ಶಿವಕುಮಾರ್ ಸ್ವಾಗತಿಸಿದರು. ನಂತರ ಆರ್‌ಸಿಬಿ ಆಟಗಾರರನ್ನು ವಿಶೇಷ ಬಸ್ಸುಗಳಲ್ಲಿ ಖಾಸಗಿ ಹೋಟೆಲ್ ಗೆ ಕರೆದುಕೊಂಡು ಹೋಗಲಾಯಿತು. ಸಂಜೆ 4:30ಕ್ಕೆ ಖಾಸಗಿ ಹೋಟೆಲ್‌ನಿಂದ ಬಸ್‌ಗಳಲ್ಲಿ ಆರ್‌ಸಿಬಿ ತಂಡ ಗೆದ್ದ ಟ್ರೋಫಿ ಸಮೇತ ವಿಧಾನಸೌಧಕ್ಕೆ ಆಗಮಿಸಿತು. ರಾಷ್ಟ್ರಗೀತೆ ಹಾಗೂ ನಾಡಗೀತೆ ಮೂಲಕ ಕಾರ್ಯಕ್ರಮ ಆರಂಭಿಸಲಾಯಿತು. ಬಳಿಕ ಸಿಎಂ ಸಿದ್ದರಾಮಯ್ಯ ಅವರು ಎಲ್ಲಾ ಆಟಗಾರರಿಗೆ ಮೈಸೂರು ಪೇಟ ತೊಡಿಸಿ, ಶಾಲು ಹೊದಿಸಿ, ಹಾರ ಹಾಕಿ ಸನ್ಮಾನಿಸಿದರು. ಅಷ್ಟರಲ್ಲೇ ಮಳೆ ಬಂದ ಕಾರಣ ತರಾತುರಿಯಲ್ಲಿ ಕಾರ್ಯಕ್ರಮ ಮುಗಿಸಿ ಆಟಗಾರರನ್ನು ಬಸ್‌ನಲ್ಲಿ ಕಳುಹಿಸಲಾಯಿತು. ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಗೃಹ ಸಚಿವ ಡಾ.ಜಿ.ಪರಮೇಶ್ವರ್, ಸಚಿವರಾದ ಜಮೀರ್ ಅಹ್ಮದ್ ಖಾನ್, ಡಾ.ಎಂ.ಸಿ.ಸುಧಾಕರ್ ಸೇರಿದಂತೆ ಹಲವಾರು ಗಣ್ಯರು ಭಾಗವಹಿಸಿದ್ದರು.

## ಯುವ ನಿಧಿ ಫಲಾನುಭವಿಗಳೊಂದಿಗೆ ಸಂವಾದ: ಮಹಿಳಾ ಮತ್ತು ಯವ ಸಬಲೀಕರಣಕ್ಕೆ ಪಂಚ ಗ್ಯಾರಂಟಿ ಯೋಜನೆಗಳು ಪೂರಕ:ಎಸ್.ಆರ್.ಮೆಹರೋಜ್ ಖಾನ್



ಮಲ್ಲಮ್ಮನುಡಿವಾರ್ತೆ ಕಲಬುರಗಿ,ಜೂ.4: ರಾಜ್ಯ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳು ಮಹಿಳಾ ಸಬಲೀಕರಣ ಮತ್ತು ಯುವ ಸಬಲೀಕಣದಲ್ಲಿ ರಾಜ್ಯ ದಾಪುಗಾಲು ಇಡುತ್ತಿದೆ. ಯುವ ನಿಧಿ ಯೋಜನೆ ಪರಿಣಾಮ ರಾಜ್ಯದಲ್ಲಿ ನಿರುದ್ಯೋಗ ಸಮಸ್ಯೆ ಶೇ.4.80 ರಿಂದ ಶೇ.2.25ಕ್ಕೆ ಕ್ಷೀಣಿಸಿದೆ ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಕಲಬುರಗಿ ವಿಭಾಗದ ಉಪಾಧ್ಯಕ್ಷ ಎಸ್.ಆರ್. ಮೆಹರೋಜ್ ಖಾನ್ ಹೇಳಿದರು.

ಬುಧವಾರ ಗುಲಬರ್ಗಾ ವಿಶ್ವವಿದ್ಯಾಲಯದ ಮಹಾತ್ಮ ಗಾಂಧಿ ಸಭಾಂಗಣದಲ್ಲಿ ಯುವ ನಿಧಿ ಫಲಾನುಭವಿಗಳ ಸಂವಾದದಲ್ಲಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಬಡ ಜನರ ಕಲ್ಯಾಣಕ್ಕೆ ಪ್ರತಿ ವರ್ಷ ಸುಮಾರು 52 ಸಾವಿರ ಕೋಟಿ ರೂ. ಖರ್ಚು ಮಾಡುವಂತಹ ಇಂತಹ ಯೋಜನೆಗಳು ಪ್ರಪಂಚದಲ್ಲಿ ಎಲ್ಲಿಯೂ ಇಲ್ಲ. ಇವು ಜನರ ಬದುಕು ಭದ್ರವಾಗಿಸಲು ಕಾರಣವಾಗಿವೆ ಎಂದು ಅಂತರಾಷ್ಟ್ರೀಯ ಪ್ರತಿಷ್ಠಿತ ಸಂಸ್ಥೆಗಳು ತಮ್ಮ ಅಧ್ಯಯನದಲ್ಲಿ ತಿಳಿಸಿವೆ ಎಂದರು.

ಶಕ್ತಿ ಯೋಜನೆಯಿಂದ ಮಹಿಳೆಯರ ವೃತ್ತಿ ಬದುಕಿಗೆ ಆಸರೆಯಾಗಿದಲ್ಲದೆ

(2ನೇ ಪುಟ ನೋಡಿ)



ಎಂ.ಎ. ಇಂಗ್ಲೀಷ್ ಅಭ್ಯಾಸ ಮಾಡುತ್ತಿದ್ದು, ಪ್ರತಿ ತಿಂಗಳು ದೃಡೀಕರಣ ನೀಡಿದ್ದರು ಕಳೆದ 3 ತಿಂಗಳಿನಿಂದ ಯುವ ನಿಧಿ ಹಣ ಬರುತ್ತಿಲ್ಲ -ಯಲ್ಲಲಿಂಗ್



ನಿರುದ್ಯೋಗ ಮುಕ್ತ ಕರ್ನಾಟಕ್ಕಾಗಿ ಯುವ ನಿಧಿ ಸಹಾಯವಾಗಿದೆ. ತಂದೆ ಒಕ್ಕಲುತನ ಮಾಡುತ್ತಿದ್ದು, ಅರ್ಥಿಕವಾಗಿ ನಾವು ಸಬಲರಲ್ಲ. ಯುವ ನಿಧಿ ಹಣದಿಂದ ಸಹೋದರನೊಂದಿಗೆ ಸೇರಿ ಧಾರವಾಡದಲ್ಲಿ ಉದ್ಯೋಗದ ತರಬೇತಿ ಪಡೆಯುತ್ತಿರುವೆ. ಗೃಹ ಲಕ್ಷ್ಮಿ ಹಣ ಬರುತ್ತೆ. ಗೃಹ ಜ್ಯೋತಿ ಮನೆ ಬೆಳಗಿಸಿದೆ -ವಿಜಯಲಕ್ಷ್ಮಿ,ಸ್ನಾತಕೋತ್ತರ ಪದವೀಧರೆ



ಫಲಾನುಭವಿಗಳು ಏನಂದ್ರು: ಕಳೆದ 11 ತಿಂಗಳಿನಿಂದ ಯುವನಿಧಿ ಯೋಜನೆಯಡಿ ಹಣ ಬರುತ್ತಿದೆ. ಪುಸ್ತಕ ಖರೀದಿ, ಉದ್ಯೋಗ ಪಡೆಯಲು ತರಬೇತಿಗೆ ಅನುಕೂಲವಾಗಿದೆ -ಶಿವಲಿಂಗಯ್ಯ

## ನಮ್ಮ ಭಾಷೆ ನಮ್ಮದು ಇಂಗ್ಲೀಷ್ ಬರುವುದಿಲ್ಲವೆಂಬ ಕೀಳರಿಮೆ ಬೇಡ :ಬಾನು ಮುಷ್ತಾಕ್



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು, ಜೂ. 04 :ನನ್ನ ಮಾತೃ ಭಾಷೆ ಉರ್ದು, ನನ್ನ ನಾಡಿನ ಭಾಷೆ ಕನ್ನಡ, ನನಗೂ ಸಹ ಅಷ್ಟಾಗಿ ಇಂಗ್ಲೀಷ್ ಬರುವುದಿಲ್ಲ. ನಮ್ಮ ಭಾಷೆ ಬಗ್ಗೆ ನಮಗೆ ಗೌರವ ಇರಬೇಕು ಹಾಗೂ ಹಿಡಿತ ಇರಬೇಕು. ಕನ್ನಡದವರಾಗಿ ಈಗಿನ ಮಕ್ಕಳಿಗೆ ಕನ್ನಡ ಸಹ ಸರಿಯಾಗಿ ಬರದಿರುವುದು ಇಂದಿನ ದುರಂತ ಎಂದು ಬುಕರ್ ಪ್ರಶಸ್ತಿ ವಿಜೇತ ಕನ್ನಡ ಬರಹಗಾರ್ತಿ ಶ್ರೀಮತಿ ಬಾನು ಮುಷ್ತಾಕ್ ಅವರು ವಿಷಾಧ ವ್ಯಕ್ತಪಡಿಸಿದರು. ಕರ್ನಾಟಕ ಮಾಧ್ಯಮ ಅಕಾಡೆಮಿ ಹಾಗೂ ಪ್ರೆಸ್ ಕ್ಲಬ್ ವತಿಯಿಂದ ಹಮ್ಮಿಕೊಂಡಿದ್ದ ಅಂತರರಾಷ್ಟ್ರೀಯ ಬುಕರ್ ಪ್ರಶಸ್ತಿ ಪುರಸ್ಕೃತರಾದ ಶ್ರೀಮತಿ ಬಾನು ಮುಷ್ತಾಕ್ ಹಾಗೂ ಶ್ರೀಮತಿ ದೀಪಾ ಭಾಸ್ತಿ ಅವರೊಂದಿಗೆ ಕಬ್ಬನ್ ಪಾರ್ಕನ ಪ್ರೆಸ್ ಕ್ಲಬ್‌ನಲ್ಲಿ ಹಮ್ಮಿಕೊಂಡಿದ್ದ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಾನು ಪ್ರಾಥಮಿಕ ಶಾಲೆಯವರೆಗೆ ಕನ್ನಡ ಮಾಧ್ಯಮದಲ್ಲಿಯೆ ಕಲಿತಿರುವುದು. ಕನ್ನಡದಲಿಯೆ ಕಥೆ ಬರೆದಿದ್ದೇನೆ. ಅದಕ್ಕೆ ಇಂಗ್ಲೀಷ್ ಬರಹಗಾರ್ತಿ ದೀಪಾ ಭಾಸ್ತಿ ಅವರು ಇಂಗ್ಲೀಷಗೆ ಅನುವಾದ ಮಾಡಿದ್ದಾರೆ. ನನಗೆ ಸರಿಯಾಗಿ ಇಂಗ್ಲೀಷ್ ಬರುವುದಿಲ್ಲ ಎಂಬ ಕೀಳರಿಮೆ ನನ್ನನ್ನು ಇಂದಿಗೂ ಕಾಡುತ್ತಿಲ್ಲ. ನಿಮಗೆ ಬರುವ ಭಾಷೆ ನಿಮ್ಮ ಬಲ. ನಾವು ಮಾಡುವ ಕೆಲಸದಲ್ಲಿ ನಮ್ಮನ್ನು ನಾವು ಗುರುತಿಸಿಕೊಳ್ಳಬೇಕು ಎಂದರು.

ಸಂವಾದದಲ್ಲಿ ಕೇಳುಗರೊಬ್ಬರು ಗ್ರಾಮೀಣ ಪ್ರದೇಶದಲ್ಲಿ ಹೆಚ್ಚಿನ ಮಕ್ಕಳು ಕನ್ನಡ ಮಾಧ್ಯಮದಲ್ಲಿ ಶಿಕ್ಷಣ ಕಲಿಯುತ್ತಿದ್ದಾರೆ, ತಾವು ಕನ್ನಡ ಸಾಹಿತ್ಯದಲ್ಲಿ ಅಂತರಾಷ್ಟ್ರೀಯ ಬೂಕರ್ ಪ್ರಶಸ್ತಿ ಪಡೆದು ಸಾಧನೆ ಮಾಡಿದ್ದೀರಿ ಮಕ್ಕಳಿಗೆ ತಾವು ಸ್ಫೂರ್ತಿ ತುಂಬಬೇಕು ಎಂದಾಗ ಉತ್ತರಿಸಿದ ಅವರು ಅವರವರ ಭಾಷೆ ಅವರದ್ದು, ನನಗೆ ಬುಕರ್ ಬಂದಾಗ ಅಂತರರಾಷ್ಟ್ರೀಯ ವೇದಿಕೆಗಳು ಹಾಗೂ ಮಾಧ್ಯಮಗಳಲ್ಲಿ ನಾನು ಭಾಷಾಂತರಕಾರರನ್ನು ಬಳಸಿಕೊಂಡು ಸಂವಹನ ನಡೆಸಿದ್ದು, ಇದರ ಬಗ್ಗೆ ಹೆಮ್ಮೆ ಇದೆ.

ನನ್ನ ಬದುಕಿನಲ್ಲಿ ನನ್ನದೇ ಆದ ಅಸ್ತಿತ್ವ ಕಂಡುಕೊಳ್ಳಬೇಕು ಎಂಬ ಉದ್ದೇಶದಿಂದ ಚಿಕ್ಕವಯಸ್ಸಿನಲ್ಲಿಯೇ ನಾನು ನನ್ನ ಸಮಾಜದೊಳಗಿನ ಸ್ವಾತಂತ್ರ್ಯಕ್ಕಾಗಿ ಹೋರಾಟ ಆರಂಭಿಸಿದೆ. ಶಿಕ್ಷಣ ಪಡೆದ ನಂತರ ವಕೀಲೆಯಾಗಿ, ಶಿಕ್ಷಕಿಯಾಗಿ, ಹೋರಾಟಗಾರ್ತಿಯಾಗಿ ನನ್ನನ್ನು ನಾನು ಗುರುತಿಸಿಕೊಂಡು ನನ್ನ ಅನುಭವಗಳನ್ನು ಹಾಗೂ ಕಣ್ಣಾರೆ ಕಂಡ ಘಟನೆಗಳಿಗೆ ಸಾಹಿತ್ಯದ ರೂಪ ಕೊಡಲು ಆರಂಭಿಸಿ ಇಂದು ಅಂತರರಾಷ್ಟ್ರೀಯ ಮಟ್ಟದ ಬುಕರ್ ಪಡೆಯುವದರೊಂದಿಗೆ ಜಗತ್ತಿನ ಕಣ್ಣಿಗೆ ಬಿದ್ದಿದ್ದೇನೆ ಎಂದು ಹರ್ಷ

(2ನೇ ಪುಟ ನೋಡಿ)

ಒಂದನೇ ಪುಟದಿಂದ

# ಪಂಚ ಗ್ಯಾರಂಟಿ ಯೋಜನೆಗಳು ಪೂರಕ:ಎಸ್.ಆರ್.ಮೆಹರೋಜ್ ಖಾನ್

ಸ್ವಾಲಂಬಿ ಬದುಕಿಗೆ ಕಾರಣವಾಗಿದೆ. ಶಕ್ತಿ ಮತ್ತು ಗೃಹ ಲಕ್ಷ್ಮೀ ಯೋಜನೆ ಪರಿಣಾಮ ರಾಜ್ಯದಲ್ಲಿ ಮಹಿಳೆಯರ ಉದ್ಯಮಶೀಲತೆ ಪ್ರಮಾಣ ಶೇ.12ಕ್ಕೆ ಏರಿದೆ. ಅನ್ನ ಭಾಗ್ಯ ಯೋಜನೆಯಿಮದ ಹಸಿವು ಮುಕ್ತಗೊಲಿಸಿದೆ. ಉಚಿತ ವಿದ್ಯುತ್ ನೀಡಲಾಗುತ್ತಿದೆ. ಬೇರೆ ಬೇರೆ ಯೋಜನೆಗಳಲ್ಲಿ ಭ್ರಷ್ಟಾಚಾರದ ವಾಸನೆ ಕಾಣುತ್ತೇವೆ, ಆದರೆ ಗ್ಯಾರಂಟಿ ಯೋಜನೆಗಳಲ್ಲಿ ಒಂದೂ ರೂ. ಭ್ರಷ್ಠಾಚಾರವಿಲ್ಲದೆ ಪಾರದರ್ಶಕವಾಗಿ ಜಾರಿಗೆ ತಂದಿರುವ ಶ್ರೇಯಸ್ಸು ಸಿದ್ದರಾಮಯ್ಯ ನೇತೃತ್ವದ ಸರ್ಕಾರಕ್ಕೆ ಸಲ್ಲುತ್ತದೆ ಎಂದರು.ಯುವ ನಿಧಿ ಯೋಜನೆಯಡಿ ತಾಂತ್ರಿಕ ಸಮಸ್ಯೆಯಿಂದ ಹಣ ಬರುತ್ತಿಲ್ಲವಾದರೆ ಟೋಲ್ ಫ್ರೀ ಸಂ.1800–5997154ಗೆ ಕರೆ ಮಾಡಿ ಸಮಸ್ಯೆ ಬಗೆಹರಿಸಿಕೊಳ್ಳಬೇಕು ಎಂದು ಮನವಿ ಮಾಡಿದ ಎಸ್.ಮೆಹರೋಜ್ ಖಾನ್ ಅವರು, ಯುವ ಸಮುದಾಯ ಪಂಚ ಗ್ಯಾರಂಟಿ ಯೋಜನೆಗಳ ಬಗ್ಗೆ ಜನರಿಗೆ ಇನ್ನು ಹೆಚ್ಚಿನ ಅರಿವು ಮೂಡಿಸಬೇಕು ಎಂದರು.ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ ಮಾತನಾಡಿ, ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜೊತೆಗಿನ ಇತರೆ ಚಟುವಟಿಕೆಯಲ್ಲಿ ಸಕ್ರೀಯವಾಗಿ ಭಾಗವಹಿಸಬೇಕು. ವಿಚಾರ ವಿನಿಮಯದಲ್ಲಿ ಭಾಗಿಯಾಗಬೇಕು. ಕಠಿಣ ಪರಿಶ್ರಮ ಇದಲ್ಲಿ ಜೀವನದಲ್ಲಿ ಯಶಸ್ಸು ಸಾಧ್ಯ. ಗುಲವರ್ಗಟ ವಿ.ವಿ. ಉತ್ತಮ ಕ್ಯಾಂಪಸ್ ಹೊಂದಿದೆ. ಗ್ರಂಥಾಲಯ ವನ್ನು ಸದುಪಯೋಗ ಪಡಿಡಿಸಿಕೊಳ್ಳಬೇಕು. ಯುವ ನಿಧಿ ಸದ್ಬಳಕೆ ಮಾಡಿಕೊಳ್ಳಬೇಕೆಂದು ಕರೆ ನೀಡಿದರು.ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರಿ, ಉಪಾಧ್ಯಕ್ಷರಾದ ಸೋಮಶೇಖರ ಹಿರೇಮಠ, ಮುಖ್ಯ ಯೋಜನಾಧಿಕಾರಿ ಎಸ್.ಎಸ್.ಮಠಪತಿ, ಯೋಜನಾ ನಿರ್ದೇಶಕ ಜಗದೇವಪ್ಪ, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಸಹಾಯಕ ನಿರ್ದೇಶಕಿ ಭಾರತಿ, ಆಹಾರ ಇಲಾಖೆ ಉಪನಿರ್ದೇಶಕ ಭೀಮರಾಯ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಮುರುಗೇಶ ಗುಣಾರೆ, ಸೇರಿದಂತೆ ಇತರರು ಇದ್ದರು. ವಿ.ವಿ. ಕುಲಸಚಿವ ಪ್ರೊ.ರಮೇಶ ಲಂಡನಕರ್ ಅವರು ಸರ್ವರನ್ನು ಸ್ವಾಗತಿಸಿದರು. ಯುವ ನಿಧಿ ಸಂಯೋಜಕ ಡಾ.ಪ್ರಕಾಶ ಕರೇಜನ್ ವಂದಿಸಿದರು.ಶಕ್ತಿ ಯೋಜನೆಯಡಿ ಲಿಂಗ ಬೇಧವಿಲ್ಲದೆ ವಿದ್ಯಾರ್ಥಿ–ವಿದ್ಯಾರ್ಥಿನಿಯರಿಗೂ ಅವಕಾಶ ಕಲ್ಪಿಸಬೇಕು–ನಬಿಶಕ್ತಿ ಯೋಜನೆ ಮಹಿಳೆಯರ ಊರು ನೋಡಲು ಕಾರಣವಾಗಿದೆ. ದೇಶ ಸುತ್ತಿ ನೋಡಿ, ಕೋಶ ಓದಿ ನೋಡಿ ಎನ್ನುವಂತೆ ಈ ಯೋಜನೆ ಆಸರೆಯಾಗಿದೆ. ಉಚಿತ ಪ್ರಯಾಣದಿಂದ ಹೆತ್ತವರು ಮಹಿಳೆಯರ ಉನ್ನತ ಶಿಕ್ಷಣಕ್ಕೆ ನೀರೆರೆಯುತ್ತಿದೆ.

ಪೂಜಾ,ಕೆಮಿಸ್ಟ್ರಿ ವಿದ್ಯಾರ್ಥಿನಿ

# ಕೀಳರಿಮೆ ಬೇಡ :ಬಾನು ಮುಷ್ತಾಕ್

ವ್ಯಕ್ತಪಡಿಸಿದರು.ನನ್ನ ಬರಹದ ಜೊತೆಗೆ ನನ್ನ ಬದುಕು ನನ್ನೊಳಗೆ ಚರ್ಚೆ ಹುಟ್ಟು ಹಾಕುತ್ತಿದ್ದವು. ಬರವಣಿಗೆಯಲ್ಲಿ ಮರೆಮಾಚುವುದು ಏನೂ ಇಲ್ಲ, ಎಲ್ಲವೂ ತೆರೆದಿಟ್ಟ ಪುಸ್ತಕ. ಭವಿಷ್ಯದಲ್ಲಿ ಕಾದಂಬರಿ ಸೇರಿದಂತೆ ಆತ್ಮಕಥನವನ್ನು ಸಹ ಬರೆಯುವ ಉದ್ದೇಶವಿದ್ದು, ಇಲ್ಲಿಯವರೆಗೆ ಯಾವುದೇ ಪ್ರಶಸ್ತಿ ಅಥವಾ ಪುರಸ್ಕಾರಗಳಿಗಾಗಿ ನಾನು ಬರೆದಿಲ್ಲ, ಸಾಹಿತ್ಯ–ಹೋರಾಟ–ವಕೀಲ ವೃತ್ತಿ ಒಳಗೊಂಡಂತೆ 51 ವರ್ಷಗಳ ಸುಖೀ ದಾಂಪತ್ಯವನ್ನು ಅನುಭವಿಸಿದ್ದೇನೆ ಎಂದು ಹೇಳಿದರು. ಕರ್ನಾಟಕ ಮಾಧ್ಯಮ ಅಕಾಡೆಮಿಯ ಅಧ್ಯಕ್ಷರಾದ ಶ್ರೀಮತಿ ಆಯೇಶಾ ಖಾನಂ ಅವರು ಮಾತನಾಡಿ, ಕನ್ನಡ ಸಾಹಿತ್ಯ ಜಾಗತಿಕ ಮಟ್ಟದಲ್ಲಿ ಖ್ಯಾತಿಗಳಿಸುವಂತೆ ಮಾಡಿದ ನಮ್ಮ ಹೆಮ್ಮೆಯ ಅಂತರರಾಷ್ಟ್ರೀಯ ಬುಕರ್ ಪ್ರಶಸ್ತಿ ಪುರಸ್ಕೃತರಾದ ಶ್ರೀಮತಿ ಬಾನು ಮುಷ್ತಾಕ್ ಹಾಗೂ ಶ್ರೀಮತಿ ದೀಪಾ ಭಾಸ್ತಿ ಅವರು ನಮ್ಮ ಮನೆಗೆ ಬಂದಿದ್ದಾರೆ. ಇವರಿಬ್ಬರೂ ಸಹ ಮೂಲತಃ ಪತ್ರಕರ್ತರಾಗಿದ್ದವರು. ಇವರನ್ನು ನಮ್ಮ ಮಾಧ್ಯಮ ಅಕಾಡೆಮಿಯಿಂದ ಸನ್ಮಾನಿಸುತ್ತಿರುವುದು ಹೆಮ್ಮೆ ಎನಿಸುತ್ತದೆ ಎಂದರು.ನಮ್ಮ ರಾಜ್ಯದ ಇಬ್ಬರು ಹೆಣ್ಣು ಮಕ್ಕಳು ಬುಕರ್ ಪ್ರಶಸ್ತಿ ಪಡೆದಿರುವುದು ನಮ್ಮ ರಾಜ್ಯದ ಮಹಿಳೆಯರಿಗೆ ಸ್ಪೂರ್ತಿಯಾಗಿದೆ. ಇವರ ಸಾಧನೆ ಇಂದಿನ ಮಹಿಳೆಯರಿಗೆ ಮಾದರಿಯಾಗಿದೆ. ಹೆಣ್ಣುಮಕ್ಕಳ ಕುರಿತು ಇವರ ಪುಸ್ತಕದಲ್ಲಿನ ಸಂವೇದನಾಶೀಲ ವಸ್ತುವಿಷಯವನ್ನು ಸಮಾಜ ನೋಡಿ ಅರಿತುಕೊಳ್ಳಬೇಕು ಎಂದರು.ಹಿರಿಯ ಪತ್ರಕರ್ತರಾದ ದಿನೇಶ್ ಅಮೀನ್ ಮಟ್ಟು ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಭಾರತದಲ್ಲಿ 140 ಕೋಟಿ ಭಾರತೀಯರಿಗೆ ಹಾಗೂ ಜಗತ್ತಿನ ಅರ್ಧದಷ್ಟಿರುವ ಮಹಿಳೆಯರಿಗೆ ಅಂತರರಾಷ್ಟ್ರೀಯ ಬುಕರ್ ಪ್ರಶಸ್ತಿ ಪುರಸ್ಕೃತರಾದ ಶ್ರೀಮತಿ ಬಾನು ಮುಷ್ತಾಕ್ ಹಾಗೂ ಶ್ರೀಮತಿ ದೀಪಾ ಭಾಸ್ತಿ ಅವರು ಹೆಮ್ಮೆ ತಂದು ಕೊಟ್ಟಿದ್ದಾರೆ. ಕನ್ನಡದ ಕತೆಗಳನ್ನು ಶ್ರೀಮತಿ ದೀಪಾ ಭಾಸ್ತಿ ಅವರು ಆಂಗ್ಲಬಾಷೆಗೆ "ಹಾರ್ಟ್ ಲ್ಯಾಂಪ್" ಹೆಸರಿನಲ್ಲಿ ಅನುವಾದಿಸಿ ಬುಕರ್ ಪ್ರಶಸ್ತಿ ಪಡೆಯುವ ಮೂಲಕ ಕನ್ನಡಕ್ಕೆ ಅಂತರರಾಷ್ಟ್ರೀಯ ಗೌರವ ತಂದು ಕೊಟ್ಟಿದ್ದಾರೆ. ಜಗತ್ತಿನ ಈ ಶ್ರೇಷ್ಠ ಪ್ರಶಸ್ತಿಯನ್ನು ಸಾಹಿತಿಗಳಿಗಿಂತ ಹೆಚ್ಚು ಸಂಭ್ರಮಿಸಿದವರು ಪತ್ರಕರ್ತರು. ಕಾರಣ ಇವರಿಬ್ಬರೂ ಮೂಲತಃ ಇಬ್ಬರೂ ಪತ್ರಕರ್ತರಾಗಿದ್ದವರು ಎಂದರು.ಸಾಹಿತಿಗಳಿಗೆ ತಮ್ಮ ಖಾಸಗಿ ಬದುಕಿಗಿಂತ ಸಾಹಿತ್ಯದ ಬದುಕು ದೊಡ್ಡದು. ಶ್ರೀಮತಿ ಬಾನು ಮುಷ್ತಾಕ್ ಅವರು ಬದುಕಿನ ಅಗ್ನಿಕುಂಡ ದಾಟಿ ಸಾಹಿತ್ಯ ರಚಿಸಿದ್ದಾರೆ. ಈ ರೀತಿ ಬರೆಯಲು ಅವರಿಗೆ ಮಾತ್ರ ಸಾಧ್ಯ. ಶಿಕ್ಷಕಿ, ಪತ್ರಕರ್ತೆ, ವಕೀಲೆ, ಹೋರಾಟಗಾರ್ತಿಯಾಗಿ ಹಲವಾರು ಅವತಾರ ಎತ್ತಿ ಬಂದಿದ್ದಾರೆ. ಅವರ ತಂದೆಗೆ ನಾವು ನಮಸ್ಕರಿಸಬೇಕು. ಯಾಕೆಂದರೆ ದಶಕಗಳ ಹಿಂದಿನ ಕಾಲದ ಕಟ್ಟುಪಾಡು ಸಂಪ್ರದಾಯವಿರುವ ಸಂದರ್ಭದಲ್ಲಿಯೆ ತಮ್ಮ ಮಗಳಿಗೆ ಉನ್ನತ ಶಿಕ್ಷಣ ನೀಡಿದ್ದಾರೆ. ನಾವು ನಮ್ಮ ಮನೆಯ ಮಹಿಳೆಯರಿಗೆ ಸ್ವಾತಂತ್ರ್ಯ ಕೊಡಲು ಸಾಧ್ಯವಾದಾಗ ಮಾತ್ರ ಬಾನು ಮುಷ್ತಾಕ್ ಅವರಿಗೆ ನಾವು ನಿಜವಾದ ಅಭಿನಂದನೆ ಸಲ್ಲಿಸಿದಂತಾಗುತ್ತದೆ. ಮಹಿಳೆಯರಿಗೆ ಬರೆಯಲು ಓದಲು ಬಿಟ್ಟರೆ, ಒಳ್ಳೆಯ ಹೆಂಡತಿ, ಮಗಳು ಆಗಲು ಸಾಧ್ಯ ಎಂಬುದನ್ನು ಸಮಾಜಕ್ಕೆ ತೋರಿಸಿ ಕೊಟ್ಟಿದ್ದಾರೆ ಎಂದರು.ಪ್ರೆಸ್ ಕ್ಲ???ನ ಪ್ರಧಾನ ಕಾರ್ಯದರ್ಶಿ ಶಿವಕುಮಾರ್ ಬೆಳ್ಳಿತಟ್ಟೆ ಅವರು ಮಾತನಾಡಿ, ಮಾದ್ಯಮ ಅಕಾಡೆಮಿಯು ಸರ್ಕಾರದ ಪ್ರಮುಖ ಅಂಗವಾಗಿದ್ದು. ಮಾಧ್ಯಮದವರ ಎಲ್ಲಾ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು, ಅವರಿಗೆ ಸೌಲಭ್ಯ ಒದಗಿಸುತ್ತಿದೆ. ಇಂದಿನ ಕಾರ್ಯಕ್ರಮ ಐತಿಹಾಸಿಕ ಕಾರ್ಯಕ್ರಮವಾಗಿದ್ದು, ವಿಶ್ವಕ್ಕೆ ಖ್ಯಾತಿ ತಂದು ಕೊಟ್ಟವರನ್ನು ಸನ್ಮಾನಿಸುತ್ತಿದ್ದೇವೆ. ಇವರಿಬ್ಬರೂ ಕನ್ನಡ ಸಾಹಿತ್ಯಕ್ಕೆ, ಪತ್ರಿಕೋದ್ಯಮಕ್ಕೆ, ದೇಶಕ್ಕೆ ತಂದಿರುವ ಕೀರ್ತಿ ತಂದಿದ್ದಾರೆ ಎಂದರು.ಇದೇ ಸಂದರ್ಭದಲ್ಲಿ ಅಂತರರಾಷ್ಟ್ರೀಯ ಬುಕರ್ ಪ್ರಶಸ್ತಿ ಪುರಸ್ಕೃತರಾದ ಶ್ರೀಮತಿ ಬಾನು ಮುಷ್ತಾಕ್ ಹಾಗೂ ಶ್ರೀಮತಿ ದೀಪಾ ಭಾಸ್ತಿ ಅವರನ್ನು ಹಾಗೂ ಕನ್ನಡದ ಪ್ರತಿಷ್ಠಿತ ಸುಧಾ ವಾರಪತ್ರಿಕೆಯ ನೂತನ ಸಂಪಾದಕರಾಗಿ ಆಯ್ಕೆಯಾಗಿರುವ ಶ್ರೀಮತಿ ಎಸ್.ರಶ್ಮಿ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಕರ್ನಾಟಕ ಮಾಧ್ಯಮ ಅಕಾಡೆಮಿಯ ಹಾಗೂ ಪ್ರೆಸ್ ಕ್ಲ???ನ ಸದಸ್ಯರುಗಳು, ಸಾಹಿತಿಗಳು, ಪತ್ರಕರ್ತರು, ಅನುವಾದಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕರ್ನಾಟಕ ಮಾಧ್ಯಮ ಅಕಾಡೆಮಿಯ ಕಾರ್ಯದರ್ಶಿ ಶ್ರೀಮತಿ ಎಂ ಸಹನಾ ಅವರು ಸ್ವಾಗತಿಸಿದರು.

# ಜಾತಿ ಗಣತಿ: ಕೇಂದ್ರ

ನಡೆಸಲಾಗುತ್ತದೆ. ಇದರೊಂದಿಗೆ ಜಾತಿ ಗಣತಿ ನಡೆಸಲು ನಿರ್ಧರಿಸಲಾಗಿದೆ.ಮಾರ್ಚ್ 2027ರ ಮೊದಲ ದಿನದಿಂದಲೇ ಗಣತಿ ಕಾರ್ಯ ಪ್ರಾರಂಭವಾಗಲಿದೆ. ಈ ಸಂಬಂಧ ಜನಗಣತಿ ಕಾಯ್ದೆ 1948ರ ಸೆಕ್ಷನ್ 3ರ ನಿಬಂಧನೆಯಂತೆ 16.06,2025 ರಂದು ತಾತ್ಕಾಲಿಕವಾಗಿ ಅಧಿಕೃತ ಗೆಜೆಟ್ ನಲ್ಲಿ ಪ್ರಕಟಿಸಲಾಗುವುದು ಎಂದು ಸಚಿವಾಲಯ ತಿಳಿಸಿದೆ.2011 ರಲ್ಲಿ ಕೊನೆಯ ಜನಗಣತಿಯನ್ನು ಎರಡು ಹಂತಗಳಲ್ಲಿ ನಡೆಸಲಾಗಿತ್ತು.

# 11 ಅಭಿಮಾನಿಗಳ ಸಾವು

ಅಸ್ವಸ್ಥಗೊಂಡಿದ್ದ ಓರ್ವ ಮಗು, ಆರು ಪುರುಷರು, ಮೂರು ಮಹಿಳೆಯರು ಸೇರಿದಂತೆ 11 ಮಂದಿ ಸಾವನ್ನಪ್ಪಿರುವುದಾಗಿ ತಿಳಿದುಬಂದಿದೆ.ಬೌರಿಂಗ್ ನಲ್ಲಿ ಆರು,ವೈದೇಹಿ ಆಸ್ಪತ್ರೆಯಲ್ಲಿ ನಾಲ್ವರು ಸಾವು: ಈ ಪೈಕಿ ಬೌರಿಂಗ್ ಹಾಗೂ ಲೇಡಿ ಕರ್ಜನ್ ಆಸ್ಪತ್ರೆಗೆ ರವಾನಿಸಲಾಗಿದ್ದ ಆರು ಮಂದಿ ಹಾಗೂ ವೈದೇಹಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ದಾಖಲಿಸಲಾಗಿದ್ದ ನಾಲ್ವರು ಮೃತಪಟ್ಟಿರುವುದಾಗಿ ತಿಳಿದುಬಂದಿದೆ. ಘಟನೆಯಲ್ಲಿ 20ಕ್ಕೂ ಹೆಚ್ಚು ಮಂದಿ ಅಸ್ವಸ್ಥಗೊಂಡಿದ್ದಾರೆ ಎನ್ನಲಾಗಿದೆ.16 ಜನರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಈ ಪೈಕಿ ಉಸಿರಾಟದ ಸಮಸ್ಯೆಯಿಂದ ಟೆಕ್ಕಿ ಸಹನಾ ಸೇರಿದಂತೆ ನಾಲ್ವರು ಮೃತಪಟ್ಟಿದ್ದಾರೆ. 12 ಜನರಿಗೆ ಚಿಕಿತ್ಸೆ ಮುಂದುವರೆದಿದೆ ಎಂದು ವೈದ್ಯೇಹಿ ಆಸ್ಪತ್ರೆ ವೈದ್ಯರಾದ ಡಾ. ಉಮೇರಾ ತಿಳಿಸಿದ್ದಾರೆ.ಏಕಾಏಕಿ ತಳ್ಳಾಟ, ನೂಕಾಟ:18, 19, ಮತ್ತು 20ನೇ ಗೇಟ್ ಓಪನ್ ಆಗುತ್ತಿದ್ದಂತೆ ಅಭಿಮಾನಿಗಳು ಏಕಾಏಕಿ ಒಳನುಗ್ಗಿದ್ದು, ತಳ್ಳಾಟ, ನೂಕುನುಗ್ಗಲು ಉಂಟಾಗಿದೆ.ಈ ವೇಳೆ ಒಬ್ಬರ ಮೇಲೆ ಮತ್ತೊರ್ವರು ಹತ್ತಲು ಪ್ರಯತ್ನಿಸಿದಾಗ ಕಾಲ್ತುಳಿತ ಉಂಟಾಗಿದೆ. ಪರಿಸ್ಥಿತಿಯನ್ನು ನಿಯಂತ್ರಿಸಲು ಪೊಲೀಸರು ಲಾಠಿ ಚಾರ್ಜ್ ನಡೆಸಿದ್ದಾರೆ.ಮೃತರ ಸಂಬಂಧಿಕರ ಆಕ್ರಂದನ:ಆರ್ ಸಿಬಿ ಆಟಗಾರರು ಆಗಮಿಸುವ ಗೇಟ್ ನಂಬರ್ 12 ರ ಬಳಿ ಅಪಾರ ಸಂಖ್ಯೆಯಲ್ಲಿ ಅಭಿಮಾನಿಗಳು ನೆರೆದಿದ್ದ ವೇಳೆ ಭಾರಿ ನೂಕು ನುಗ್ಗಲು ಉಂಟಾಗಿದೆ. ಈ ವೇಳೆ ಗಂಭೀರವಾಗಿ ಅಸ್ವಸ್ಥರಾಗಿದ್ದ ಮಹಿಳಾ ಅಭಿಮಾನಿಯನ್ನು ಕಾರಿನಲ್ಲಿ ಬೌರಿಂಗ್ ಆಸ್ಪತ್ರೆಗೆ ರವಾನಿಸಲಾಯಿತು. ಆದರೆ ಅವರು ಮೃತಪಟ್ಟಿರುವುದಾಗಿ ತಿಳಿದುಬಂದಿದೆ. ತನ್ನವರನ್ನು ಕಳೆದುಕೊಂಡ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ.ಇನ್ನೂ ಗೇಟ್ ನಂಬರ್ 6 ರ ಬಳಿ ಯುವಕನೋರ್ವ ಗೇಟ್ ಹತ್ತಲು ಹೋಗಿ ಕಾಲು ಮುರಿದುಕೊಂಡಿರುವುದಾಗಿ ವರದಿಯಾಗಿದೆ. ಭಾರಿ ಜನ ಹಾಗೂ ವಾಹನ ದಟ್ಟಣೆಯಿಂದಾಗಿ ಕ್ರೀಡಾಂಗಣದ ಸುತ್ತಮುತ್ತಲಿನ ರಸ್ತೆಗಳಲ್ಲಿ ಭಾರಿ ಟ್ರಾಫಿಕ್ ಜಾಮ್ ಉಂಟಾಗಿತ್ತು.

# 10 ಲಕ್ಷ ರೂ. ಪರಿಹಾರ:ಸಿಎಂ

ಮಾಡುವುದಿಲ್ಲ. ನಾನು ನ್ಯಾಯಾಂಗ ತನಿಖೆಗೆ ಆದೇಶಿಸಿದ್ದೇನೆ ಮತ್ತು 15 ದಿನಗಳ ಕಾಲಾವಕಾಶ ನೀಡಿದ್ದೇನೆ. ಜನರು ಕ್ರೀಡಾಂಗಣದ ಗೇಟ್‌ಗಳನ್ನು ಸಹ ಮುರಿದರು. ಹೀಗಾಗಿ ಕಾಲ್ತುಳಿತ ಸಂಭವಿಸಿದೆ. ಇಷ್ಟೊಂದು ದೊಡ್ಡ ಜನಸಂದಣಿಯನ್ನು ಯಾರೂ ನಿರೀಕ್ಷಿಸಿರಲಿಲ್ಲ. ಕ್ರೀಡಾಂಗಣವು ಕೇವಲ 35,000 ಜನರ ಸಾಮರ್ಥ್ಯವನ್ನು ಹೊಂದಿದೆ, ಆದರೆ 2–3 ಲಕ್ಷ ಜನರು ಬಂದಿದ್ದರು ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.ಬೌರಿಂಗ್ ಆಸ್ಪತ್ರೆಯಲ್ಲಿ ದಾಖಲಾಗಿದ್ದ 19 ಗಾಯಾಳುಗಳ ಪೈಕಿ 7 ಜನ ಮೃತಪಟ್ಟರೆ, ವೈದೇಹಿ ಆಸ್ಪತ್ರೆಯಲ್ಲಿ ದಾಖಲಾಗಿದ್ದ 8 ಜನ ಗಾಯಾಳುಗಳ ಪೈಕಿ ನಾಲ್ವರು ಮೃತಪಟ್ಟಿದ್ದಾರೆ. ಈ ಸುದ್ದಿ ತಿಳಿಯುತ್ತಿದ್ದಂತೆ ಬೌರಿಂಗ್ ಹಾಗೂ ವೈದೇಹಿ ಆಸ್ಪತ್ರೆಗೆ ಭೇಟಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಗೃಹ ಸಚಿವ ಜಿ.ಪರಮೇಶ್ವರ್? ಅವರು ಗಾಯಾಳುಗಳ ಆರೋಗ್ಯ ವಿಚಾರಿಸಿದರು.ಸೂಕ್ತ ಭದ್ರತೆ ಒದಗಿಸಲು ಆಡಳಿತಕ್ಕೆ ಸಿಎಂ ಸೂಚನೆ

# ಜೂ. 10 ರಂದು ಕಲಬುರಗಿ ತಾಲೂಕು ಪಂಚಾಯತ್ ಸಾಮಾನ್ಯ ಸಭೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.4:ಕಲಬುರಗಿ ತಾಲೂಕು ಪಂಚಾಯತ್‌ನ ಸಾಮಾನ್ಯ ಸಭೆಯು ಇದೇ ಜೂನ್ 10 ರಂದು ಬೆಳಿಗ್ಗೆ 11 ಗಂಟೆಗೆ ಕಲಬುರಗಿ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಜರುಗಲಿದೆ ಎಂದು ಕಲಬುರಗಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕಅಧಿಕಾರಿಗಳು ತಿಳಿಸಿದ್ದಾರೆ. ಈ ಸಭೆಯು ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಹಾಗೂ ಕಲಬುರಗಿ ತಾಲೂಕು ಪಂಚಾಯತ್ ಆಡಳಿತಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜರುಗಲಿದ್ದು, ಮೇಲ್ಕಂಡ ದಿನದಂದು ಈ ಸಭೆಗೆ ಕಲಬುರಗಿ ತಾಲೂಕು ಎಲ್ಲಾ ಅನುಷ್ಠಾನ ಅಧಿಕಾರಿಗಳು ತಮ್ಮ ಇಲಾಖೆಯ ಪ್ರಗತಿ ವರದಿಯೊಂದಿಗೆ ಖುದ್ದಾಗಿ ಹಾಜರಾಗಬೇಕೆಂದು ಅವರು ತಿಳಿಸಿದ್ದಾರೆ.

# ವಿದ್ಯಾರ್ಥಿಗಳ ಉಚಿತ/ರಿಯಾಯಿತಿ ಬಸ್‌ಪಾಸ್‌ಗಾಗಿ ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.4:ಪ್ರಸಕ್ತ 2025–26ನೇ ಸಾಲಿನ ವಿದ್ಯಾರ್ಥಿಗಳ ಉಚಿತ/ರಿಯಾಯಿತಿ ಬಸ್‌ಪಾಸ್‌ಗಾಗಿ ಅರ್ಹ ವಿದ್ಯಾರ್ಥಿಗಳು ಸೇವಾಸಿಂಧು ಪೋರ್ಟಲ್‌ದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕೆಂದು ಕಲಬುರಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಭಾಗ–1ರ ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

ವಿದ್ಯಾರ್ಥಿಗಳು<https://sevasindhuservices.karnataka.gov.in/bus-passservices>ವೆಬ್‌ಸೈಟ್ ನಲ್ಲಿ ಕಲಬುರಗಿ ವಿಭಾಗ–1ರ ವ್ಯಾಪ್ತಿಯಲ್ಲಿ ಬರುವ ಘಟಕ ಹಾಗೂ ಪಾಸ್ ವಿತರಿಸುವ ಬಿಂದುಗಳನ್ನು ಆಯ್ಕೆ ಮಾಡಿ ಅರ್ಜಿ ಸಲ್ಲಿಸಿ ಈ ಕೆಳಕಂಡ ಕೆ–1 ಕೇಂದ್ರಗಳಲ್ಲಿ ನಿಗದಿತ ಬಸ್‌ಪಾಸ್ ದರ ಪಾವತಿಸಿ ಬಸ್‌ಪಾಸ್ ಮುದ್ರಿಸಿಕೊಳ್ಳಬಹುದಾಗಿದೆ.

ಕಲಬುರಗಿ ಘಟಕ–1ಕ್ಕೆ ಸಂಬಂಧಿಸಿದ ವಿದ್ಯಾರ್ಥಿಗಳು ಕಲಬುರಗಿಯ ರಾಷ್ಟ್ರಪತಿ ಚೌಕ ಹಾಗೂ ಖರ್ಗೆ ಪೆಟ್ರೋಲ್ ಪಂಪ್ ಬಿಂದು ಆಯ್ಕೆ ಮಾಡಿಕೊಳ್ಳಬೇಕು. ನಂತರ ವಿದ್ಯಾರ್ಥಿಗಳು ಕಲಬುರಗಿ ಮಿನಿ ವಿಧಾನಸೌಧದಲ್ಲಿನ ಕೆ–1 ಕೇಂದ್ರದಲ್ಲಿ ಬಸ್‌ಪಾಸ್ ಮುದ್ರಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಸಾರಿಗೆ ನಿಯಂತ್ರಕ ಇಬ್ರಾಹಿಂ–9611792140ಹಾಗೂ ಹಣಮಂತ–8197034666 ಇವರನ್ನು ಸಂಪರ್ಕಿಸಬೇಕು.

ಕಲಬುರಗಿ ಘಟಕ–4ಕ್ಕೆ ಸಂಬಂಧಿಸಿದ ವಿದ್ಯಾರ್ಥಿಗಳು ಕಲಬುರಗಿ ಎಸ್.ಟಿ.ಬಿ.ಟಿ. ಬಸ್ ನಿಲ್ದಾಣ, ಗುಲಬರ್ಗಾ ವಿಶ್ವವಿದ್ಯಾಲಯ, ರೈಲು ನಿಲ್ದಾಣ ಬಸ್ ನಿಲ್ದಾಣ ಹಾಗೂ ಸೂಪರ ಮಾರ್ಕೆಟ್ ಬಸ್ ನಿಲ್ದಾಣದ ಬಿಂದು ಆಯ್ಕೆ ಮಾಡಿಕೊಳ್ಳಬೇಕು. ನಂತರ ವಿದ್ಯಾರ್ಥಿಗಳು ಸೇಡಂ ರಿಂಗ್ ರಸ್ತೆಹತ್ತಿರದ ಕೆಎಚ್‌ಬಿ ಕಾಂಪ್ಲೇಕ್ಸ್ ಕೆ–1 ಕೇಂದ್ರ, ಮಿನಿವಿಧಾನ ಸೌಧ ಕೆ–1 ಕೇಂದ್ರ ಹಾಗೂ ಮಹಾನಗರಪಾಲಿಕೆ ಕೆ–1 ಕೇಂದ್ರ ಇಲ್ಲಿ ಬಸ್‌ಪಾಸ್ ಮುದ್ರಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಸಾರಿಗೆ ನಿಯಂತ್ರಕರಾದ ಶರಣಮ್ಮ–9686812466, ಶ್ರೀಮಂತ–9972898325, ಮಹಮ್ಮದಸಾಬ್–6361177933, ಭಾರತಿ–8884516009 ಹಾಗೂ ಕಾಂಚನಾ–8123047073 ಗಳಿಗೆ ಸಂಪರ್ಕಿಸಬೇಕು.

ಚಿಂಚೋಳಿ ಘಟಕಕ್ಕೆ ಸಂಬಂಧಿಸಿದ ವಿದ್ಯಾರ್ಥಿಗಳು ಚಿಂಚೋಳಿ ಬಸ್ ನಿಲ್ದಾಣ ಬಿಂದು ಆಯ್ಕೆ ಮಾಡಿಕೊಳ್ಳಬೇಕು. ನಂತರ ಚಿಂಚೋಳಿ ಚಂದಾಪೂರದ ಕೆ–1 ಕೇಂದ್ರ ಇಲ್ಲಿ ಬಸ್‌ಪಾಸ್ ಮುದ್ರಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಸಾರಿಗೆ ನಿಯಂತ್ರಕ ಕಲಮೇಶ–6362884028 ಇವರನ್ನು ಸಂಪರ್ಕಿಸಬೇಕು.

ಚಿತ್ತಾಪೂರ ಘಟಕಕ್ಕೆ ಸಂಬಂಧಿಸಿದಂತೆ ವಿದ್ಯಾರ್ಥಿಗಳು ಚಿತ್ತಾಪೂರ ಬಸ್ ನಿಲ್ದಾಣ ಮತ್ತು ಶಹಾಬಾದ ಬಸ್ ನಿಲ್ದಾಣ ಬಿಂದು ಆಯ್ಕೆ ಮಾಡಿಕೊಳ್ಳಬೇಕು. ನಂತರ ವಿದ್ಯಾರ್ಥಿಗಳು ಚಿತ್ತಾಪೂರ ಕೆ–1 ಕೇಂದ್ರ ಮತ್ತು ಶಹಾಬಾದ ಕೆ–1 ಕೇಂದ್ರ ಇಲ್ಲಿ ಬಸ್‌ಪಾಸ್‌ನ್ನು ಮುದ್ರಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಸಾರಿಗೆ ನಿಯಂತ್ರಕರಾದ ಅನಸೂಯಾ–7676205526 ಮತ್ತು ಶಾಂತಾಬಾಯಿ ಇವರನ್ನು ಸಂಪರ್ಕಿಸಬೇಕು.

ಸೇಡಂ ಘಟಕಕ್ಕೆ ಸಂಬಂಧಿಸಿದಂತೆ ವಿದ್ಯಾರ್ಥಿಗಳು ಸೇಡಂ ಬಸ್ ನಿಲ್ದಾಣ ಬಿಂದು ಆಯ್ಕೆ ಮಾಡಿಕೊಳ್ಳಬೇಕು. ನಂತರ ವಿದ್ಯಾರ್ಥಿಗಳು ಸೇಡಂ ಕೆ–1 ಕೇಂದ್ರದಲ್ಲಿ ಬಸ್‌ಪಾಸ್‌ನ್ನು ಮುದ್ರಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಸಾರಿಗೆ ನಿಯಂತ್ರಕ ರಾಜೇಂದ್ರ–8073612310 ಇವರನ್ನು ಸಂಪರ್ಕಿಸಬೇಕು.

ಕಾಳಗಿ ಘಟಕಕ್ಕೆ ಸಂಬಂಧಿಸಿದಂತೆ ವಿದ್ಯಾರ್ಥಿಗಳು ಕಾಳಗಿ ಬಸ್ ನಿಲ್ದಾಣ ಬಿಂದು ಆಯ್ಕೆ ಮಾಡಿಕೊಳ್ಳಬೇಕು. ನಂತರ ವಿದ್ಯಾರ್ಥಿಗಳು ಕಾಳಗಿ ಕೆ–1 ಕೇಂದ್ರದಲ್ಲಿ ಬಸ್‌ಪಾಸ್ ಮುದ್ರಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಸಾರಿಗೆ ನಿಯಂತ್ರಕ ದೇವಿದಾಸ–8095454473 ಇವರನ್ನು ಸಂಪರ್ಕಿಸಬೇಕು. ವಿದ್ಯಾರ್ಥಿಗಳು ಇದರ ಸದುಪಯೋಗಪಡಿಸಿಕೊಳ್ಳಬೇಕೆಂದು ಅವರು ತಿಳಿಸಿದ್ದಾರೆ.

# ಮಕ್ಕಳ ಮೇಲೆ ಪುಷ್ಪ ಸುರಿದು ಶಾಲಾ ಪ್ರಾರಂಭೋತ್ಸವ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜೂ.4:ಡಾ॥ ಚನ್ನಬಸವ ಪಟ್ಟದ್ದೇವರು ಪ್ರೌಢ ಶಾಲೆ ಹಾಗೂ ಶ್ರೀ ಗುರಪ್ಪ ಟೊಣ್ಣೆ ಪ್ರಾಥಮಿಕ ಶಾಲೆ ಕಮಲನಗರದಲ್ಲಿ 2025–26ನೇ ಸಾಲಿನ ಶಾಲಾ ಪ್ರಾರಂಭೋತ್ಸವವನ್ನು ಅತಿ ವಿಜ್ರಂಭಣೆಯಿಂದ ಆಚರಿಸಿ ಮಕ್ಕಳ ಮೇಲೆ ಪುಷ್ಪವನ್ನು ಸುರಿಸಿ ಸಿಹಿ ತಿನಿಸುವುದರ ಮೂಲಕ ಮಕ್ಕಳನ್ನು ಶಾಲೆಗೆ ಬರಮಾಡಿಕೊಳಲಾಯಿತು.ಶಾಲಾಮಕ್ಕಳಿಂದ ಘೋಷಣೆಕೂಗುತ್ತಶೈಕ್ಷಣಿಕಜಾಗ್ರತಿ ಜಾಥಾ ಪ್ರಯುಕ್ತ ಕಮಲನಗರ ಪಟ್ಟಣದ ತುಂಬ ಪಥಸಂಚಲನೆ ನಡೆಯಿತು ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿರುವ ಕಮಲನಗರದ ಸಿ.ಪಿ.ಐ ಅಡ್ಡೆಪ್ಪ ಬನ್ನಿ ಮಾತನಾಡಿ ಮಕ್ಕಳಿಗೆ ಕಾನೂನಿನ ಅರಿವು ಹಾಗೂ ಪೋಲಿಸರು ನೀಡುವ ರಕ್ಷಣೆ ಬಗ್ಗೆ ತಿಳಿಸಿದರು ಕಾರ್ಯಕ್ರಮದ ಇನ್ನೋರ್ವ ಅತಿಥಿಗಳಾದ ಶಂಭುಲಿಂಗ ಕಾಮಣ್ಣ ಮಾತನಾಡಿ ಮಕ್ಕಳಿಗೆ ಮೌಲ್ಯ ಶಿಕ್ಷಣದ ಕುರಿತು ಅನೇಕ ದೃಷ್ಟಾಂತಗಳು ಮತ್ತು ಕಥೆಗಳ ಮೂಲಕ ತಿಳಿ ಹೇಳಿದರು. ಕಾರ್ಯಕ್ರಮದ ದಿವ್ಯ ಸನ್ನಿಧಾನವನ್ನು ವಹಿಸಿದ ಸಂಸ್ಥೆಯ ಕಾರ್ಯದರ್ಶಿಗಳಾದ ಪೂಜ್ಯ ಮಾಹಾಲಿಂಗ ಮಹಾಸ್ವಾಮಿಗಳು ಶಿಕ್ಷಣ ಕ್ಷೇತ್ರಕ್ಕೆ ಡಾ॥ ಚನ್ನಬಸವ ಪಟ್ಟದ್ದೇವರ ಕೊಡುಗೆಯನ್ನು ಸ್ಮರಿಸಿದರು ಶಾಲೆಯ ಆಡಳಿತಾಧಿಕಾರಿಗಳಾದ ಚನ್ನಬಸವ ಫಾಳೆಯವರು ಪ್ರಾಸ್ತಾವಿಕವಾಗಿ ಮಾತನಾಡಿದರು

ಕ್ರಾರ್ಯಕ್ರಮದಲ್ಲಿ ಕಮಲನಗರದ ಪಿ.ಡಿ.ಒ ರಾಜಕುಮಾರ ತಂಬಾಕೆ, ಕಮಲನಗರ ಪಿ.ಎಸ್.ಐ. ಚಂದ್ರಶೇಖರ ನಿರ್ಣಾ, ಪ್ರಶಾಂತ ರಡ್ಡಿ, ಜಗನಾಥ ಚಿಟ್ಮೆ, ಪ್ರಾಂಶುಪಾಲರಾದ ಶ್ರೀನಿಲಕಂಠ ಪಾಂಡ್ರೆ ಶಾಲೆಯ ಶಿಕ್ಷಕರಾದ ರಾಜೇಶ್ರೀ ಬಿರಾದರ, ಪಲ್ಲವಿ ನಾಯ್ಕು, ಪೂಜಾ ಬಿರಾದರ, ನಿಚಲಿಂಗಯ್ಯ ಸ್ವಾಮಿ, ರಾಗಿಣಿ ಮಹೇಶ ದೇಶಮುಖ, ಮತ್ತು ಸಿಬ್ಬಂಧಿ ವರ್ಗ ಉಪಸ್ಥಿತರಿದ್ದರು ಭರತ ನಂದನವರೆ ಸ್ವಾಗತಿಸಿದರು

ಶಾಲೆಯ ಶಿಕ್ಷಕಿಯಾದ ಶ್ರೀಮತಿ ಅರ್ಚನಾ ಮುಚಳಂಬೆ ಹಾಗೂ ಹಾವಗಿರಾವ ಮಠಪತಿ ನಿರುಪಿಸಿ ವಂದಿಸಿದರು.

# ಗ್ಯಾರಂಟಿ ಸರ್ಕಾರಕ್ಕೆ ಎರಡು ವರ್ಷದ ಸಂಭ್ರಮ:

## ಮಾಹಿತಿ ಮಳಿಗೆ ಉದ್ಘಾಟಿಸಿದ ಸಚಿವ ಡಾ.ಶರಣಪ್ರಕಾಶ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.4:ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಕಲಬುರಗಿ ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಬುಧವಾರ ಆಯೋಜಿಸಿದ ರಾಜ್ಯ ಸರ್ಕಾರದ ಎರಡು ವರ್ಷಗಳ ಸಾಧನೆ ಬಿಂಬಿಸುವ ಮಾಹಿತಿ ಮಳಿಗೆ ಪ್ರದರ್ಶನವನ್ನು ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ ಅವರು ಉದ್ಘಾಟಿಸುವರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ರಾಜ್ಯ ಸರ್ಕಾರ ನಾಡಿನ 7 ಕೋಟಿ ಜನರ ಬದುಕು ಗಟ್ಟಿಗೊಳಿಸಲು ಪಂಚ ಗ್ಯಾರಂಟಿ ಯೋಜನೆ ಜಾರಿಗೆ ತಂದಿದೆ. ಚುನಾವಣೆ ಪೂರ್ವ ನೀಡಿದ ಭರವಸೆಯಂತೆ 5 ಗ್ಯಾರಂಟಿ ಯೋಜನೆ ಅನುಷ್ಠಾನಕ್ಕೆ ತರಲಾಗಿದೆ. ವಿರೋಧ ಪಕ್ಷಗಳು ಸುಖಾ ಸುಮ್ಮನೆ ಆರೋಪ ಮಾಡುವುದನ್ನು ಬಿಟ್ಟು ವಾಸ್ತಾವಂಶ ನೋಡಿ ಮಾತನಾಡಬೇಕು ಎಂದ ಅವರು, ಈ ಯೋಜನೆಗಳು ನಾಡಿನ ಜನರರಿಗೆ ಭರವಸೆಯ ಬೆಳಕಾಗಿವೆ ಎಂದರು.

ಕಳೆದ ಎರಡು ವರ್ಷದಲ್ಲಿ ಕೃಷಿ, ಆರೋಗ್ಯ, ಮೂಲಸೌಕರ್ಯ, ವಸತಿ ಕ್ಷೇತ್ರದಲ್ಲಿ ಸಾಧನೆ, ಅನ್ನದಾತನ ಮೊಗದಲ್ಲಿ ಮಂದಹಾಸ ಮೂಡಿಸುವಂತೆ ರೈತಾಪಿ ವರ್ಗಕ್ಕೆ ಯೋಜನೆಗಳು, ಹಿಂದುಳಿದದವರ ಕಲ್ಯಾಣ ಸೇರಿದಂತೆ ಸಾಧನೆ ಪ್ರತಿಬಿಂಬ ಹಾಗೂ ಪಂಚ ಗ್ಯಾರಂಟಿ ಯೋಜನೆಗಳಿಂದ ಜನರಿಗಾದ ಅನುಕೂಲ, ಪಲಾನುಭವಿಗಳ ಅಭಿಪ್ರಾಯ, ಸರ್ಕಾರ ಇದಕ್ಕೆ ಭರಿಸಿದ ಹಣ ಹೀಗೆ ಸಮಗ್ರ ಮಾಹಿತಿಯನ್ನು ಈ ಮಳಿಗೆ ಹೊಂದಿದೆ. ಮುಖ್ಯಮಂತ್ರಿ ಮತ್ತು ಉಪ ಮುಖ್ಯಮಂತ್ರಿಗಳ ಸಂದೇಶದೊಂದಿಗೆ ಸಾರ್ಥಕ ಸಂಭ್ರಮದ "ಪ್ರಗತಿಯತ್ತಕರ್ನಾಟಕ" ಬಿಂಬಿಸುವ ಈ ಮಾಹಿತಿ ಮಳಿಗೆಗೆ ಸಾರ್ವಜನಿಕರು, ಪ್ರಯಾಣಿಕರು ಭೇಟಿ ನೀಡಿ ವೀಕ್ಷಿಸಬೇಕೆಂದರು.

ಗೃಹ ಲಕ್ಷ್ಮೀ ಹಣ ಸಕಾಲದಲ್ಲಿ ತಲುಪಿತಿಲ್ಲ ಎಂಬ ಪತ್ರಕರ್ತರ ಪ್ರಶ್ನೆಗೆ ಪ್ರತಿ ಮಾಹೆ 2,000 ರೂ. ನೀಡುವುದಾಗಿ ವಾಗ್ದಾನ ಮಾಡಿದ್ದು, ಅದರಂತೆ ಹಣ ಮಹಿಳೆಯರ ಖಾತೆಗೆ ಜಮೆ ಮಾಡಲಾಗುತ್ತದೆ.10–15 ದಿನ ತಡವಾದರೆ ಯೋಜನೆ ಅಸಫಲ ಎನ್ನುವುದು ತಪ್ಪು. ಅರ್ಥಿಕ ಇತಿಮಿತಿ ನೋಡಿಕೊಂಡು ಸರ್ಕಾರ ಕಾರ್ಯನಿರ್ವಹಿಸಬೇಕಾಗುತ್ತದೆ. ಎರಡು ವರ್ಷ ಸಮರ್ಪಕವಾಗಿ ಅನುಷ್ಠಾನ ಮಾಡಿದ್ದೇವೆ. ಮುಂದಿನ ಮೂರು ವರ್ಷ ಸಹ ಯೋಜನೆ ಜಾರಿಯಲ್ಲಿರಲಿವೆ ಎಂದು ಸಚಿವ ಡಾ.ಶರಣಪ್ರಕಾಶ ಪಾಟೀಲ ಸ್ಪಷ್ಟಪಡಿಸಿದರು.

ಬಸವಣ್ಣನ ತತ್ವದ ಮೇಲೆ ಸರ್ಕಾರ ಕಾರ್ಯನಿರ್ವಹಣೆ: ರಾಜ್ಯ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಕಲಬುರಗಿ ವಿಭಾಗದ ಉಪಾಧ್ಯಕ್ಷ ಎಸ್.ಆರ್.ಮೆಹರೋಜ್ ಖಾನ್ ಮಾತನಾಡಿ, ಬಸವಣ್ಣನವರ ತತ್ವ, ಗಾಂಧೀಜಿಯ ಕನಸು ಮತ್ತು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಸಿದ್ದಾಂತದ ಮೇಲೆ ರಾಜ್ಯ ಸರ್ಕಾರ ನಾಡಿನ ಜನರ ಒಳಿತಿಗೆ ಗ್ಯಾರಂಟಿ ಯೋಜನೆಗಳು ರೂಪಿಸಿ ಅನುಷ್ಠಾನಕ್ಕೆ ತಂದಿದೆ. ಇಂತಹ ಒಂದು ಅಪೂರ್ವ ಮಾಹಿತಿ ನೀಡುವ ಮಳಿಗೆ ವೀಕ್ಷಣೆಗೆ ಮುಕ್ತವಾಗಿ ಅವಕಾಶ ಮಾಡಿಕೊಟ್ಟ ವಾರ್ತಾ ಇಲಾಖೆಯ ಕಾರ್ಯಕ್ಕೆ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಇದೇ ಸಂದರ್ಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಹೊರತರಲಾದ ಪಂಚ ಗ್ಯಾರಂಟಿ ಪ್ರಗತಿ ಕಿರುಹೊತ್ತಿಗೆಯನ್ನು ಸಾರ್ವಜನಿಕರಿಗೆ ವಿತರಿಸಲಾಯಿತು.

ಜೂನ್ 10ರ ವರೆಗೆ ಮಳಿಗೆ ಓಪನ್: ಇದೇ ಜೂನ್ 4 ರಿಂದ 10ರ ವರೆಗೆ ಮಾಹಿತಿ ಮಲಿಗೆ ಜನರ ವೀಕ್ಷಣೆಗೆ ಮುಕ್ತವಾಗಿರಲಿದೆ. ಬೆಳಿಗ್ಗೆ 8 ಗಂಟೆಯಿಂದ ರಾತ್ರಿ 8 ಗಂಟೆವರೆಗೂ ಸಾರ್ವಜನಿಕರು, ಪ್ರಯಾಣಿಕರು ವೀಕ್ಷಿಸಬಹುದಾಗಿದೆ.

ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರಿ, ಉಪಾಧ್ಯಕ್ಷ ಸೋಮಶೇಖರ ಹಿರೇಮಠ, ನರಸಿಂಹಲು, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಕೆ.ಕೆ.ಆರ್.ಟಿ.ಸಿ ವ್ಯವಸ್ಥಾಪಕ ನಿರ್ದೇಶಕ ಎಂ.ರಾಚಪ್ಪ, ಕಲಬುರಗಿ ವಿಭಾಗ–2ರ ನಿಯಂತ್ರಣಾಧಿಕಾರಿ ಎಸ್.ಜಿ.ಗಂಗಾಧರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಡಿ.ಕೆ.ರಾಜರತ್ನ, ರವಿ ಮಿರಸ್ಕರ್, ಉಮಾಶಂಕರ ಚಿನಮಳ್ಳಿ, ಸೈಯದ್ ಇಸ್ಮಾಯಿಲ್ ಪಾಶಾ, ನರಸಿಂಹ, ಅಶೋಕ ಸೇರಿದಂತೆ ಮತ್ತಿತರರು ಇದ್ದರು.

# ಶಾಂತಿಯುತವಾಗಿ ಬಕ್ರೀದ್ ಆಚರಿಸಿ:– ಶ್ರೀನಿವಾಸ ಅಲ್ಲಾಪುರ್

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ತ್ಯಾಗಬಲಿದಾನದ ಸಂಕೇತವಾದ ಬಕ್ರೀದ್ ಹಬ್ಬವನ್ನು ಶಾಂತಿಯುತವಾಗಿ ಆಚರಿಸಿ ಮತ್ತೊಬ್ಬರಿಗೆ ಮಾದರಿಯಾಗಿ. ಯಾವುದೇ ಹಬ್ಬ ಸಂಭ್ರಮದಿಂದ ಕೂಡಿರಬೇಕೇ ಹೊರತು ಸಮಾಜದ ಸ್ವಾಸ್ಥ್ಯ ಕೆಡಿಸುವಂತೆ ಇರಬಾರದು' ಎಂದು ಸಿಪಿಐ ಶ್ರೀನಿವಾಸ ಅಲ್ಲಾಪುರ್ ಹೇಳಿದರು. ಬಕ್ರೀದ್ ಹಬ್ಬದ ಪ್ರಯುಕ್ತ ಪಟ್ಟಣ ಪೊಲೀಸ್ ಠಾಣೆ ಆವರಣದಲ್ಲಿ ಬುಧವಾರ ನಡೆದ ಶಾಂತಿ ಸಭೆಯಲ್ಲಿ ಅವರು ಮಾತನಾಡಿದರು. ಕೆಲಸ ಕಾರ್ಯಗಳ ಬಗ್ಗೆ ಜಾಗರೂಕರಾಗಿ ಇರಬೇಕು. ಯಾವುದೇ ಕಾರಣಕ್ಕೂ ಧಾರ್ಮಿಕ ಕೆಲಸ ಕಾರ್ಯಗಳಿಗೆ ಧಕ್ಕೆ ಆಗದಂತೆ ನಡೆದುಕೊಳ್ಳಬೇಕು' ಎಂದು ಸಲಹೆ ನೀಡಿದರು. ಪಿಎಸ್ಐ ಬಾಷುಮಿಯಾ



ಕೊಂಚೂರ್ ಮಾತನಾಡಿ, ಸಮಾಜದಲ್ಲಿ ಶಾಂತಿಯನ್ನು ಅಶಾಂತಿ ಮೂಡಿಸುವವರನ್ನು ಇಲಾಖೆ ಬಿಡುವುದಿಲ್ಲ. ಪೊಲೀಸ್ ಇಲಾಖೆ ಎಲ್ಲಾ ಸಮಾಜದೊಂದಿಗೆ ಉತ್ತಮ ಬಾಂಧವ್ಯ ಹೊಂದಿದೆ, ಒಳ್ಳೆಯ ಸಮಾಜವನ್ನು ನಿರ್ಮಾಣ ಮಾಡಲು ಸಾರ್ವಜನಿಕರು ಇಲಾಖೆಗೆ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು. ಕೆಲ ಪ್ರಮುಖರು ಶಾಂತಿ ಸಭೆ ಉದ್ದೇಶಿಸಿ ಮಾತನಾಡಿದರು. ಈ ಸಂದರ್ಭದಲ್ಲಿ ಪುರಸಭೆ ಸದಸ್ಯರು, ಪಟ್ಟಣದ ಪ್ರಮುಖರು ಹಾಗೂ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳ ಪ್ರಮುಖರು, ಪೊಲೀಸ್ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು. ವಿಜಯಕುಮಾರ್ ಬರ್ಮಾ ನಿರೋಪಿಸಿದರು. ಕ್ರೈಂ ಪಿಎಸ್ಐ ಶಿವರಾಜ ವಂದಿಸಿದರು.

# ಅರುಣ ಕಲ್ಯಾಣರಾವ ಅವರಿಗೆ ಅಂಬೇಡ್ಕರ್ ರತ್ನ ಪ್ರಶಸ್ತಿಯ ಗರಿ

ಮಲ್ಲಮ್ಮ ನುಡಿ ವಾರ್ತೆ

ಸೇಡಂ, ಜು. 04. ಸಿರಿಗನ್ನಡ ವೇದಿಕೆ, ಜಿಲ್ಲಾ ಘಟಕ ಕಲಬುರ್ಗಿ ಬುದ್ಧ–ಬಸವ–ಅಂಬೇಡ್ಕರ ವಿಶೇಷ ಉಪನ್ಯಾಸ ಮತ್ತು ರಾಜ್ಯಮಟ್ಟದ ತ್ರಿರತ್ನ ಪ್ರಶಸ್ತಿ ಪ್ರಧಾನ. ಅಂಬೇಡ್ಕರ ತ್ರಿರತ್ನ ಪ್ರಶಸ್ತಿ. ಅರುಣ ಕಲ್ಯಾಣ ರಾವ ಇವರು ಬೀದರ ಜಿಲ್ಲೆಯವರು ಪ್ರಸ್ತುತ ಸರಕಾರಿ ಪ್ರಥಮ ದರ್ಜೆ ಕಾಲೇಜು ಸೇಡಂನಲ್ಲಿ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ, ರಾಜ್ಯ ರಾಷ್ಟ್ರಮಟ್ಟದ ವಿಚಾರ ಸಂಕೀರ್ಣಗಳಲ್ಲಿ ಭಾಗವಹಿಸಿದ್ದಾರೆ. ಸ್ನೇಹಜೀವಿಯಾದ ಇವರು ಸಮಾಜ, ನಾಡು–ನುಡಿ, ಭಾಷೆ, ಜೀವಪರ, ಜನಪರ ಪ್ರಗತಿಪರ ಕಾಳಜಿ ಉಳ್ಳವರಾಗಿದ್ದಾರೆ. ಬುದ್ಧ, ಬಸವ, ಕನಕದಾಸ, ಜ್ಯೋತಿ ಬಾ ಪುಲೆ, ಡಾ. ಬಿ.ಆರ್.ಅಂಬೇಡ್ಕರ ಅವರ ವಿಚಾರಧಾರೆಗಳನ್ನು ಮತ್ತು ಶರಣರ ಕಾಯಕ ತತ್ವವನ್ನು ಮೈಗೂಡಿಸಿಕೊಂಡಿದ್ದಾರೆ.



ಇವರ ಶೈಕ್ಷಣಿಕ ಸಾಧನೆ ಮತ್ತು ಸಾರ್ವಜನಿಕ ಸೇವೆಯನ್ನು ಪರಿಗಣಿಸಿ ಸಿರಿಗನ್ನಡ ವೇದಿಕೆ ಜಿಲ್ಲಾ ಘಟಕ ಕಲಬುರ್ಗಿಯ ರಂಗಾಯಣ ಸಭಾಭವನದಲ್ಲಿ ದಿನಾಂಕ 01–06–2025, ಬೆಳಿಗ್ಗೆ 10:30 ನಿಮಿಷಕ್ಕೆ ಬುದ್ಧ–ಬಸವ–ಅಂಬೇಡ್ಕರ ಜಯಂತಿ ಪ್ರಯುಕ್ತ ಏರ್ಪಡಿಸಿದ ತ್ರಿ ರತ್ನ ಪ್ರಶಸ್ತಿ ಸಮಾರಂಭದಲ್ಲಿ ರಾಜ್ಯಮಟ್ಟದ ಅಂಬೇಡ್ಕರ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

## ಕಳ್ಳಭಟ್ಟಿ ಸಾರಾಯಿ ಮತ್ತು ಅಕ್ರಮ ಸೇಂದಿ ಸಂಗ್ರಹ ಮಾರಾಟ ತಡೆಗಟ್ಟಲು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಅಧಿಕಾರಿಗಳಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಜೂನ್. 04– ಕಳ್ಳಭಟ್ಟಿ ಸಾರಾಯಿ ಮತ್ತು ನಕಲಿ ಮದ್ಯ, ಅಕ್ರಮ ಸೇಂದಿ ಸಂಗ್ರಹ ಮತ್ತು ಮಾರಾಟವನ್ನು ತಡೆಗಟ್ಟಲು ಪ್ರತಿಯೊಬ್ಬ ಅಧಿಕಾರಿಯು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಅಧಿಕಾರಿಗಳಿ ಸೂಚನೆ ನೀಡಿದರು.

ಬುಧುವಾರದಂದು ಜಿಲ್ಲಾಧಿಕಾರಗಳ ಸಭಾಂಗಣದಲ್ಲಿ ನಡೆದ ಜಿಲ್ಲೆಯಲ್ಲಿ ಅಕ್ರಮವಾಗಿ ಕಳ್ಳಭಟ್ಟಿ ಸಾರಾಯಿ ಕಲಬೆರಿಕೆ ಹಾಗೂ ಮಾರಾಟವನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ರಚಿಸಲಾದ ಸ್ಥಾಯಿ ಸಮಿತಿ ಸಭೆ ನಡೆಸುವ ಕುರಿತು. ಸಭೆಯನ್ನು ಉದ್ದೇಶಿ ಮಾತನಾಡಿದರು.

ಇಂತಹ ಅಕ್ರಮ ಮಾರಾಟದಲ್ಲಿ ಭಾಗಿಯಾದವರ ವಿರುದ್ಧ ಕಾನೂನಿನ ಕಟ್ಟುನಿಟ್ಟಿನ ಕ್ರಮವನ್ನು ಕೈಗೊಂಡು ಸ್ವಾಸ್ಥ್ಯ ಮತ್ತು ಶಾಂತಿಯುತವಾದ ಸಮಾಜ ನಿರ್ಮಾಣವಾಗಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ವಿಶೇಷವಾಗಿ ತಾಂಡಗಳು ಮತ್ತು ಸ್ಲಂ ಏರಿಯಾಗಳು ಕೆಲವೊಂದು ಸಣ್ಣಪುಟ್ಟ ಪ್ರದೇಶಗಳಲ್ಲಿ ಹಣವನ್ನುಗಳಿಸುವ ದುರಾಸೆಗೆ ಒಳಗಾಗಿ ಅಕ್ರಮವಾಗಿ ನಕಲಿ ಮದ್ಯ ಮಾರಾಟ, ಅಕ್ರಮಸೇಂದಿ ಮಾರಾಟ ಇಂತಹ ಅಕ್ರಮ ಚಟುವಟಿಕೆಗಳ ವಿರುದ್ಧವಾಗಿ ಅಬಕಾರಿ ಇಲಾಖೆ ಮತ್ತು ಪೋಲಿಸ್ ಇಲಾಖೆಯವರು ಕಟ್ಟುನಿಟ್ಟಿನ ಕ್ರಮವನ್ನು ಕೈಗೊಂಡಾಗ ಮಾತ್ರ ಅಪರಾಧಗಳ ಸಂಖ್ಯೆಯನ್ನು ಕಡಿಮೆ ಮಾಡಲು ಸಾಧ್ಯ ಎಂದರು.

ಅಬಕಾರಿ ಇಲಾಖೆ ವತಿಯಿಂದ ದಾಖಲಾದ ಪ್ರಕರಣಗಳ ಕುರಿತು



ಅಧಿಕಾರಿಗಳಿಂದ ಮಾಹಿತಿಯನ್ನು ಪಡೆದಕೊಂಡರು. ಇದಕ್ಕೆ ಪ್ರತಿಕ್ರಿಯಿಸಿದ ಅಬಕಾರಿ ಇಲಾಖೆಯ ಉಪ ಆಯುಕ್ತರಾದ ಡಾ. ಸಂಗಣ್ಣ ಗೌಡ ಹೊಸಳ್ಳಿ ಇವರು ಕಳೆದ ಮೂರು ವರ್ಷಗಳಲ್ಲಿ ದಾಖಲಾದ ಕಳ್ಳಭಟ್ಟಿ ಹಾಗೂ ಅಕ್ರಮ ಸೇಂದಿ ಪ್ರಕರಣಗಳ ಕುರಿತು ಜಿಲ್ಲಾಧಿಕಾರಿಯವರಿಗೆ ಮಾಹಿತಿಯನ್ನು ನೀಡಿದರು. ಕಳ್ಳಭಟ್ಟಿ ಸಾರಯಿಯಲ್ಲಿ ದಾಖಲಾದ ಪ್ರಕರಣಗಳ ವಿವಿರ:

2022–23 ರಲ್ಲಿ ಕಳ್ಳಭಟ್ಟಿ ಸರಾಯಿಲ್ಲಿ 43 ಪ್ರಕರಣಗನ್ನು ದಾಖಲಿಸಿ 206 ಲೀ ಕಳ್ಳಭಟ್ಟಿ ಸಾರಾಯಿಯ ಮುದ್ದೆಮಾಲನ್ನು ಜಪ್ತಿಯನ್ನು ಮಾಡಲಾಯಿತು. 2023–24 ರಲ್ಲಿ 25 ಪ್ರಕರಣಗಳನ್ನು ದಾಖಲಿಸಿ 108 ಲೀ 2024–25 ರಲ್ಲಿ 19 ಪ್ರಕರಣಗಳನ್ನು ದಾಖಲಿಸಿ 83 ಲೀ ಜಪ್ತಿ ಮತ್ತು ಮುದ್ದೆಮಾಲನ್ನು ಜಪ್ತಿಯನ್ನು ಮಾಡಲಾಯಿತು.

ಅಕ್ರಮಸೇಂದಿ ಕುರಿತು ದಾಖಲಾದ ಪ್ರಕರಣಗಳ ವಿವಿರ:

2022–23 ರಲ್ಲಿ 66 ಪ್ರಕರಣಗಳನ್ನು ದಾಖಲಿಸಿ 2428 ಲೀಟರ್ ಅಕ್ರಮ ಸೇಂದಿಯ ಮುದ್ದೆಮಾಲನ್ನು ಜಪ್ತಿಮಾಡಲಾಯಿತು, 2023–24 ರಲ್ಲಿ 57 ಪ್ರಕರಣಗಳನ್ನು ದಾಖಲಿಸಿ 2513 ಲೀಟರ್, 2024–25 ರಲ್ಲಿ 29 ಪ್ರಕರಣಗಳ್ನು ದಾಖಲಿಸಿ 1413 ಲೀಟರ್ ಜಪ್ತಿ ಮತ್ತು ಮುದ್ದೆಮಾಲನ್ನು ಜಪ್ತಿಯನ್ನು

ಮಾಡಲಾಯಿತು ಅಬಕಾರಿ ಅಧೀಕ್ಷಕರು ರವೀಂದ್ರ ಪಾಟೀಲ ಸಂಪೂರ್ಣವಾದ ಮಾಹಿತಿಯನ್ನು ಜಿಲ್ಲಾಧಿಕಾರಿ ಅವರಿಗೆ ನೀಡಿದರು.

ಆರ್ಥಿಕವಾಗಿ ದುರ್ಬಲರಾದವರು ನಿರುದ್ಯೋಗಿ ಯುವಕರು ಹಣವನ್ನು ಸಂಪಾದನೆಯನ್ನು ಮಾಡುವ ಸುಲಭ ಮಾರ್ಗವಾಗಿ ಹೆಚ್ಚಿನ ಪ್ರಮಾಣದಲ್ಲಿ ತಾಂಡಾ ಪ್ರದೇಶಗಳಲ್ಲಿ ಇಂತಹ ಅಕ್ರಮ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದಾರೆ. ಮತ್ತು ವಿಶೇಷವಾಗಿ ಸೇಡಂ, ಚಿಂಚೋಳಿ, ಚಿತ್ತಾಪೂರ, ಶಹಾಬಾದ ಕೆಲವೊಂದು ಗಡಿಪ್ರದೇಶಗಳಲ್ಲಿ ಚೆಕ್‌ಪೋಸ್ಟ್‌ಗಳಲ್ಲಿ ನಿಗಾವಹಿಸಿ ಇಂತಹ ಅಕ್ರಮ ಸಾಗಾಟ ತಡೆಗಟ್ಟಬೇಕು ಜಿಲ್ಲಾಧಿಕಾರಿ ಅವರು ತಿಳಿಸಿದರು.

ಶಾಲಾ ಕಾಲೇಜುಗಳು, ವಿಶ್ವವಿದ್ಯಾಲಯಗಳು, ಗ್ರಾಮೀಣ ಪ್ರದೇಶಗಳಿಗೆ ಸಾರ್ವಜನಿಕರಿಗೆ. ರೈತರಿಗೆ ಇಂತಹ ಅಕ್ರಮ ಸಾಗಟದಿಂದಾಗುವ ದುಷ್ಪರಿಣಾಮಗಳು ಮತ್ತು ಕಾನೂನು ಕ್ರಮಗಳ ಕುರಿತು ಜಾಗೃತಿಯನ್ನು ಮೂಡಿಸಬೇಕೆಂದು ತಿಳಿಸಿದರು.

ಅಬಕಾರಿ ಇಲಾಖೆಯ ಬೆಳಗಾವಿ ಕೇಂದ್ರಸ್ಥಾನದ ಜಾರಿ ಮತ್ತು ಅಪರಾಧ ವಿಭಾಗದ ಅಪರ ಆಯುಕ್ತರಾದ ಡಾ. ಮಂಜುನಾಥ ಅವರು ಮಾತನಾಡಿ, ಕಳಭಟ್ಟಿ ಕಲಬೆರಿಕೆ ಸೇಂದಿ ಮಾರಾಟದೊಂದಿಗೆ ಜಿಲ್ಲೆಯ ಕೆಲವು ಪ್ರದೇಶಗಳಲ್ಲಿ ಅವ್ಯಾಹತವಾಗಿ ಮಾರಾಟವಾಗುತ್ತಿದ್ದು, ಇದ–ರಿಂದ ಸಾರ್ವಜನಿಕರು ಮತ್ತು ಯುವಜನಾಂಗದ ವ್ಯತಿರಿಕ್ತ ಪರಿಣಾಮಗಳನ್ನು ಬೀರುತ್ತದೆ. ಎಂದರು.

ಕಲಬೆರಿಕೆ ಸೇಂಧಿಯನ್ನು ಸೇವಿಸಿದ್ದಾರೆ ಕ್ರಮೇಣವಾಗಿ ಪ್ರಮುಖ ಅಂಗಗಳಾದ ಲೀವರ್ ಕಿಡ್ನಿ ನಿಷ್ಕ್ರೀಯಗೊಂಡು ರೋಗಿಗಳು ಸಾವನ್ನಪ್ಪುವ ಸಂಭವಿರುತ್ತದೆ. ಇಂತಹ ಅಕ್ರಮಗಳನ್ನು ತಡಗಟ್ಟಲು ನಾವು ಗಡಿ ಪ್ರದೇಶದಿಂದ ಬರುವಂತಹ ವಾಹನಗಳನ್ನು ತಪಾಸಣೆ ಮಾಡಬೇಕು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು ಮಾತನಾಡಿ, ಜಿಲ್ಲೆಯಲ್ಲಿ ಇಂತಹ ಅಕ್ರಮ ಚಟುವಟಿಕೆಗಳು ಕಂಡು ಬಂದಲ್ಲಿ ಸಾರ್ವಜನಿಕರು ಪೋಲಿಸ್ ಇಲಾಖೆ ಮಾಹಿತಿ ನೀಡಿದ್ದಾಗ ಪೊಲೀಸ್ ಮತ್ತು ಅಬಕಾರಿ ಇಲಾಖೆ ಅಧಿಕಾರಿಗಳು ತಕ್ಷಣ ಸ್ಥಳಗಳಿಗೆ ಭೇಟಿ ನೀಡಿ ಮಾದಕ ಪದಾರ್ಥಗಳನ್ನು ವಶಪಡಿಸಿಕೊಂಡು ಇಂತಹ ಅಕ್ರಮ ಚಟುವಟಿಕೆಗಳಲ್ಲಿ ಭಾಗಿಯಾದ್ದವರ ಮೇಲೆ ಕಾನೂನು ಕ್ರಮ ಜರುಗಿಸಿ ಶಿಕ್ಷೆಗೆ ಒಳಪಡಿಸಲಾಗುವುದು ಎಂದು ಹೇಳಿದರು.

ವೇದಿಕೆ ಮೇಲೆ ಡಿಸಿಪಿ ಕನಿಕಾ ಸಿಕ್ರಿವಾಲ, ಅಬಕಾರಿ ಅಧೀಕ್ಷರಾದ ಎಚ್.ಎಸ್.ವಜ್ರಮಟ್ಟಿ, ಅಬಕಾರಿ ಉಪ ಅಧೀಕ್ಷಕರಾದ ರವೀಂದ್ರ ಪಾಟೀಲ, ಅಬಕಾರಿ ಅಧೀಕ್ಷಕ ರಾಮನ ಗೌಡ, ಶಹಾಬಾದ ಡಿವೈಎಸ್‌ಪಿ ಶಂಕರ ಗೌಡ ಪಾಟೀಲ, ಚಿಂಚೋಳಿ ಡಿವೈಎಸ್‌ಪಿ ಹಿರೇಮಠ, ಎಲ್ಲ ತಾಲೂಗಳ ವಲಯ ಅಬಕಾರಿ ನಿರೀಕ್ಷಕರು ಹಾಜರಿದ್ದರು .

# 'ಸಮಗ್ರ ಆರೋಗ್ಯ ರಕ್ಷಣಾ ವ್ಯವಸ್ಥೆ' ಮೋದಿ ಸರ್ಕಾರದ ಆರೋಗ್ಯ ನೀತಿಯ ತಿರುಳಾಗಿದೆ: ಆರೋಗ್ಯ ಸಚಿವರಾದ ಶ್ರೀ ಜಗತ್ ಪ್ರಕಾಶ್ ನಡ್ಡಾ

ಮಲ್ಲಮ್ಮ ನುಡಿ ವಾರ್ತೆ

ಬೆಳಗಾವಿ:ಕೇಂದ್ರ ಸಚಿವರಾದ ಶ್ರೀ ಜಗತ್ ಪ್ರಕಾಶ್ ನಡ್ಡಾ ಮತ್ತು ಶ್ರೀ ಪ್ರಲ್ಹಾದ್ ಜೋಶಿ ಅವರು ಬೆಳಗಾವಿಯಲ್ಲಿ ನಡೆದ ಕೆ ಎಲ್ ಇ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿಯ 15 ನೇ ಘಟಿಕೋತ್ಸವದಲ್ಲಿ ಭಾಗವಹಿಸಿದರು

ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಭಾರತದ ರಾಷ್ಟ್ರೀಯ ಆರೋಗ್ಯ ನೀತಿಯ ಗಮನವು ಕೇವಲ ರೋಗನಿವಾರಕ ಸಮಗ್ರ ಆರೋಗ್ಯ ರಕ್ಷಣೆಯ ಮೇಲೆ ಮಾತ್ರವಲ್ಲದೆ ತಡೆಗಟ್ಟುವ ಆರೈಕೆ, ಉಪಶಮನ ಆರೈಕೆ, ಪುನರ್ವಸತಿ ಆರೈಕೆ, ವೃದ್ಧರ ಆರೈಕೆ ಮತ್ತು ಉತ್ತೇಜಕ ಆರೋಗ್ಯ ರಕ್ಷಣೆಯ ಮೇಲೂ ಕೇಂದ್ರೀಕರಿಸುವ "ಸಮಗ್ರ ಆರೋಗ್ಯ ರಕ್ಷಣಾ ವ್ಯವಸ್ಥೆ"ಯನ್ನು ಅಭಿವೃದ್ಧಿಪಡಿಸುವುದಾಗಿದೆ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ಶ್ರೀ ಜಗತ್ ಪ್ರಕಾಶ್ ನಡ್ಡಾ ಹೇಳಿದರು. ಅವರು ಇಂದು ಬೆಳಗಾವಿಯಲ್ಲಿ ನಡೆದ ಕೆ ಎಲ್ ಇ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿಯ (ಕೆ ಎ ಎಚ್ ಇ ಆರ್) 15 ನೇ ಘಟಿಕೋತ್ಸವದಲ್ಲಿ ಆರೋಗ್ಯ ಶಿಕ್ಷಣದ ವಿವಿಧ ವಿಭಾಗಗಳಿಂದ ಹೊಸದಾಗಿ ಉತ್ತೀರ್ಣರಾದ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು.

ಕೆ ಎಲ್ ಇ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿಯ 15 ನೇ ಘಟಿಕೋತ್ಸವವು ಇಂದು ಬೆಳಗಾವಿಯ ಜೆ ಎನ್ ಎಂ ಸಿ ಕ್ಯಾಂಪಸ್ ನಲ್ಲಿ ನಡೆಯಿತು. ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ರಾಸಾಯನಿಕ ಮತ್ತು ರಸಗೊಬ್ಬರ ಸಚಿವರಾದ ಶ್ರೀ ಜೆ ಪಿ ನಡ್ಡಾ ಅವರು ಘಟಿಕೋತ್ಸವದ ಮುಖ್ಯ ಅತಿಥಿಯಾಗಿದ್ದರು ಮತ್ತು ಕೇಂದ್ರ ಗ್ರಾಹಕ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣೆ ಹಾಗೂ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವರಾದ ಶ್ರೀ ಪ್ರಹ್ಲಾದ್ ಜೋಶಿ ಅವರು ಗೌರವಾನ್ವಿತ ಅತಿಥಿಯಾಗಿ ಭಾಗವಹಿಸಿದರು.

ಈ ಸಂದರ್ಭದಲ್ಲಿ, ಮುಂಬೈನ ಟಾಟಾ ಮೆಮೋರಿಯಲ್ ಆಸ್ಪತ್ರೆಯ ಉಪನಿರ್ದೇಶಕ ಡಾ. ಶೈಲೇಶ್ ವಿ. ಶ್ರೀಖಂಡೆ ಅವರಿಗೆ ವೈದ್ಯಕೀಯ ವಿಜ್ಞಾನ ಕ್ಷೇತ್ರದಲ್ಲಿ ನೀಡಿದ ಅನುಕರಣೀಯ ಕೊಡುಗೆಗಾಗಿ ಗೌರವ ಡಾಕ್ಟರ್ ಆಫ್ ಸೈನ್ಸ್ ಪದವಿಯನ್ನು ಪ್ರದಾನ ಮಾಡಲಾಯಿತು. ಕೆ ಎ ಎಚ್ ಇ ಆರ್ ಉಪಕುಲಪತಿ ಡಾ. ಪ್ರಭಾಕರ್ ಕೋರೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು ಮತ್ತು ಉಪಕುಲಪತಿ ಡಾ. ನಿತಿನ್ ಎಂ. ಗಂಗಾನೆ ವಿಶ್ವವಿದ್ಯಾಲಯದ ವರದಿಯನ್ನು ಮಂಡಿಸಿದರು.

ಶ್ರೀ ನಡ್ಡಾ ಅವರು ವಿದ್ಯಾರ್ಥಿಗಳ ಕಠಿಣ ಪರಿಶ್ರಮವನ್ನು ಅಭಿನಂದಿಸಿದರು ಮತ್ತು ಅವರ ಯಶಸ್ಸಿನಲ್ಲಿ ಪ್ರಮುಖ ಪಾತ್ರವಹಿಸಿದ್ದಕ್ಕಾಗಿ ಪೋಷಕರು, ಅಧ್ಯಾಪಕರು ಮತ್ತು ಕೆ ಎಲ್ ಇ ಯ ಸಂಪೂರ್ಣ ಪೂರಕ ವ್ಯವಸ್ಥೆಯನ್ನು ಅಭಿನಂದಿಸಿದರು. ಯುವ ವೈದ್ಯರು ಸಮಾಜದ ಅಗತ್ಯಗಳಿಗೆ ಸ್ಪಂದಿಸುವಂತೆ ಮತ್ತು ದೇಶದ ಆರೋಗ್ಯ ನೀತಿಗಳ ಬಗ್ಗೆ ತಿಳುವಳಿಕೆಯನ್ನು ಬೆಳೆಸಿಕೊಳ್ಳುವಂತೆ ಸಚಿವರು ಸಲಹೆ ನೀಡಿದರು. ಪ್ರಮುಖವಾಗಿ ತೃತೀಯ ಹಂತದ




ಆರೋಗ್ಯ ರಕ್ಷಣೆಯ ಚಿಕಿತ್ಸಕ ಭಾಗದ ಮೇಲೆ ಕೇಂದ್ರೀಕರಿಸಿದ್ದ ಹಿಂದಿನ ಆರೋಗ್ಯ ನೀತಿಯನ್ನು ಸಚಿವರು ಉಲ್ಲೇಖಿಸಿದರು.

"ತೃತೀಯ ಆರೋಗ್ಯ ರಕ್ಷಣಾ ವ್ಯವಸ್ಥೆಯು ಮುಖ್ಯವಾಗಿದೆ, ಆದರೆ ನಾವು ಪ್ರಾಥಮಿಕ ಆರೋಗ್ಯ ಆರೈಕೆಯನ್ನು ನಿರ್ಲಕ್ಷಿಸಲು ಸಾಧ್ಯವಿಲ್ಲ.

ತಡೆಗಟ್ಟುವ ಆರೈಕೆಯ ಅಂಶದ ಅಡಿಯಲ್ಲಿ, ಮೋದಿ ಸರ್ಕಾರವು 1 ಲಕ್ಷ 77 ಸಾವಿರ ಆಯುಷ್ಮಾನ್ ಆರೋಗ್ಯ ಮಂದಿರಗಳನ್ನು ಸ್ಥಾಪಿಸಿದೆ, ಇವು ರೋಗಿಗೆ ಮೊದಲ ಸಂಪರ್ಕ ಕೇಂದ್ರಗಳಾಗಿವೆ. ತಡೆಗಟ್ಟುವ ಆರೋಗ್ಯ ರಕ್ಷಣೆಯನ್ನು ಉತ್ತೇಜಿಸಲು, 30 ವರ್ಷಕ್ಕಿಂತ ಮೇಲ್ಪಟ್ಟ ಪ್ರತಿಯೊಬ್ಬ ವ್ಯಕ್ತಿಯ ಸಾಮೂಹಿಕ ತಪಾಸಣೆ ನಡೆಸಲು ನಾವು ನಿರ್ಧರಿಸಿದ್ದೇವೆ" ಎಂದು ಆರೋಗ್ಯ ಸಚಿವರು ಹೇಳಿದರು.

ಅಲೋಪತಿ, ಹೋಮಿಯೋಪತಿ, ನರ್ಸಿಂಗ್, ದಂತ ವೈದ್ಯಕೀಯ, ಔಷಧ ವಿಜ್ಞಾನ, ಆಯುರ್ವೇದ, ಫಿಸಿಯೋಥೆರಪಿ ಮುಂತಾದ ವಿವಿಧ ವಿಭಾಗಗಳ ವಿದ್ಯಾರ್ಥಿಗಳು ತಮ್ಮ ಪದವಿ ಮತ್ತು ಪದಕಗಳನ್ನು ಸ್ವೀಕರಿಸುತ್ತಿರುವ ಸಮಗ್ರ ಘಟಿಕೋತ್ಸವ ಸಮಾರಂಭದ ಬಗ್ಗೆ ಸಚಿವರು ಸಂತೋಷ ವ್ಯಕ್ತಪಡಿಸಿದರು.

"ವರ್ಷಗಳಿಂದ, ಪ್ರತ್ಯೇಕವಾಗಿ ಕೆಲಸ ಮಾಡುವ ಅಭ್ಯಾಸವಿದೆ. ಒಂದು ವಿಭಾಗ ಇನ್ನೊಂದನ್ನು ಗುರುತಿಸಲಿಲ್ಲ. ನಾವು ಸಮಗ್ರ ವಿಧಾನವನ್ನು ಅಳವಡಿಸಿಕೊಳ್ಳಬೇಕು ಎಂಬುದು ಪ್ರಧಾನಿ ಮೋದಿಯವರ ದೃಷ್ಟಿಕೋನವಾಗಿದೆ. ದೆಹಲಿಯ ಏಮ್ಸ್‌ನಲ್ಲಿರುವ ಸಮಗ್ರ ಔಷಧ ಮತ್ತು ಸಂಶೋಧನಾ ಕೇಂದ್ರ (ಸಿಐಎಂಆರ್) ಈ ಸಮಗ್ರ ವಿಧಾನದ ಫಲಿತಾಂಶವಾಗಿದೆ" ಎಂದು ಶ್ರೀ ನಡ್ಡಾ ಹೇಳಿದರು.

"ಅಲೋಪತಿ, ಆಯುರ್ವೇದ, ಫಾರ್ಮಸಿ ಇತ್ಯಾದಿಗಳ ವಿದ್ಯಾರ್ಥಿಗಳು ಒಂದೇ ವೇದಿಕೆಯಲ್ಲಿ ಪದವಿಗಳನ್ನು ಪಡೆಯುತ್ತಿರುವ ಈ ಘಟಿಕೋತ್ಸವದಲ್ಲಿ ಏಕೀಕರಣವನ್ನು ನೋಡಿ ನನಗೆ ತುಂಬಾ ಸಂತೋಷವಾಗಿದೆ" ಎಂದು ಶ್ರೀ ನಡ್ಡಾ ಹೇಳಿದರು.

ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಮತ್ತು ಆರೋಗ್ಯ ಸಚಿವರಾದ ಶ್ರೀ ಜಗತ್ ಪ್ರಕಾಶ್ ನಡ್ಡಾ ಅವರ ನೇತೃತ್ವದಲ್ಲಿ ಭಾರತ ವೈದ್ಯಕೀಯ ಶಿಕ್ಷಣ ಮತ್ತು ಆರೋಗ್ಯ ಸೇವೆಯಲ್ಲಿ ಭಾರಿ ಪ್ರಗತಿ ಸಾಧಿಸಿದೆ ಎಂದು ಕೇಂದ್ರ ಸಚಿವರಾದ ಶ್ರೀ ಪ್ರಲ್ಹಾದ್ ಜೋಶಿ ಹೇಳಿದರು. ಕಳೆದ 11 ವರ್ಷಗಳಲ್ಲಿ ವೈದ್ಯಕೀಯ ಪದವಿ ಮತ್ತು ಸ್ನಾತಕೋತ್ತರ ಕೋರ್ಸ್ ಗಳಲ್ಲಿ ಸೀಟುಗಳ ಸಂಖ್ಯೆ ಹಾಗೂ ಏಮ್ಸ್ ಗಳ ಸಂಖ್ಯೆ ಹೆಚ್ಚಾಗಿದೆ ಎಂದು ಅವರು ಹೇಳಿದರು. ವೈದ್ಯಕೀಯ ಶಿಕ್ಷಣ ಕ್ಷೇತ್ರದಲ್ಲಿ ಕೆ ಎಲ್ ಇ ವಹಿಸಿದ ಅನುಕರಣೀಯ ಪಾತ್ರವನ್ನು ಶ್ರೀ ಪ್ರಲ್ಹಾದ್ ಜೋಶಿ ಶ್ಲಾಘಿಸಿದರು.

# ಪತ್ರಕರ್ತರ ಸಹಾಯಕ್ಕಾಗಿ ಧ್ವನಿ ಚಾರಿಟೇಬಲ್ ಟ್ರಸ್ಟ್ ರಚನೆ : ಈರಯ್ಯ ಕುರ್ತುಕೋಟಿ



ಮಲ್ಲಮ್ಮ ನುಡಿ ವಾರ್ತೆ

ಕುಕನೂರ: ಸಾರ್ವಜನಿಕರು ಹಾಗೂ ಸರ್ಕಾರಕ್ಕೆ ಸಂಪರ್ಕ ಕೊಂಡಿಯಾಗಿ ಸೇತುವೆಯಂತೆ ಕಾರ್ಯನಿರ್ವಹಿಸುತ್ತಿರುವ ಸಂವಿಧಾನದ ನಾಲ್ಕನೇ ಅಂಗ ಎಂದು ಕರೆಸಿಕೊಳ್ಳುವ ಪತ್ರಕರ್ತರ ಸಹಾಯಕ್ಕಾಗಿ ಟ್ರಸ್ಟ್ ರಚನೆ ಮಾಡಲಾಗಿದೆ ಎಂದು ಹಿರಿಯ ಪತ್ರಕರ್ತ ಈರಯ್ಯ ಕುರ್ತುಕೋಟಿ ಹೇಳಿದರು.

ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಹಿರಿಯ ಪತ್ರಕರ್ತ ಈರಯ್ಯ ಕುರ್ತಕೋಟಿ ಮಾತನಾಡುತ್ತಾ ಜನರಿಗೆ ಪ್ರತಿಯೊಂದು ಕ್ಷೇತ್ರದ ವಾಸ್ತವತೆಯನ್ನು ತಿಳಿಸುವ ನಿಟ್ಟಿನಲ್ಲಿ ಸರ್ಕಾರದ ನಾಲ್ಕನೇ ಅಂಗದಂತೆ ಕಾರ್ಯ ನಿರ್ವಹಿಸುತ್ತಿರುವ ಪತ್ರಿಕಾ ವರದಿಗಾರರ ಸೇವೆಗೆ ತಕ್ಕಂತೆ ಅವರ ಜೀವನಕ್ಕೆ ಯಾವುದೇ ತರಹದ ಭದ್ರತೆ ಹಾಗೂ ರಕ್ಷಣೆ ಇಲ್ಲದಂತಹ ಪರಿಸ್ಥಿತಿ ನಿರ್ಮಾಣಗೊಂಡಿದ್ದು ಇಂತಹ ಪರಿಸ್ಥಿತಿಯನ್ನು ಅರಿತ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯ ಸಂಸ್ಥಾಪಕ ರಾಜ್ಯಾಧ್ಯಕ್ಷ ನೂತನವಾಗಿ ಕಾರ್ಯನಿರತ ಪತ್ರಕರ್ತರ ಚಾರಿಟೇಬಲ್ ಟ್ರಸ್ಟ್ ಸ್ಥಾಪನೆ ಮಾಡಿದ್ದು ಈ ಟ್ರಸ್ಟ್‌ನಲ್ಲಿ ಪತ್ರಕರ್ತರು ಸ್ವಯಂ ಪ್ರೇರಿತರಾಗಿ ದೇಣಿಗೆಯನ್ನು ನೀಡುತ್ತಿದ್ದು, ಈ ದೇಣಿಗೆಯಿಂದ ಸಂಗ್ರಹವಾಗುವ ನಿಧಿಯನ್ನು ಪತ್ರಕರ್ತರ ತುರ್ತು ಪರಿಸ್ಥಿತಿ ಹಾಗೂ ಕಾರ್ಯನಿರ್ವಹಣೆ ನಿಧನ ಹೊಂದುವ ಪತ್ರಕರ್ತರ ಕುಟುಂಬಗಳಿಗೆ ಅಳಿಲು ಸೇವೆಯನ್ನು ನೀಡುವ ಉದ್ದೇಶವನ್ನು ಹೊಂದಿದ್ದು ಅದೇ ತರಹ ಪಟ್ಟಣದ ಯುವ ಪತ್ರಕರ್ತ ಶರಣಯ್ಯ ತೆ–ೂಂಟದಾರ್ಯ ಮಠ ಕಳೆದ ಮಾರ್ಚ್ ತಿಂಗಳಲ್ಲಿ ಆಕಸ್ಮಿಕವಾಗಿ ಹೃದಯಘಾತದಿಂದ ನಿಧನ ಹೊಂದಿದ್ದು ಅವರ ಕುಟುಂಬಕ್ಕೆ ಹತ್ತು ಸಾವಿರ ರೂಪಾಯಿಗಳ ಚೆಕ್ ನೀಡುವುದರೊಂದಿಗೆ ರಾಜ್ಯದ್ಯಂತ ಚಾರಿಟೇಬಲ್ ಟ್ರಸ್ಟ್ ಗೆ ಚಾಲನೆ ನೀಡಲಾಗಿದೆ. ಇತ್ತೀಚಿಗೆ ಬೆಂಗಳೂರಿನಲ್ಲಿ ನಡೆದ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯ ಮೂರನೆಯ ರಾಜ್ಯ ಸಮ್ಮೇಳನದಲ್ಲಿ ಚೆಕ್ ವಿತರಣೆ ಮಾಡುವುದರೊಂದಿಗೆ ಕಾರ್ಯನಿರತ ಪತ್ರಕರ್ತರ ಧ್ವನಿ ಚಾರಿಟೇಬಲ್ ಟ್ರಸ್ಟ್ ಗೆ ಚಾಲನೆ ನೀಡಿದ್ದು ಮುಂದೆ ರಾಜ್ಯದಲ್ಲಿ ಪತ್ರಕರ್ತರು ಯಾವುದಾದರೂ ಆರೋಗ್ಯ ಸಮಸ್ಯೆಗೆ ಒಳಗಾದಲ್ಲಿ ಅಂತವರ ಸಹಾಯಕ್ಕೆ ಚಾರಿಟೇಬಲ್ ಟ್ರಸ್ಟ್ ಸದಾ ಸಿದ್ಧವಾಗಿರುತ್ತದೆ ಎಂದು ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ ಬಂಗ್ಲೆ ಹೇಳಿರುವುದಾಗಿ ತಿಳಿಸಿದರು.

ಬೆಂಗಳೂರಿನ ಕಾರ್ಯಕ್ರಮದಲ್ಲಿ ನೀಡಿದ ಸಹಾಯ ಹಸ್ತದ ಚೆಕ್ಕನ್ನು ಕುಕನೂರು ಪಟ್ಟಣದ ದಿವಂಗತ ಶರಣಯ್ಯ ತೋಂಟದಾರ್ಯಮಠ ಅವರ ಮನೆಗೆ ತೆರಳಿ ಅವರ ತಾಯಿಯವರಿಗೆ ಚೆಕ್ ಹಸ್ತಾಂತರಿಸಿ ಸಾಂತ್ವನ ಹೇಳಲಾಯಿತು.

ಈ ವೇಳೆಯಲ್ಲಿ ಕುಕನೂರು ಪಟ್ಟಣದ ದಳಪತಿಗಳಾದ ವೀರಯ್ಯ ತೋಂಟದಾರ್ಯಮಠ, ಮಹೇಶ್ ಕಲ್ಮಠ, ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯ ಕುಕನೂರು ತಾಲೂಕ ಘಟಕದ ಅಧ್ಯಕ್ಷ ಸುನಿಲಕುಮಾರ ಮಠದ, ತಾಲೂಕು ಪ್ರಧಾನ ಕಾರ್ಯದರ್ಶಿ ವೀರಯ್ಯ ವಿ ಹಿರೇಮಠ, ಮುತ್ತಯ್ಯ ತೋಂಟದಾರ್ಯ ಮಠ, ಚಂದ್ರು ಬಾನಾಪುರ, ವಿಶ್ವನಾಥ ಪಟ್ಟಣಶೆಟ್ಟಿ ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.

# ಜೂ. 6ರಂದು ವಾಕ್ ಇನ್ ಇಂಟರ್‌ವ್ಯೂವ್

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಕೊಪ್ಪಳದಲ್ಲಿ ಜೂನ್ 6 ರಂದು ವಾಕ್ ಇನ್ ಇಂಟರ್‌ವ್ಯೂವ್ ಅನ್ನು ಆಯೋಜಿಸಲಾಗಿದ್ದು, ಖಾಸಗಿ ಸಂಸ್ಥೆಗಳು ಖಾಲಿ ಹುದ್ದೆಗಳನ್ನು ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಯಾವುದೇ ಶುಲ್ಕ ಇರುವುದಿಲ್ಲ ಎಲ್ಲರಿಗೂ ಉಚಿತ ಪ್ರವೇಶವಿರುತ್ತದೆ.

ಬಿ.ಇ.–ಇ&ಇ, ಬಿ.ಇ.–ಇ&ಸಿ, ಡಿಪ್ಲೊಮಾ ಇನ್ ಟೂಲ್ & ಡೈ ಮೇಕಿಂಗ್+ಬಿ.ಇ–ಮೆಕ್ಯಾನಿಕಲ್ ಅಭ್ಯರ್ಥಿಗಳಿಗೆ ನೇರ ಸಂದರ್ಶನ ಮೂಲಕ ನೇಮಕಾತಿ ಮಾಡಿಕೊಳ್ಳಲಾಗುತ್ತದೆ. ಗೆಸ್ಟ್ ಲೆಕ್ಚರರ್ ಆಗಿ ಕೆಲಸ ಮಾಡಲು ಇಚ್ಛಿಸುವವರು ಜೂನ್ 6 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1.30 ರವರೆಗೆ ನಡೆಯಲಿರುವ ವಾಕ್ ಇನ್ ಇಂಟರ್‌ವ್ಯೂವ್‌ನಲ್ಲಿ ಭಾಗವಹಿಸಬಹುದು.

ಅರ್ಹ ವಿದ್ಯಾರ್ಹತೆ ಹೊಂದಿದ ನಿರುದ್ಯೋಗಿ ಯುವಕ ಮತ್ತು ಯುವತಿಯರು ದೃಢೀಕರಿಸಲಾದ ತಮ್ಮ ವಿದ್ಯಾರ್ಹತೆಯ ಎಲ್ಲ ಪ್ರಮಾಣ ಪತ್ರಗಳು ಮತ್ತು ಆಧಾರ್ ಕಾರ್ಡಿನ ಪ್ರತಿ, ಬಯೋಡಾಟಾ ಹಾಗೂ ಪಾಸ್ ಪೋರ್ಟ್ ಅಳತೆಯ 2 ಭಾವಚಿತ್ರಗಳೊಂದಿಗೆ ವಾಕ್ ಇನ್ ಇಂಟರ್‌ವ್ಯೂವ್‌ನಲ್ಲಿ ಭಾಗವಹಿಸಿ, ಉದ್ಯೋಗದ ನೆರವನ್ನು ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಆಡಳಿತ ಭವನ, ಮೊದಲನೇ ಮಹಡಿ, ಕೊಪ್ಪಳ ಇವರನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.4–ಪ್ರಸಕ್ತ 2025–26ನೇ ಸಾಲಿಗೆ ಕಲಬುರಗಿ ದರ್ಗಾ ರಸ್ತೆಯ (ಎಸ್.ಟಿ.ಬಿ.ಟಿ) ಸರ್ಕಾರಿ ಶಿಕ್ಷಕರ/ ಶಿಕ್ಷಕಿಯರ ತರಬೇತಿ ಸಂಸ್ಥೆ ಸಂಸ್ಥೆಯಲ್ಲಿ ಡಿ.ಇಎಲ್.ಇಡಿ. (ಕನ್ನಡ & ಉರ್ದು ಮಾಧ್ಯಮ) ಮತ್ತು ಡಿ.ಪಿ.ಎಸ್.ಇ.(ಆಂಗ್ಲ ಮಾಧ್ಯಮ) ಪ್ರಥಮ ವರ್ಷದ ಸರ್ಕಾರಿ ಕೋಟಾದಡಿ ಲಭ್ಯವಿರುವ ಸೀಟುಗಳಿಗೆ ಪ್ರವೇಶ ಪಡೆಯಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಕಲಬುರಗಿ ಸರ್ಕಾರಿ ಶಿಕ್ಷಕಿಯರ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ. ಅರ್ಹ ಅಭ್ಯರ್ಥಿಗಳು ಭರ್ತಿ ಮಾಡಿದ ಅರ್ಜಿಯೊಂದಿಗೆ ಅವಶ್ಯಕ ದಾಖಲೆಗಳನ್ನು ಲಗತ್ತಿಸಿ ಸರಕಾರಿ ಶಿಕ್ಷಕರ/ಶಿಕ್ಷಕಿಯರ ತರಬೇತಿ ಸಂಸ್ಥೆ (ಎಸ್.ಟಿ.ಬಿ.ಟಿ), ದರ್ಗಾ ರಸ್ತೆ, ಕಲಬುರಗಿ ಇಲ್ಲಿ 2025ರ ಜೂನ್ 25 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಪ್ರಾಚಾರ್ಯರು/ಉಪನ್ಯಾಸಕರನ್ನು ಹಾಗೂ ಮೊಬೈಲ್ ಸಂಖ್ಯೆ 9901100298, 9902814130 ಮತ್ತು 9844011486 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

## ರಾಷ್ಟ್ರದಾದ್ಯಂತ ಸಿ ಬಿ ಎಸ್ ಇ ಶಾಲೆಗೆ ಏಕರೂಪ ಶುಲ್ಕ ನಿಗದಿಗೆ ದೆಹಲಿಯಲ್ಲಿ ರಾಷ್ಟ್ರಪತಿಗೆ ಜಾನಸನ್ ಘೋಡೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 04 : ರಾಷ್ಟ್ರದಾದ್ಯಂತ ಸಿ.ಬಿ.ಎಸ್.ಇ. ಶಾಲೆಗಳಿಗೆ ಏಕರೂಪದ ಶುಲ್ಕ ನಿಗದಿಪಡಿಸಬೇಕು ಎಂದು ಕಾಂಗ್ರೆಸ್ ಕಾರ್ಮಿಕ ವಿಭಾಗದರಾಜ್ಯಕಾರ್ಯದರ್ಶಿ ಜಾನಸನ್ ಘೋಡೆ ಬೇಡಿಕೆ ಮಂಡಿಸಿದ್ದಾರೆ. ಈ ಕುರಿತು ಅವರು ನವದೆಹಲಿಯಲ್ಲಿ ರಾಷ್ಟ್ರಪತಿ ಅವರಿಗೆ ಮನವಿ ಪತ್ರ ಸಲ್ಲಿಸಿದ್ದಾರೆ. ಬೀದರ್ ಜಿಲ್ಲೆಯಲ್ಲಿಸಿ.ಬಿ.ಎಸ್.ಇ.ಶಾಲೆಗಳು ಡೊನೆಷನ್ ಹಾಗೂ ಕಟ್ಟಡ ನಿಧಿ ಹೆಸರಲ್ಲಿ ಪಾಲಕರಿಂದ ಲಕ್ಷಾಂತರ ರೂಪಾಯಿ ವಸೂಲಿ ಮಾಡುತ್ತಿವೆ ಎಂದು ಆರೋಪಿಸಿದ್ದಾರೆ.

ದುಬಾರಿ ಶುಲ್ಕದ ಕಾರಣ ಬಡ ಪ್ರತಿಭಾವಂತ ಮಕ್ಕಳು ಶಿಕ್ಷಣದಿಂದ ವಂಚಿತರಾಗುವ ಪರಿಸ್ಥಿತಿ ಎದುರಾಗಿದೆ. ಬಡ ಪಾಲಕರು ಹಾಗೂ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಏಕರೂಪದ ಶುಲ್ಕ ನಿಗದಿಗೆ ಕ್ರಮ ಕೈಗೊಳ್ಳಬೇಕು ಎಂದು ಕೋರಿದ್ದಾರೆ.

# ಕಮಲ್ ಹಾಸನ್ ಹೇಳಿಕೆಗೆ ಭಾವಿದೊಡ್ಡಿ ಖಂಡನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 04 : ತಮಿಳು ನಟ ಕಮಲ್ ಹಾಸನ್ ಅವರು ಇತ್ತೀಚೇಗೆ ಕನ್ನಡ ಭಾಷೆ ತಮಿಳಿನಿಂದ ಹುಟ್ಟಿದೆ ಎಂಬ ವಿವಾದಾತ್ಮಕ ಹೇಳಿಕೆಗೆ ಜಿಲ್ಲೆಯ ಸಮಾಜಿಕ ಹೋರಾಟಗಾರ ಸಂಗಮೇಶ ಭಾವಿದೊಡ್ಡಿ ಖಂಡಿಸಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಕಮಲ್ ಹಸನ್ ಉಪ್ಪು ತಿಂದ ಮನೆಗೆ ದ್ರೋಹ ಬಗೆದ ವ್ಯಕ್ತಿ. ವಿಶ್ವದ ಹಲವು ಪುರಾತನ ಚರಿತ್ರೆಗಳಲ್ಲಿ ಕರ್ನಾಟಕದ ಚರಿತ್ರೆ ಒಂದು. ಇದರ ಬಗ್ಗೆ ಸಾಮಾನ್ಯ ಜ್ಞಾನ ಇರದ ಇವರು ಕನ್ನಡ ಭಾಷೆ ಬಗ್ಗೆ ಹಗುರ ಮಾತನಾಡುವ ಮೂಲಕ 7 ವರೆ ಹೋಟಿ ಕನ್ನಡಿಗರಿಗೆ ಅವಮಾನ ಮಾಡಿದ್ದಾರೆ. ಇಂಥ ದುಷ್ಟರಿಗೆ ಕನ್ನಡ ನೆಲದಲ್ಲಿ ಕಾಲಿಡಲು ಬಿಡಕೂಡದು. ಜೊತೆಗೆ ಕನ್ನಡದ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿರುವ ಕಮಲ್ ಹಸನ್ ಗೆ ಕಾನೂನು ಮೂಲಕ ಪ್ರತಿಭಟನೆ ನಡೆಸಿ ತಕ್ಕಶಾಸ್ತಿ ಮಾಡಬೇಕೆಂದು ಭಾವಿಕಟ್ಟಿ ಪ್ರಕಡಣೆ ಮೂಲಕ ಪುನರುಚ್ಚರಿಸಿದ್ದಾರೆ.

# ಯದಲಾಪುರ ಗ್ರಾ.ಪಂ. ಅಧ್ಯಕ್ಷರಾಗಿ ಗುಣವಂತರಾವ್ ಪಾಟೀಲ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ.04 : ತಾಲ್ಲೂಕಿನ ಯದಲಾಪುರ ಗ್ರಾಮ ಪಂಚಾಯಿತಿ ನೂತನ ಅಧ್ಯಕ್ಷರಾಗಿ ಗುಣವಂತರಾವ್ ಪಾಟೀಲ ಅಯಾಸಪುರ ಹಾಗೂ ಉಪಾಧ್ಯಕ್ಷರಾಗಿ ಕಾವೇರಿ ಪ್ರಶಾಂತ ಆಯ್ಕೆಯಾಗಿದ್ದಾರೆ.

ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಎರಡನೇ ಅವಧಿಗೆ ಬುಧವಾರ ನಡೆದ ಚುನಾವಣೆಯಲ್ಲಿ 21 ಸದಸ್ಯರ ಪೈಕಿ 17 ಸದಸ್ಯರ ಬೆಂಬಲದೊಂದಿಗೆ ಪಾಟೀಲ ಅಧ್ಯಕ್ಷರಾಗಿ ಆಯ್ಕೆಯಾದರು. ಉಪಾಧ್ಯಕ್ಷ ಸ್ಥಾನಕ್ಕೆ ಕಾವೇರಿ ಪ್ರಶಾಂತ ಒಬ್ಬರೇ ನಾಮಪತ್ರ ಸಲ್ಲಿಸಿದ್ದರು. ಅವರ ಆಯ್ಕೆ ಅವಿರೋಧವಾಗಿ ನಡೆಯಿತು.

ಚುನಾವಣಾಧಿಕಾರಿಯಾಗಿದ್ದ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಕಿರಣ್ ಪಾಟೀಲ ಆಯ್ಕೆಯನ್ನು ಅಧಿಕೃತವಾಗಿ ಪ್ರಕಟಿಸಿದರು.

ನೂತನ ಅಧ್ಯಕ್ಷ–ಉಪಾಧ್ಯಕ್ಷರ ಆಯ್ಕೆ ಘೋಷಿಸುತ್ತಿದ್ದಂತೆಯೇ ಬೆಂಬಲಿಗರು ಪಟಾಕಿ ಸಿಡಿಸಿ, ಸಿಹಿ ಹಂಚಿ ವಿಜಯೋತ್ಸವ ಆಚರಿಸಿದರು. ನೂತನ ಅಧ್ಯಕ್ಷ–ಉಪಾಧ್ಯಕ್ಷರನ್ನು ಸತ್ಕರಿಸಿದರು.

ಯದಲಾಪುರ ಗ್ರಾಮ ಪಂಚಾಯಿತಿಯನ್ನು ಮಾದರಿ ಪಂಚಾಯಿತಿಯನ್ನಾಗಿಸಲು ಶಕ್ತಿ ಮೀರಿ ಪ್ರಯತ್ನಿಸಲಾಗುವುದು. ಪಂಚಾಯಿತಿ ವ್ಯಾಪ್ತಿಯ ಅರ್ಹರಿಗೆ ಸರ್ಕಾರದ ಯೋಜನೆಗಳ ಲಾಭ ತಲುಪಿಸಲಾಗುವುದು. ಗ್ರಾಮಗಳಲ್ಲಿ ರಸ್ತೆ, ಚರಂಡಿ, ಕುಡಿಯುವ ನೀರು, ದಾರಿದೀಪ ಸೇರಿದಂತೆ ಅಗತ್ಯ ಮೂಲಸೌಕರ್ಯ ಕಲ್ಪಿಸಲು ಒತ್ತು ಕೊಡಲಾಗುವುದು ಎಂದು ನೂತನ ಅಧ್ಯಕ್ಷ ಗುಣವಂತರಾವ್ ಪಾಟೀಲ ಹೇಳಿದರು.

ಪಿಡಿಒ ಸುನೀತಾ ಬನ್ನೇರ್ ಸಹಾಯಕ ಚುನಾವಣಾಧಿಕಾರಿಯಾಗಿದ್ದರು. ಮುಖಂಡರಾದ ಆಕಾಶ ಪಾಟೀಲ, ಸಂತೋಷ ಪಾಟೀಲ, ಯೋಗೇಂದ್ರ ಯದಲಾಪುರೆ, ರಮೇಶ ಪಾಟೀಲ, ಹಣಮಂತರಾವ್ ಪಾಟೀಲ, ಭೀಮರಾವ್ ಪೊಲೀಸ್ ಪಾಟೀಲ, ಸುಧಾಕರ ಕೋಟೆ, ಪ್ರದೀಪ್ ಕೋಟೆ, ಸ್ವಾಮಿದಾಸ, ಶಿವಕುಮಾರ ತೂಗಾ, ಉಸ್ಮಾನ್, ಮಹೆಬೂಬ್ ಪಟೇಲ್, ಸಿದ್ದು ಹೊಸಳ್ಳಿ, ದತ್ತು ಹಡಪದ, ಗೌಸಿಯಾ ಬೇಗಂ, ಅನ್ಸರ್ ಬೇಗ್, ಜಾವೀದ್, ಜಗನ್ನಾಥ ಯಾಕತಪುರೆ, ಶಿವಕುಮಾರ ಸ್ವಾಮಿ, ನಾಗಶೆಟ್ಟಿ ಚಟ್ನಳ್ಳಿ, ಗ್ರಾಮ ಪಂಚಾಯಿತಿ ಸದಸ್ಯರು, ಗ್ರಾಮದ ಗಣ್ಯರು ಇದ್ದರು.

## ಆರೋಗ್ಯ ಸಂಜೀವಿನಿ ಯೋಜನೆಯ ಪ್ರಯೋಜನ ಪಡೆಯಿರಿ




ಬೀದರ. ಜೂ. 04 : ರಾಜ್ಯ ಸರ್ಕಾರಿ ನೌಕರರು ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯ ಪ್ರಯೋಜನ ಪಡೆಯಬೇಕು ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಬಿರಾದಾರ ಸಲಹೆ ಮಾಡಿದರು. ನಗರದ ಪ್ರತಾಪನಗರದ ನೌಕರರ ಸಮುದಾಯ ಭವನದಲ್ಲಿ ಮಂಗಳವಾರ ನಡೆದ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಕಾರ್ಯಕಾರಿಣಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಯೋಜನೆಯಡಿ ನೌಕರರು ಹಾಗೂ ಅವರ ಅವಲಂಬಿತ ಕುಟುಂಬದ ಸದಸ್ಯರಿಗೆ ನಿಗದಿತ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ನಗದು ರಹಿತ ವೈದ್ಯಕೀಯ ಸೌಲಭ್ಯ ಸಿಗಲಿದೆ. ಹೃದಯ ಸಂಬಂಧಿ ಕಾಯಿಲೆ, ಕ್ಯಾನ್ಸರ್, ಕಿಡ್ನಿ ವೈಫಲ್ಯ, ಡಯಾಲಿಸಿಸ್, ಅಂಗಾಂಗ ಕಸಿ, ಮೂಳೆ ಸಮಸ್ಯೆ, ನವಜಾತ ಶಿಶುಗಳ ಚಿಕಿತ್ಸಾ ಸೇವೆ, ತುರ್ತು ಶಸ್ತ್ರಚಿಕಿತ್ಸೆ, ಲಘು ಶಸ್ತ್ರಚಿಕಿತ್ಸೆ, ಲಘು ವೈದ್ಯಕೀಯ ಸೇವೆ ಮೊದಲಾದವು ಇದರ ವ್ಯಾಪ್ತಿಗೆ ಬರಲಿವೆ ಎಂದು ತಿಳಿಸಿದರು. ಸಂಘದ ಪದಾಧಿಕಾರಿಗಳು ಯೋಜನೆ ಕುರಿತು ನೌಕರರಲ್ಲಿ ಜಾಗೃತಿ ಮೂಡಿಸಬೇಕು ಎಂದು ಹೇಳಿದರು. ನೌಕರರು ಬ್ಯಾಂಕ್‌ಗಳ ಸಮಗ್ರ ವೇತನ ಪ್ಯಾಕೇಜ್ ಯೋಜನೆ ಲಾಭ ಸಹ ಪಡೆಯಬೇಕು ಎಂದು ತಿಳಿಸಿದರು. ಸಂಘವು ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ 90 ಕ್ಕೂ ಹೆಚ್ಚು ಅಂಕ ಗಳಿಸಿದ ರಾಜ್ಯ ಸರ್ಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಪ್ರದಾನ ಮಾಡಲಿದೆ ಎಂದು ಹೇಳಿದರು. ನೌಕರರ ರಾಜ್ಯಮಟ್ಟದ ಕ್ರೀಡಾ–ಕೂಟದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ನೌಕರರನ್ನು ಸನ್ಮಾನಿಸಲಾಯಿತು.

ಸಂಘದ ರಾಜ್ಯ ಪರಿಷತ್ ಸದಸ್ಯ ರಾಜಕುಮಾರ ಮಾಳಗೆ, ಜಿಲ್ಲಾ ಘಟಕದ ಖಜಾಂಚಿ ದೇವಪ್ಪ ಚಾಂಬೋಳೆ, ಕಾರ್ಯಾಧ್ಯಕ್ಷ ಶಿವರಾಜ ಕಪಲಾಪುರೆ, ಹಿರಿಯ ಉಪಾಧ್ಯಕ್ಷರಾದ ಗೌತಮ ಚಿಂತಲಗೇರಾ, ಅಬ್ದುಲ್ ಸತ್ತಾರ್, ಪ್ರಧಾನ ಕಾರ್ಯದರ್ಶಿ ಪ್ರಭುಲಿಂಗ ತೂಗಾವೆ, ಬಸವಕಲ್ಯಾಣ ತಾಲ್ಲೂಕು ಘಟಕದ ಅಧ್ಯಕ್ಷ ದಿಲೀಪಕುಮಾರ, ಭಾಲ್ಕಿ ತಾಲ್ಲೂಕು ಘಟಕದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ, ಚಿಟಗುಪ್ಪ ತಾಲ್ಲೂಕು ಘಟಕದ ಅಧ್ಯಕ್ಷ ರಾಜಶೇಖರ ಉಪ್ಪಿನ್, ಮನೋಹರ ಕಾಶಿ, ಸುರೇಶ ಟಾಳೆ, ರಾಜು ಸಾಗರ್, ದಿಲೀಪಕುಮಾರ ಡೊಂಗರಗೆ ಮತ್ತಿತರರು ಇದ್ದರು.

# ಕರ್ನಾಟಕ ಒಂದು ರಾಜ್ಯ ಹಲವು ಜಗತ್ತುಗಳು : ಡಾ. ಶೈಲೇಂದ್ರ ಬೆಲ್ದಾಳೆ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಜೂ.4:ನಗರದ ಹೈ.ಕ.ಶಿ. ಸಂಸ್ಥೆಯ ಬಿ.ವಿ. ಭೂಮರಡ್ಡಿ ಪದವಿ ಮಹಾವಿದ್ಯಾಲಯದಲ್ಲಿ ಬೀದರ ದಕ್ಷಣ ಕ್ಷೇತ್ರದ ಶಾಸಕರಾದ ಸನ್ಮಾನ್ಯ ಶ್ರೀ ಡಾ. ಶೈಲೇಂದ್ರ ಬೆಲ್ದಾಳೆ ಅಮೃತ ಹಸ್ತದಿಂದ ಸಸಿಗೆ ನೀರೆರೆಯುವುದರ ಮುಖಾಂತರ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾನ್ಯ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆಯವರು ಮಾತನಾಡುತ್ತಾ ನಮ್ಮ ಕಲ್ಯಾಣ ಕರ್ನಾಟಕ ಭಾಗ ಅತ್ಯಂತ ಸಂಪನ್ಮೂಲಗಳಿಂದ ಕೂಡಿದೆ, ಇಲ್ಲಿ ಆಳ್ವಿಕೆ ಮಾಡಿದ ಚಾಲುಕ್ಯ, ರಾಷ್ಟ್ರಕೂಟ, ವಿಜಯನಗರ ಸಾಮ್ರಾಜ್ಯದ ರಾಜಧಾನಿ ಹಂಪೆಯು ಕಲೆ ಮತ್ತು ವಾಸ್ತುಶಿಲ್ಪದ ವೈಭವದಿಂದ ತುಂಬಿತುಳುಕುತ್ತಿದೆ. ಕ್ರಿ.ಶ. 1336ರಲ್ಲಿ ಈ ಸಾಮ್ರಾಜ್ಯ ಸ್ಥಾಪನೆಯಾಗಿ ಅನೇಕ ಶಿಲ್ಪಿಗಳು ನಿರ್ಮಿಸಿದ ಕಲೆ ಮತ್ತು ವಾಸ್ತುಶಿಲ್ಪಕ್ಕೆ ಮನಸೋತು ವಿದೇಶಿ ಪ್ರವಾಸಗಳು ಕರ್ನಾಟಕಕ್ಕೆ ಇವತ್ತಿಗೂ ಆಗಮಿಸುತ್ತಿದ್ದಾರೆ ಅದು ನಮ್ಮ ಕರ್ನಾಟಕಕ್ಕೆ ಹೆಮ್ಮೆಯ ವಿಷಯ ಇಂದಿನ ವಿದ್ಯಾರ್ಥಿಗಳು ಅಲ್ಲಿಗೆ ಪ್ರವಾಸ ಕೈಗೊಂಡು ಅದರ ಆಳವನ್ನು ತಿಳಿದುಕೊಳ್ಳಬೇಕೆಂದು ನುಡಿದರು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ ಬೀದರ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಬಿ.ಎಸ್. ಬಿರಾದಾರಯವರು ತಮ್ಮ ಅಮೃತ ಹಸ್ತದಿಂದ ವಿಚಾರ ಸಂಕಿರಣದ ಸ್ಮರಣ ಸಂಚಿಕೆ ಬಿಡುಗಡೆ ಮಾಡಿ ಮಾತನಾಡುತ್ತಾ ಕಲ್ಯಾಣ ಕರ್ನಾಟಕ ಭಾಗ ಅತ್ಯಂತ ಸರಳ ಜೀವಿಗಳು ಬಂದರವರಿಗೆ ಆದರ ಆತಿಥ್ಯದಿಂದ "ಶರಣು ಶರಣಾರ್ಥಿ" ಎಂಬ ಪದದಿಂದ ಸರ್ವರಿಗೂ ಸ್ವಾಗತ ಮಾಡಿ "ಸರ್ವೆ ಜನ ಸುಖಿನೋ ಭವಂತು" ಎಂಬ ಸಂಕಲ್ಪದೊಂದಿಗೆ ಇಲ್ಲಿನ ಅನೇಕ ಶಿಲ್ಪಕಲೆಯು ಉದಾಹರಣೆಗೂ ಜಲಸಂಗಿಯಲ್ಲಿರುವ 6ನೇ ವಿಕ್ರಮಾದಿತ್ಯನ ಕಾಲದ ಶಾಸನ ಸುಂದರಿ ಅತ್ಯಂತ ವೈಭವದಿಂದ ಕೂಡಿದೆ ಎಂದು ನುಡಿದು ವಿದ್ಯಾರ್ಥಿಗಳಿಗೆ ಇನ್ನುಷ್ಟು ಸಂಶೋಧನೆ ಮಾಡಬೇಕೆಂದು ಕಿವಿಮಾತು ಹೇಳಿದರು.

ಮುಖ್ಯ ಭಾಷಣಕಾರರಾಗಿ ಆಗಮಿಸಿದ ಇತಿಹಾಸ ವಿಭಾಗದ ನಿವೃತ್ತ ಪ್ರಾಧ್ಯಾಪಕರಾದ ಡಾ. ಶಿವಕುಮಾರ ಉಪ್ಪೆಯವರು ಮಾತನಾಡುತ್ತಾ ಗತಿಸಿದ ಘಟನೆಗಳನ್ನು ನೆನೆಪಿಸುತ್ತಾ ಕಲ್ಯಾಣ ಕರ್ನಾಟಕದ ಕಲಬುರಗಿ, ಬಳ್ಳಾರಿ ರಾಯಚೂರು, ಬೀದರ ಭಾಗದ ಕಲ್ಯಾಣ ಚಾಲುಕ್ಯರು, ಬಹುಮನಿ ಸುಲ್ತಾನನರು, ವಿಜಯನಗರ ಕಾಲದ ಕೃಷ್ಣದೇವರಾಯ ಇವರು ಸಲ್ಲಿಸಿದ ಸಂಗೀತ, ಕಲೆ, ವಾಸ್ತುಶಿಲ್ಪದಲ್ಲಿ ಉಗ್ರ ನರಸಿಂಹ, ವೀರುಪಾಕ್ಷ ದೇವಾಲಯ, ಏಕಶಿಲೆಯ ರಥ, 13ನೇ ಶತಮಾನದಲ್ಲಿ ರಚನೆಯಾದ ಶಿಲ್ಪಕಲೆ ಇಂದಗೂ ಸಹಿತ ಜನರನ್ನು ಹಾಗೂ ವಿದ್ಯಾರ್ಥಿಗಳನ್ನು ಆಕರ್ಷಿಸುತ್ತಿದೆ ಇದರ ಬಗ್ಗೆ ಇನ್ನಷ್ಟು ಸಂಶೋಧನೆಗಳು ಆಗಬೇಕೆಂದು ಕರೆಕೊಟ್ಟರು.

ಇನ್ನೋರ್ವ ಮುಖ್ಯ ಅತಿಥಿಗಳು ಹಾಗೂ ಸಮಾಜ ಚಿಂತಕರಾದ ಶ್ರೀ ರಾಹುಲ ಮಿಶ್ರಾ (ಬಿಹಾರ) ಅವರು ಮಾತನಾಡುತ್ತಾ ಈ ಭಾಗದ ವಿದ್ಯಾರ್ಥಿಗಳು ಅತಿ ಜಾಣ್ಮೆಯಿಂದ ಕೂಡಿದ್ದಾರೆ ಆದರೆ ಉನ್ನತ ಹುದ್ದೆಗಳಿಗೆ ತಲುಪಲು ಆಗುತ್ತಿಲ್ಲ ಕೇವಲ ಬೆರಳಣಿಕೆಯಷ್ಟು ವಿದ್ಯಾರ್ಥಿಗಳು ಮಾತ್ರ ಐ.ಎ.ಎಸ್. ಮತ್ತು ಐ.ಪಿ.ಎಸ್. ಹುದ್ದೆಗಳು ಅಲಂಕರಿಸುತ್ತಿದ್ದಾರೆ. ನೀವು ವಿದ್ಯಾರ್ಥಿ ಜೀವನದಲ್ಲಿ ಕಷ್ಟಪಟ್ಟು ಓದಿದಾಗ ಮಾತ್ರ ಉನ್ನತ ಹುದ್ದೆ ಪಡಯಲು ಸಾಧ್ಯವಾಗುತ್ತದೆ ಇಂತಹ ವಿಚಾರ ಸಂಕಿರಣದಿಂದ ಇತಿಹಾಸ ವಿಷಯಗಳನ್ನು ಅರಿತುಕೊಂಡು ಸ್ಫರ್ಧಾತ್ಮ ಪರೀಕ್ಷೆಗಳನ್ನು ಎದುರಿಸಿ ಯಶಸ್ವಿಯಾಗಬೇಕೆಂದು ಮಾರ್ಮಿಕವಾಗಿ ನುಡಿದರು.

ಕಾರ್ಯಕ್ರಮಘನಅಧ್ಯಕ್ಷತೆಯನ್ನು ವಹಿಸಿದ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. (ಮೇಜರ) ಪಿ. ವಿಠ್ಠಲ ರಡ್ಡಿಯವರು ಮಾತನಾಡುತ್ತಾ ಇತಿಹಾಸ ಅರಿತವನು ಮಾತ್ರ ಇತಿಹಾಸ ಸೃಷ್ಟಿಮಾಡುತ್ತಾನೆ ಗತಕಾಲದ ವಿಷಯಗಳು ನಾವು ಅರಿತು–ಕೊಂಡಾಗ ನಮ್ಮ ಅಂದಿನ ಕಾಲದ ಭವ್ಯ ಇತಿಹಾಸವಾದ ಸಂಗೀತ, ನೃತ್ಯ, ಲಲಿತಕಲೆ, ಕಲೆ ಮತ್ತು ವಾಸ್ತುಶಿಲ್ಪ ಉದಾಹರಣೆಗೆ ರಾಯಚೂರು ಜಿಲ್ಲೆಯ ಮಸ್ಕಿ, ಸನ್ನತಿ, ಪಾಲ್ಕಿಗುಂಡ, ಜಟಿಂಗ್ ರಾಮೇಶ್ವರ ಇಂತಹ ಸ್ಥಳಗಳಲ್ಲಿ ಸಾಮ್ರಾಟ ಅಶೋಕನ ಶಾಸನಗಳು ದೊರೆತಿವೆ ಇವೆಲ್ಲವುಗಳ ಅಧ್ಯಯನದಿಂದ ನಾವು ನಮ್ಮ ಭವ್ಯ ಪರಂಪರೆಯನ್ನು ಅರಿತುಕೊಳ್ಳಬಹುದು ಉದಾಹರಣೆಗೆ ನಾಗಾವಿಯ 60 ಕಂಬದ ವಿಶ್ವವಿದ್ಯಾಲಯ, ಬೀದರಿನ ಮಹಮ್ಮದ ಗವಾನ ಮದರಸಾ, ಬೀದರ ಕೋಟೆ, ಕಲ್ಯಾಣದ ಕೋಟೆ ಅಂದಿನ ಕಾಲದ ಖರೇಜಗಳ ಬಗ್ಗೆ ಇತಿಹಾಸ ವಿದ್ಯಾರ್ಥಿಗಳಿಂದ ಇನ್ನಷ್ಟು ಸಂಶೋಧನೆಯಾಗಬೇಕೆಂದು ವಿದ್ಯಾರ್ಥಿಗಳಿಗೆ ಕರೆಕೊಟ್ಟರು.

ಕಾರ್ಯಕ್ರಮದ ಆರಂಭದಲ್ಲಿ ಮಹಾವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥರಾದ ಶ್ರೀಮತಿ ರೇಣುಕಾ ಎಂ. ಸ್ವಾಮಿಯವರ ತಂಡದಿಂದ ನಾಡಗೀತೆಯನ್ನು ಹಾಡಲಾಯಿತು ಕಾರ್ಯಕ್ರಮದ ಆಶಯ ನುಡಿಯನ್ನು ಇತಿಹಾಸ ವಿಭಾದ ಮುಖ್ಯಸ್ಥರಾದ ಡಾ. ಶಿವಲೀಲಾ ವೀರಯ್ಯಾ ಹೇಳಿದರೆ, ಸ್ವಾಗತವನ್ನು ಮಹಾವಿದ್ಯಾಲಯದ ಉಪ ಪ್ರಾಂಶುಪಾಲರಾದ ಶ್ರೀ ಅನೀಲಕುಮಾರ ಅಣದೂರೆಯವರು ನಡೆಸಿಕೊಟ್ಟರು ಹಿಂದಿ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಶ್ರೀ ಮಾರುತಿ ಭೀಮಣ್ಣಾ ನಿರೂಪಿಸಿದರೆ, ಇತಿಹಾಸ ವಿಭಾಗದ ಪ್ರಾಧ್ಯಾಪಕರಾದ ಶ್ರೀ ಬಸವರಾಜ ಬಿರಾದಾರ ವಂದಿಸಿದರು. ಕಾರ್ಯಕ್ರಮದಲ್ಲಿ ವಿವಿಧ ಮಹಾವಿದ್ಯಾಲಯದ ಪ್ರಾಂಶುಪಾಲರು, ಪ್ರಾಧ್ಯಾಪಕರು, ಬೋಧಕ ಹಾಗೂ ಬೋಧ–ಕೇತರ ಸಿಬ್ಬಂದಿಯವರು ಹಾಜರಿದ್ದರು.


# ಹಂಗರಗಾ -ಸಾವರಗಾಂವ ಮಧ್ಯದಲ್ಲಿನ ಬ್ರೀಡ್ಜ್-ಕಂ-ಬ್ಯಾರೇಜ ಕಾಮಗಾರಿಯ ಟೆಂಡರ್ ರದ್ದು



ಮಲ್ಲಮ್ಮ ನುಡಿ ವಾರ್ತೆ

ಔರಾದ:ಜೂ.4:ಬೀದರ ಜಿಲ್ಲೆಯ ಔರಾದ(ಬಾ) ತಾಲೂಕಿನ ಹಂಗರಗಾ ಮತ್ತು ಸಾವರಗಾಂವ ಗ್ರಾಮದ ಮಧ್ಯದಲ್ಲಿನ ಬ್ರೀಡ್ಜ್–ಕಂ–ಬ್ಯಾರೇಜ 57 ಕೋಟಿ ಅನುದಾನದ ಕಾಮಗಾರಿಗೆ ಕರೆಯಲಾಗಿದ್ದ ಟೆಂಡರ್ ರದ್ದು ಪಡೆಸಿರುವ ಬಗ್ಗೆ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ವಿಭಾಗ ಬೀದರನ ಕಾರ್ಯನಿರ್ವಾಹಕ ಇಂಜಿನಿಯರರು ಸಮಾಜ ಸೇವಕ ಗುರುನಾಥ ವಡ್ಡೆ ಇವರ ಹೆಸರಿಗೆ ಬರೆದ ಪತ್ರದಲ್ಲಿ ತಿಳಿಸಿರುತ್ತಾರೆ. ದಿನಾಂಕ: 05/05/2025 ರಂದು ಗುರುನಾಥ ವಡ್ಡೆಯವರು ಕಾರ್ಯದರ್ಶಿಗಳು, ಕಲ್ಯಾಣ ಕರ್ನಾಟಕ ಅಭೀವೃದ್ಧಿ ಮಂಡಳಿ ಕಲಬುರ್ಗಿ, ಜಿಲ್ಲಾಧಿಕಾರಿಗಳು ಬೀದರ ಹಾಗೂ ಕಾರ್ಯನಿರ್ವಾಹಕ ಅಭಿಯಂತರರು ಸಣ್ಣನೀರಾವರಿ ವಿಭಾಗ ಬೀದರ ಇವರಿಗೆ ಮನವಿ ಸಲ್ಲಿಸಿ, ಹಂಗರಗಾ ಮತ್ತು ಸಾವರಗಾಂವ ಗ್ರಾಮದ ಮಧ್ಯದಲ್ಲಿನ ಬ್ರೀಡ್ಜ್–ಕಂ–ಬ್ಯಾರೇಜ ಬಗ್ಗೆ ಈಗಾಗಲೇ ಕರ್ನಾಟಕ ಲೋಕಾಯುಕ್ತ ಸಂಸ್ಥೆಗೆ ಆರು ದೂರುಗಳು ಸಲ್ಲಿಸಲಾಗಿದ್ದು, ಸದರಿ ಪ್ರಕರಣಗಳು ತನಿಖಾ ಹಂತದಲ್ಲಿ ಇರುತ್ತವೆ. ಅಲ್ಲದೆ ಸರ್ಕಾರದಿಂದಲೂ ತನಿಖೆ ನಡೆಯುತ್ತಿದೆ. ಆದ್ದರಿಂದ ಇವೆರಡು ತನಿಖಾ ವರದಿಗಳು ಬರುವ ವರೆಗೆ ಹಂಗರಗಾ ಮತ್ತು ಸಾವರಗಾಂವ ಗ್ರಾಮದ ಮಧ್ಯದಲ್ಲಿನ ಬ್ರೀಡ್ಜ್–ಕಂ–ಬ್ಯಾರೇಜ ಕಾಮಗಾರಿಗೆ ಸಂಬಂಧಿಸಿದ ಟೆಂಡರ್ ಪ್ರಕ್ರೀಯೆ, ಭೂ–ಸ್ವಾಧಿನ ಪ್ರಕ್ರೀಯೆ, ಆಡಳಿತ ಹಾಗೂ ತಾಂತ್ರಿಕ ಅನುಮೋದನೆ ಹಾಗೂ ಅನುದಾನ ಬಿಡುಗಡೆ ಪ್ರಕ್ರೀಯೆಗಳು ಸ್ಥಗಿತಗೊಳಿಸಬೇಕೆಂದು ಮನವಿ ಮಾಡಲಾಗಿತ್ತು. ಈ ಬಗ್ಗೆ ಸಣ್ಣ ನೀರಾವರಿ ಇಲಾಖೆಯಿಂದ ಹಂಗರಗಾ ಮತ್ತು ಸಾವರಗಾಂವ ಗ್ರಾಮದ ಮಧ್ಯದಲ್ಲಿನ ಬ್ರೀಡ್ಜ್–ಕಂ–ಬ್ಯಾರೇಜ ಕಾಮಗಾರಿಯ ಟೆಂಡರ್ ರದ್ದು ಪಡೆಸಿರುವ ಬಗ್ಗೆ ಸಮಾಜ ಸೇವಕ ಗುರುನಾಥ ವಡ್ಡೆ ಇವರಿಗೆ ಪತ್ರದ ಮುಖಾಂತರ ತಿಳಿಸಲಾಗಿದೆ.

## ಪ್ರತಿಭಾ ಪುರಸ್ಕಾರ ಸಮಾರಂಭ ಇಂದು




ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ,ಜೂ.4: ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದಲ್ಲಿ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ವತಿಯಿಂದ ಗುರುವಾರ ಬೆಳಿಗ್ಗೆ 11 ಗಂಟೆಗೆ ಎಸ್ಸೆಸ್ಸೆಲ್ಸಿಯಲ್ಲಿ ಅಗ್ರಶ್ರೇಣಿಯಲ್ಲಿ ಪಾಸಾದ ವಿದ್ಯಾರ್ಥಿಗಳಿಗಾಗಿ ಪ್ರತಿಭಾ ಪುರಸ್ಕಾರ ಸಮಾರಂಭ ಹಮ್ಮಿಕೊಳ್ಳಲಾಗಿದೆ. ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಸಮಾರಂಭದ ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ. ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ ಸಮಾರಂಭ ಉದ್ಘಾಟಿಸಲಿದ್ದಾರೆ. ಆಡಳಿತಾಧಿಕಾರಿ ಮೋಹನ ರೆಡ್ಡಿ ಅಧ್ಯಕ್ಷತೆ ವಹಿಸಲಿದ್ದಾರೆ.

ಹಿರಿಯ ಪತ್ರಕರ್ತ ದೇವಯ್ಯ ಗುತ್ತೇದಾರ್, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ, ಯುವ ಉದ್ಯಮಿ ವಿವೇಕ ದೀಪಕ ವಾಲಿ, ಸೂರ್ಯ ಫೌಂಡೇಶನ್ ರಾಜ್ಯ ಸಂಚಾಲಕ ಗುರುನಾಥ ರಾಜಗೀರಾ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಪ್ರಾಚಾರ್ಯರಾದ ಬಸವರಾಜ ಮೊಳಕೀರೆ, ಪಿ.ರಾಜು, ರಂಗಾರೆಡ್ಡಿ, ಮಹೇಶ ಮಹಾರಾಜ, ಪ್ರವೀಣ ಖಂಡಾಳೆ ಸೇರಿದಂತೆ ಮುಂತಾದವರು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಆರ್.ಸಿ.ಬಿ ತಂಡ ಐಪಿಎಲ್ 18ರ ಚಾಂಪಿಯನ ಆಗಿದ್ದಕ್ಕೆ ಸಂಭ್ರಮ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜೂ.4:ಇಂಡಿಯನ್ ಪ್ರಿಮೀಯರ ಲೀಗ್ ನ 18ನೇ ಅವೃತ್ತಿಯಲ್ಲಿ ಮೊದಲ ಬಾರಿ ಚಾಂಪಿಯನ ಆಗಿ ಟ್ರೋಫಿ ಎತ್ತಿ ಹಿಡಿದದ್ದಕ್ಕೆ ಗಲ್ಲಿಯಿಂದ ದಿಲ್ಲಿವರಿಗೆ ಅಭಿಮಾನಿಗಳು ಸಂಭ್ರಮ ಆಚರಣೆ ಮಾಡಿದರು. ಕಮಲನಗರ ತಾಲೂಕಿನಲ್ಲಿಕೂಡ ಆರ್. ಸಿ. ಬಿ. ತಂಡದ ಪ್ರಥಮ ಟ್ರೋಫಿಯ ವಿಜಯೋತ್ಸವ ಎಲ್ಲೆಡೆ ನಡೆಯಿತು, ಅಭಿಮಾನಿಗಳು ಪಟಾಕಿ ಸಿಡಿಸಿ, ಸಿಹಿ ಹಂಚಿಕೊಂಡು ತಂಡಕ್ಕೆ ಜಯಘೋಷ ಹೇಳುತ್ತಾ ಸಂಭ್ರಮ ಸಡಗರದಿಂದ ಆಚರಣೆ ನಡೆಯಿತು. ಈ ಸಂದರ್ಭದಲ್ಲಿ ಸಂಗಮನಾಥ ಬಿರಾದಾರ, ರಾಜಕುಮಾರ ಕುಂಬಾಗಿರೆ, ಸಾಯಿಶರಣ ಶ್ರೀಗಿರೆ, ಪರಮೇಶ ರಾಂಪುರೆ, ಸುನಿಲ ಚಾಂಡೇಶ್ವರೆ, ನಿಖಿಲ ಶ್ರೀಗಿರೆ, ಪವನ ರಾಂಪುರೆ, ಚಂದ್ರಶೇಖರ ಮೆಹತ್ರೆ, ಸಂಜುಕುಮಾರ ರಾಂಪುರೆ, ನಾಗರಾಜ ಸ್ವಾಮಿ, ದೀಪಕ ಬಿರಿಗೆ ನಾಗರಾಜ ರಾಂಪುರೆ, ಕಿರಣ ಪಾಟೀಲ, ಭಾಗೇಶ ಬನವಾಸೆ, ಸೇರಿದಂತೆ ಇನ್ನಿತರ ಇದ್ದರು.

## ಜ್ಞಾನ ಯಾರೂ ಕಸಿಯಲಾರದ ಶಾಶ್ವತ ಸಂಪತ್ತು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.4: ಮನುಷ್ಯನ ಜೀವನವನ್ನು ಕತ್ತಲೆಯಿಂದ ಬೆಳಕಿನೆಡೆಗೆ ತರುವ ಜ್ಞಾನ ಯಾರೂ ನಮ್ಮಿಂದ ಕಸಿಯಲಾರದ ಶಾಶ್ವತ ಸಂಪತ್ತು ಆಗಿದೆ ಎಂದು ಸಂಸ್ಥೆಯ ಆಡಳಿತಾಧಿಕಾರಿ ಮೋಹನರೆಡ್ಡಿ ಹೇಳಿದರು.

ತಾಲ್ಲೂಕಿನ ಕರಡ್ಯಾಳದ ಶ್ರೀ ಚನ್ನಬಸವೇಶ್ವರ ಗುರುಕುಲ ಕನ್ನಡ ಮಾಧ್ಯಮದ ಪ್ರಾಥಮಿಕ, ಪ್ರೌಢ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಶಾಲಾ ಪ್ರಾರಂಭೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶಿಕ್ಷಣ ಮತ್ತು ಸಂಸ್ಕಾರ ಒಂದು ನಾಣ್ಯದ ಎರಡು ಮುಖಗಳಾಗಿವೆ. ವಿದ್ಯಾರ್ಥಿಗಳು ಬಾಲ್ಯದಿಂದಲೇ ಗುಣಮಟ್ಟದ ಶಿಕ್ಷಣವನ್ನು ಪಡೆದುಕೊಳ್ಳಬೇಕು. ಜೊತೆಗೆ ಆದರ್ಶ ಮಾನವೀಯ ಗುಣಗಳನ್ನು ಮೈಗೂಡಿಸಿಕೊಂಡು ದೇಶದ ಸತ್ಪ್ರಜೆಗಳಾಗಬೇಕು ಎಂದು ತಿಳಿಸಿದರು.

ಒಂದು ವರ್ಷದ ನಿರಂತರ ಮತ್ತು ಕಠಿಣ ಪ್ರಯತ್ನದ ಫಲವಾಗಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಪಡೆಯಲು ಸಾಧ್ಯವಿದೆ. ಹಾಗಾಗಿ, ವಿದ್ಯಾರ್ಥಿಗಳು ಶಾಲಾ ಆರಂಭದ ಮೊದಲ ದಿನದಿಂದಲೇ ಶಿಕ್ಷಣಕ್ಕೆ ವಿಶೇಷ ಒತ್ತು ನೀಡಿ ಪಠ್ಯ ವಿಷಯವನ್ನು ಪರಿಪೂರ್ಣವಾಗಿ ಅರ್ಥೈಸಿಕೊಳ್ಳಬೇಕು ಎಂದು ಹೇಳಿದರು. ವಿದ್ಯಾರ್ಥಿಗಳ ಮೇಲೆ ಹೂಮಳೆಗೈಯುವುದರ ಮೂಲಕ ವರ್ಗ ಕೋಣೆಗಳಿಗೆ ಬರಮಾಡಿಕೊಳ್ಳಲಾಯಿತು.

ಮುಖ್ಯಶಿಕ್ಷಕರಾದ ಮಹೇಶ ಮಹಾರಾಜ್, ಮಹೇಶಕುಲಕರ್ಣಿ, ಸುಜಾತಾ, ಎಸ್ ಎಸ್ ಎಲ್ ಸಿ ಸಂಯೋಜಕ ಪ್ರವೀಣ ಖಂಡಾಳೆ, ರಾಜಕುಮಾರ ಮೋರಗೆ, ಲಕ್ಷ್ಮಣ ಮೇತ್ರೆ, ಬಸವರಾಜ್ ಪ್ರಭಾ, ಕಾವೇರಿ ಜ್ಯಾಂತೆ, ಅನಿಲ್ ಕುಮಾರ ಪಾಟೀಲ,

ಓಂಕಾರ ಹಾರಕೂಡೆ, ನಾಗಶೆಟ್ಟಿ ಬಿರಾದಾರ ಸೇರಿದಂತೆ ಅನೇಕರು ಇದ್ದರು.

# ಕೃಷಿಯ ಜ್ಞಾನವನ್ನು ನೇರವಾಗಿ ರೈತರಿಗೆ ಜಮೀನಿಗೆ ಕೊಂಡ್ಯೊಯುವುದೇ 'ವಿಕಸಿತ ಕೃಷಿ ಸಂಕಲ್ಪ ಅಭಿಯಾನ'ದ ಉದ್ದೇಶ: ಡಾ.ಪಾಲಯ್ಯ.ಪಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.04–ಕೃಷಿಯ ಜ್ಞಾನವನ್ನು ನೇರವಾಗಿ ರೈತರಿಗೆ ಜಮೀನಿಗೆ ಕೊಂಡ್ಯೊಯುವುದು 'ವಿಕಸಿತ ಕೃಷಿ ಸಂಕಲ್ಪ ಅಭಿಯಾನ'ದ ಮುಖ್ಯ ಉದ್ದೇಶವಾಗಿದೆ ಎಂದು ಕೃಷಿ ವಿಜ್ಞಾನ ಕೇಂದ್ರ ಬಳ್ಳಾರಿ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥರಾದ ಡಾ.ಪಾಲಯ್ಯ.ಪಿ ಅವರು ಹೇಳಿದರು.




ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಇಲಾಖೆ, ಕೃಷಿ ಮತ್ತು ರೈತರ ಕಲ್ಯಾಣ ಸಚಿವಾಲಯ, ಭಾರತೀಯ ಕೃಷಿ ಅನುಸಂಧಾನ ಪರಿಷತ್ ಇವರ ಸಂಯುಕ್ತಾಶ್ರಯದಲ್ಲಿ "ವಿಜ್ಞಾನಿಗಳ ನಡೆ ರೈತರ ಕಡೆ" ಎಂಬ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಅಂಗವಾಗಿ ಕಂಪ್ಲಿ ತಾಲ್ಲೂಕಿನ ನೆಲ್ಲುಡಿ,ಎಮ್ಮಿಗನೂರು ಗ್ರಾಮಗಳಲ್ಲಿ ಮಂಗಳವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಹಗರಿಯ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳು ಮತ್ತು ಕೃಷಿ ಇಲಾಖೆಯ ಅಧಿಕಾರಿಗಳ ತಂಡವು ಜೂ.12 ರವರೆಗೆ ಜಿಲ್ಲೆಯ ವಿವಿಧ ತಾಲ್ಲೂಕುಗಳ ಗ್ರಾಮಗಳಿಗೆ ಭೇಟಿ ನೀಡಿ ರೈತರಿಗೆ ಕೃಷಿ ಜ್ಞಾನ ಕುರಿತು ತಿಳುವಳಿಕೆ ನೀಡುವರು. ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ರೈತರಿಗೆ ಬೇಕಾಗಿರುವ ಸಂಶೋಧನೆಗಳನ್ನು ಕೃಷಿ ವಿಜ್ಞಾನಿಗಳಿಗೆ ತಲುಪಿಸಿ, ಅವರು ಹೊಸ ಸಂಶೋಧನೆ ಮಾಡುವುದರಿಂದ ಕೃಷಿಯಲ್ಲಿ ಸ್ವಾವಲಂಬನೆ ಬದುಕು ಕಟ್ಟಿಕೊಳ್ಳಬಹುದು ಎಂದು ಹೇಳಿದರು. ಅಭಿಯಾನದಲ್ಲಿ ಬೆಂಗಳೂರಿನ ಐಸಿಎಆರ್ ನ್ಯಾಷನಲ್ ಬ್ಯೂರೋಆಫ್ ಅಗ್ರಿಕಲ್ಚರಲ್ ಇನ್ಸೆಕ್ಟ್ ರಿರ್ಸಸಸ್ ವಿಜ್ಞಾನಿಗಳಾದ ಡಾ.ಡೇವಿಡ್ ಕೆ.ಜೆ ಅವರು ಮಾತನಾಡಿ ರೈತರಿಗೆ ಭತ್ತದ ಬೆಳೆಯಲ್ಲಿ ಸಮಗ್ರ ರೋಗ ಹಾಗೂ ಕೀಟ ನಿಯಂತ್ರಣ ಜೊತೆಗೆ ಸಾವಯವ ಕೃಷಿ ಪದ್ಧತಿಯಲ್ಲಿ ಜೈವಿಕ ಕೀಟನಾಶಕ ಹಾಗು ಸಸ್ಯಜನ್ಯ ಪಿಡೇನಾಶಕಗಳ ಬಳಕೆಯ ಬಗ್ಗೆ ತಿಳಿಸಿದರು. ವಿಜ್ಞಾನಿಗಳಾದ ಡಾ.ನವೀನ್ ಕುಮಾರ್.ಪಿ ಅವರು ಮಾತನಾಡಿ, ರೈತರಿಗೆ ಅತಿಯಾದ ಪೀಡೆನಾಶಕಗಳ ಬಳಕೆಯಿಂದ ಉಂಟಾಗುವ ದುಷ್ಪರಿಣಾಮಗಳು ಹಾಗೂ ಇದರಿಂದ ಆರೋಗ್ಯಕ್ಕೆ ಆಗುವ ಹಾನಿಕಾರಕದ ಬಗ್ಗೆ ರೈತರಲ್ಲಿ ಅರಿವು ಮೂಡಿಸಿದರು.

ಕಂಪ್ಲಿ ರೈತ ಸಂಪರ್ಕ ಕೇಂದ್ರದ ಸಹಾಯಕ ಕೃಷಿ ಅಧಿಕಾರಿ ಜ್ಯೋತಿ.ಟಿ ಅವರು ಕೃಷಿ ಇಲಾಖೆಯಲ್ಲಿ ಸಿಗುವ ಸವಲತ್ತುಗಳ ಬಗ್ಗೆ ಹಾಗು ರೈತರಿಗೆ ರಿಯಾಯಿತಿ ದರದಲ್ಲಿ ಕೀಟ ಮತ್ತು ರೋಗ ನಿರ್ವಹಣೆಗೆ ಬೇಕಾದ ಪರಿಕರಗಳ ಬಗ್ಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ವಿವಿಧ ಗ್ರಾಮಗಳ ರೈತರು ಹಾಜರಿದ್ದರು.

## ಜೂ.06 ರಂದು ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.04–ಲ್ಲಾ ಕೇಂದ್ರದಲ್ಲಿ ಜೂ.12 ರಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮ ಕುರಿತು ಚರ್ಚಿಸಲು ಜೂ.06 ರಂದು ಬೆಳಿಗ್ಗೆ 11.30 ಗಂಟೆಗೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಏರ್ಪಡಿಸಲಾಗಿದೆ.

ಜಿಲ್ಲಾ ಮಟ್ಟದ ಅಧಿಕಾರಿಗಳು ತಪ್ಪದೇ ಹಾಜರಾಗಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ತಿಳಿಸಿದ್ದಾರೆ.

## ಮಿಲಿಟರಿ ಬಾಲಕಿಯರ ವಸತಿ ನಿಲಯ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.04–ಧಾರವಾಡ ಶಹರದ ಸಪ್ತಾಪೂರ ರಸ್ತೆಯಲ್ಲಿರುವ ಮಿಲಿಟರಿ ಬಾಲಕಿಯರ ವಸತಿ ನಿಲಯದಲ್ಲಿ 2025–26ನೇ ಶೈಕ್ಷಣಿಕ ವರ್ಷಕ್ಕಾಗಿ ಬಳ್ಳಾರಿ ಜಿಲ್ಲೆಯಲ್ಲಿ ಯುದ್ಧದಲ್ಲಿ ಮಡಿದ ಯೋಧರ ಮತ್ತು ಮಾಜಿ ಸೈನಿಕರ ಹೆಣ್ಣು ಮಕ್ಕಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಬಾಲಕಿಯರ ವಿದ್ಯಾರ್ಥಿನಿಲಯದಲ್ಲಿ 5 ನೇ ತರಗತಿಯಿಂದ ಪಿಯುಸಿ – 2 ರ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗುತ್ತದೆ. ವಸತಿ ನಿಲಯದಲ್ಲಿ ವಾಸ್ತವ್ಯ ಮತ್ತು ಊಟೋಪಚಾರಗಳು ಉಚಿತವಾಗಿದ್ದು, ಮಾಜಿ ಸೈನಿಕರ ಹೆಣ್ಣು ಮಕ್ಕಳು ಈ ಸೌಲಭ್ಯದ ಉಪಯೋಗ ಪಡೆಯಬಹುದಾಗಿದೆ.

ವಸತಿ ನಿಲಯದಲ್ಲಿ ಧಾರವಾಡ ನಗರದಲ್ಲಿರುವ ವಿದ್ಯಾಸಂಸ್ಥೆಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿನಿಯರಿಗೆ ಮಾತ್ರ ನಿಲಯದಲ್ಲಿ ಪ್ರವೇಶ ನೀಡಲಾಗುವುದು. ಅರ್ಜಿಗಳನ್ನು ಜಂಟಿ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಉದಯ ಹಾಸ್ಟೆಲ್ ಸರ್ಕಲ್ ಸೈನಿಕ ವಿಶ್ರಾಂತಿ ಗೃಹ ಆವರಣ, ಧಾರವಾಡ ಇಲ್ಲಿ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಜೂ.15 ರೊಳಗಾಗಿ ಮರಳಿ ಇದೇ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಅಥವಾ ದೂ.0836–2440176 ಗೆ ಸಂಪರ್ಕಿಸಬಹುದು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುರುಗೋಡು: ವೈಯಕ್ತಿಕ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.04–ಕುರುಗೋಡು ಪುರಸಭೆ ವ್ಯಾಪ್ತಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ 2025–26ನೇ ಸಾಲಿನ ಎಸ್.ಸಿ.ಎಸ್.ಪಿ ಯೋಜನೆಯಡಿ ವೈಯಕ್ತಿಕ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಕುರುಗೋಡು ಪುರಸಭೆಯ ಮುಖ್ಯಾಧಿಕಾರಿ ತಿಳಿಸಿದ್ದಾರೆ.

ಸೌಲಭ್ಯದ ವಿವರ:

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳು ನಿವೇಶನ ಹೊಂದಿದ್ದಲ್ಲಿ, ಪಕ್ಕಾ ಮನೆ ನಿರ್ಮಾಣ ಮಾಡಲು ಸಹಾಯಧನ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಶಸ್ತ್ರ ಚಿಕಿತ್ಸೆಗಾಗಿ ಸಹಾಯಧನ. ಎಂಬಿಬಿಎಸ್ ಮತ್ತು ಬಿಇ ಅರ್ಹ ವಿದ್ಯಾರ್ಥಿಗಳಿಗೆ ಲ್ಯಾಪ್‌ಟ್ಯಾಪ್ ಖರೀದಿಗಾಗಿ ಸಹಾಯಧನ ನೀಡಲಾಗುತ್ತದೆ.

ಬೇಕಾದ ದಾಖಲೆಗಳು:

ಆಧಾರ್ ಕಾರ್ಡ್, ಒಂದು ಭಾವಚಿತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಖಾತೆಯ ಪ್ರತಿ ಸಲ್ಲಿಸಬೇಕು.

ಆಸಕ್ತ ಅರ್ಹ ಅಭ್ಯರ್ಥಿಗಳು ಅರ್ಜಿಗಳನ್ನು ಪುರಸಭೆ ಕಚೇರಿಯಿಂದ ಪಡೆದು ಭರ್ತಿ ಮಾಡಿ ಜೂನ್ 16 ರೊಳಗಾಗಿ ಸಲ್ಲಿಸಬೇಕು. ತಡವಾಗಿ ಬಂದ ಮತ್ತು ಅಪೂರ್ಣ ದಾಖಲಾತಿ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಕುರುಗೋಡು ಪುರಸಭೆ ಕಚೇರಿಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಂಪ್ಲಿ: ಜೂ.05 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.04–ಕಂಪ್ಲಿ ಜೆಸ್ಕಾಂ ವ್ಯಾಪ್ತಿಯ 33 ಕೆ.ವಿ ಉಪ ಕೇಂದ್ರದ ವಿದ್ಯುತ್ ನಿರ್ವಹಣೆ ಕಾರ್ಯ ಕೈಗೊಳ್ಳುತ್ತಿರುವುದರಿಂದ ಜೂ.05 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ಕಂಪ್ಲಿ ವ್ಯಾಪ್ತಿಯ ರಾಮಸಾಗರ, ನಂ.10 ಮುದ್ದಾಪುರ, ಕಣಿವೆ ತಿಮ್ಮಾಪುರ, ಬೆಳಗೋಡುಹಾಳು, ಶಂಕರ್‌ಸಿಂಗ್ ಕ್ಯಾಂಪ್, ಕೊಟ್ಟಾಲ್ ಗೆ ಸಂಬಂದಿಸಿದ ಎಫ್–3 ಬೆಳಗೋಡುಹಾಳು ಐಪಿ, ಎಫ್–2 ಮುದ್ದಾಪುರ ಐಪಿ, ಎಫ್–4 ರಾಮಸಾಗರ ಐಪಿ, ಎಫ್–5 ಗೌರಮ್ಮ ಕೆರೆ ಐಪಿ ಸೆಟ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಹಾಗೂ ಐಪಿ ಸೆಟ್ ಮಾರ್ಗಗಳಲ್ಲಿ ಬೆಳಿಗ್ಗೆ 4 ಗಂಟೆಯಿಂದ ವಿದ್ಯುತ್ ಸರಬರಾಜು ಮಾಡಲಾಗುವುದು.

ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಕಂಪ್ಲಿ ಜೆಸ್ಕಾಂನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂ.08 ರ ವರೆಗೆ ವಿಶೇಷ ಶಿಬಿರ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.04–ನ್ಯಾಯಮೂರ್ತಿ ಡಾ.ಹೆಚ್.ಎನ್.ನಾಗಮೋಹನ ದಾಸ್ ರವರ ಏಕ ಸದಸ್ಯ ವಿಚಾರಣಾ ಆಯೋಗದ ನಿರ್ದೇಶನದಂತೆ ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಸಮೀಕ್ಷೆ ಕಾರ್ಯದ ವಿಶೇಷ ಶಿಬಿರ(ಬೂತ್ ಮಟ್ಟದ) ಅವಧಿಯು ಜೂ.08 ರ ವರೆಗೆ ವಿಸ್ತರಣೆ ಮಾಡಲಾಗಿದೆ ಎಂದು ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಬಿ.ಮಲ್ಲಿಕಾರ್ಜುನ ಅವರು ತಿಳಿಸಿದ್ದಾರೆ.

ಪರಿಶಿಷ್ಟ ಜಾತಿ ಜನಾಂಗದ ಸಮೀಕ್ಷೆ ಕಾರ್ಯವು ನಿರೀಕ್ಷಿತ ಮಟ್ಟದಲ್ಲಿ ಪೂರ್ಣಗೊಂಡಿರುವುದಿಲ್ಲವೆಂದು ತಿಳಿಸಿ ಸಮೀಕ್ಷಾ ಅವಧಿಯನ್ನು ವಿಸ್ತರಿಸುವಂತೆ ವಿವಿಧ ಸಂಘ–ಸಂಸ್ಥೆಗಳ ಮುಖಂಡರುಗಳು ಕೋರಿರುವ ಹಿನ್ನಲೆಯಲ್ಲಿ ಪರಿಶಿಷ್ಟ ಜಾತಿಯ ವರ್ಗದವರು ವಿಶೇಷ ಶಿಬಿರಗಳಲ್ಲಿ ಭಾಗವಹಿಸಿ ಮಾಹಿತಿ ನೋಂದಾಯಿಸಬೇಕು.

ಆನ್ ಲೈನ್ ಮೂಲಕ ಸ್ವಯಂ ಘೋಷಣೆ ಪ್ರಕ್ರಿಯೆಯು ಜೂ.08 ರವರೆಗೆ ಮುಂದುವರೆಯಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಜಿಲ್ಲಾ ನ್ಯಾಯಾಲಯದಲ್ಲಿ 'ವಿಶ್ವ ಪರಿಸರ ದಿನಾಚರಣೆ'

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.04–ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬಳ್ಳಾರಿ ಜಿಲ್ಲಾ ವಕೀಲರ ಸಂಘ ಮತ್ತು ಅರಣ್ಯ ಇಲಾಖೆ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಇವರ ಸಂಯುಕ್ತಾಶ್ರಯದಲ್ಲಿ "ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸುವ ಕಡೆಗೆ" ಎಂಬ ಘೋಷವಾಕ್ಯದೊಂದಿಗೆ ಜೂ.05 ರಂದು ಬೆಳಿಗ್ಗೆ 10 ಗಂಟೆಗೆ ನಗರದ ತಾಳೂರು ರಸ್ತೆಯಲ್ಲಿನ ಜಿಲ್ಲಾ ನ್ಯಾಯಾಲಯ ಸಂಕೀರ್ಣ ಆವರಣದಲ್ಲಿ 'ವಿಶ್ವ ಪರಿಸರ ದಿನಾಚರಣೆ' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ತಿಳಿಸಿದ್ದಾರೆ.

## ಜೂ.06 ರಂದು ವಿದ್ಯುತ್ ವ್ಯತ್ಯಯ

ಬಳ್ಳಾರಿ,ಜೂ.04–ಬಳ್ಳಾರಿ ಗ್ರಾಮೀಣ ಉಪ–ವಿಭಾಗ ಜೆಸ್ಕಾಂ ರ ವ್ಯಾಪ್ತಿಗೆ ಬರುವ 33/11ಕೆ.ವಿ ರೂಪನಗುಡಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣೆ ಮತ್ತು ದುರಸ್ತಿ ಕಾರ್ಯ ಹಮ್ಮಿಕೊಳ್ಳುತ್ತಿರುವುದರಿಂದ ಜೂನ್ 06 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ಗ್ರಾಮೀಣ ಉಪ–ವಿಭಾಗದ ವ್ಯಾಪ್ತಿಯ ಎಫ್–95 ರೂಪನಗುಡಿ ಐಪಿ ಮಾರ್ಗದ ರೂಪನಗುಡಿ, ರಾಯಾಪುರ, ಕುಂಟನಹಾಳ್, ಕೃಷಿ ಪ್ರದೇಶಗಳು ಮತ್ತು ಎಫ್–96 ರೂಪನಗುಡಿ ಎನ್‌ಜೆವೈ ಮಾರ್ಗದ ರೂಪನಗುಡಿ, ರಾಯಾಪುರ, ಕುಂಟನಹಾಳ್ ಗ್ರಾಮಗಳು ಸೇರಿದಂತೆ ಇನ್ನೂ ಮುಂತಾದ ಪ್ರದೇಶಗಳ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

## ಜೂ.06 ರಂದು ಬಳ್ಳಾರಿ ಗ್ರಾಮೀಣ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.04–ಬಳ್ಳಾರಿ ಗ್ರಾಮೀಣ ಉಪ–ವಿಭಾಗದ ಜೆಸ್ಕಾಂ ವ್ಯಾಪ್ತಿಗೆ ಬರುವ 33/11ಕೆ.ವಿ ರ‍್ರಗುಡಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣೆ ಮತ್ತು ದುರಸ್ತಿ ಕಾರ್ಯ ಹಮ್ಮಿಕೊಳ್ಳುತ್ತಿರುವುದರಿಂದ ಜೂನ್ 06 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದೆ.

ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:

ಎಫ್–01 ಡಿ.ಎನ್.ಹಳ್ಳಿ ಎನ್.ಜೆ.ವೈ ಮಾರ್ಗದ ಡಿಎನ್.ಹಳ್ಳಿ, ಜಿ.ಎನ್.ಹಳ್ಳಿ, ತಂಬ್ರಳ್ಳಿ, ಜಾಲಿಚಿಂತೆ ಗ್ರಾಮಗಳು. ಎಫ್–02 ಜಿ.ಎನ್ ಹಳ್ಳಿ ಐಪಿ ಮಾರ್ಗದ ಜಿ.ಎನ್. ಹಳ್ಳಿ, ತಂಬ್ರಳ್ಳಿ, ಕೃಷಿ ಪ್ರದೇಶಗಳು. ಎಫ್–03 ಹಳೆ ರ‍್ರಗುಡಿ ಐಪಿ ಮಾರ್ಗದ ಹಳೆ ರ‍್ರಗುಡಿ, ಹೊಸ ರ‍್ರಗುಡಿ, ಸಿಂಧುವಾಳ, ಬೆಣಕಲ್ಲು ಕೃಷಿ ಪ್ರದೇಶಗಳು.

ಎಫ್–05 ಸಿಂಧುವಾಳ, ಸೋಲಾರ್ ಮಾರ್ಗ, ಹಳೆ ರ‍್ರಗುಡಿ, ಹೊಸ ರ‍್ರಗುಡಿ, ಸಿಂಧುವಾಳ, ಬೆಣಕಲ್ಲು, ಗೋನಾಳ್, ಜಾಲಿಹಾಳ್, ಬೊಮ್ಮನಹಾಳ್ ಗ್ರಾಮಗಳು. ಎಫ್–06 ಜಾಲಿಹಾಳ್ ಐಪಿ ಮಾರ್ಗದ ಎಂ.ಗೋನಾಳ್, ಜಾಲಿಹಾಳ್, ಬೊಮ್ಮನಹಾಳ್ ಕೃಷಿ ಪ್ರದೇಶಗಳು ಸೇರಿದಂತೆ ಇನ್ನೂ ಮುಂತಾದ ಪ್ರದೇಶಗಳ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

## ನಗರದ ವಿವಿಧೆಡೆ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂನ್ 04: ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗ–01ರ 33/11 ಕೆವಿ ಮಾರ್ಗ ದುರಸ್ತಿ ಕಾಮಗಾರಿ ನಿರ್ವಹಣಾ ಕಾರ್ಯ ಹಮ್ಮಿಕೊಂಡ ಪ್ರಯುಕ್ತ ಜೂನ್;05ರ ಬೆಳ್ಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 2 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕೋರಲಾಗಿದೆ.

ಅಂದು ಬೆಳಿಗ್ಗೆ ಕೃಷಿ ವಿಶ್ವವಿದ್ಯಾಲಯ, ಅಸ್ಕಿಹಾಳ, ಕೃಷ್ಣ ಮೇಡೌಸ್, ಬೈಪಾಸ್ ರೋಡ್, ಅಮರಾವತಿ ಕಾಲೋನಿ, ಹೊಸ ಡಿಸಿ ಆಫೀಸ್ ಸೇರಿದಂತೆ ಸುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532–226386, 08532–231999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗ–01ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಜಯನಗರ ಶ್ರೀ ಕೃಷ್ಣದೇವರಾಯ ವಿವಿ ಹಾಗೂ ಚಿಲಿಯ ಬರ್ನಾರ್ಡೊ ಒ ಹಿಗ್ಗಿನ್ಸ್ ವಿವಿ ಒಡಂಬಡಿಕೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.04–ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ ಬಳ್ಳಾರಿ ಹಾಗೂ ಸ್ಯಾಂಟಿಯಾಗೊ ಡಿ ಚಿಲಿಯ ಬರ್ನಾರ್ಡೊ ಒ ಹಿಗ್ಗಿನ್ಸ್ ವಿಶ್ವವಿದ್ಯಾಲಯವು ಶೈಕ್ಷಣಿಕ ಒಡಂಬಡಿಕೆ (ಎಂ–ಓಯು) ಒಪ್ಪಂದ ಕಾರ್ಯಕ್ರಮ ಬುಧವಾರ ಜೀವವಿಜ್ಞಾನ ಸಭಾಂಗಣದಲ್ಲಿ ನಡೆಯಿತು.



ಒಡಂಬಡಿಕೆ ನಂತರ ವಿವಿಯ ಕುಲಪತಿಗಳಾದ ಪ್ರೊ. ಎಂ ಮುನಿರಾಜು ಮಾತನಾಡಿ, ಶಿಕ್ಷಣದ ಭವಿಷ್ಯ, ಆವಿಷ್ಕಾರಗಳು ಹಾಗೂ ಗುಣಮಟ್ಟದ ಸಂಶೋಧನೆಯನ್ನು ಉತ್ತೇಜಿಸಲು ವಿಶ್ವಮಟ್ಟದ ವಿಶ್ವವಿದ್ಯಾಲಯಗಳೊಂದಿಗಿನ ಶೈಕ್ಷಣಿಕ ಒಡಂಬಡಿಕೆಗಳು ಮಹತ್ವದ್ದಾಗಿವೆ. ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಅಂತರಾಷ್ಟ್ರೀಯ ವಿವಿಗಳೊಂದಿಗಿನ ಮೂರನೇ ಶೈಕ್ಷಣಿಕ ಒಡಂಬಡಿಕೆಯಾಗಿದೆ ಎಂದು ತಿಳಿಸಿದರು.

ಗುಣಮಟ್ಟದ ಸಂಶೋಧನಾ ಲೇಖನಗಳು ಮತ್ತು ಉತ್ತಮ ಶಿಕ್ಷಣಕ್ಕೆ ಬೇಕಾದ ಅಂಶಗಳನ್ನು ನಿರೀಕ್ಷಿತ ಮಟ್ಟದಲ್ಲಿ ಸಾಧಿಸಲು ಅಂತಾರಾಷ್ಟ್ರೀಯ ಮಟ್ಟದಲ್ಲಿ ಒಡಂಬಡಿಕೆಗೆ ನಮ್ಮ ವಿಶ್ವವಿದ್ಯಾಲಯವು ಮುಂದಾಗಿದೆ ಎಂದರು.

ಬರ್ನಾರ್ಡೊ ಒ ಹಿಗ್ಗಿನ್ಸ್ ವಿವಿಯ ಪ್ರೊಸೀಸರ್ ಮೊರೇಲ್ಸ್ ವರ್ಡೆಜೊ ಮಾತನಾಡಿ, ಉನ್ನತ ಶಿಕ್ಷಣವನ್ನು ಜಗತ್ತಿನ ವಿಶ್ವವಿದ್ಯಾಲಯಗಳೊಂದಿಗೆ ಹಂಚಿಕೊಳ್ಳುವುದು ನಮ್ಮ ಉದ್ದೇಶವಾಗಿದೆ. ಬೋಧಕರಿಗೆ ಮತ್ತು ವಿದ್ಯಾರ್ಥಿಗಳಿಗೆ ಇದ–ರಿಂದ ಜಾಗತಿಕ ಮಟ್ಟದ ಸಂಶೋಧನೆಗಳಿಗೆ ವೇದಿಕೆ ಕಲ್ಪಿಸಿದಂತಾಗುತ್ತದೆ ಎಂದರು.

ವಿಶ್ರೀಕೃ ವಿಶ್ವವಿದ್ಯಾಲಯದ ಕುಲಪತಿಗಳು ಹಾಗೂ ಬರ್ನಾರ್ಡೊ ಒ ಹಿಗ್ಗಿನ್ಸ್ ವಿಶ್ವವಿದ್ಯಾಲಯದ ನಿರ್ದೇಶಕರು ಶೈಕ್ಷಣಿಕ ಒಡಂಬಡಿಕೆಗೆ ಪರಸ್ಪರ ಸಹಿ ಹಾಕುವುದರ ಮೂಲಕ ಒಪ್ಪಂದವನ್ನು ಮಾಡಿಕೊಳ್ಳಲಾಯಿತು.

ವಿವಿಯ ಮೌಲ್ಯಮಾಪನ ಕುಲಸಚಿವರಾದ ಡಾ. ಎನ್. ಎಂ ಸಾಲಿ, ಶುದ್ಧ ವಿಜ್ಞಾನ ನಿಕಾಯದ ಡೀನರಾದ ಡಾ. ಹನುಮೇಶ್ ವೈದ್ಯ ವೇದಿಕೆಯಲ್ಲಿದ್ದರು.

ವಿವಿಧ ನಿಕಾಯಗಳ ಡೀನರು, ಎಲ್ಲ ವಿಜ್ಞಾನ ವಿಭಾಗಗಳ ಮುಖ್ಯಸ್ಥರು, ಸಿಬ್ಬಂದಿ, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

## ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಡೆಂಗ್ಯೂ ವಿರೋಧಿ ಮಾಸಾಚರಣೆ ಸಪ್ತಾಹ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ಕುಕನೂರ ತಾಲೂಕಿನಲ್ಲಿ ಆರೋಗ್ಯ ಅರಿವು ಮೂಡಿಸುವ ಕಾರ್ಯಕ್ರಮ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕೊಪ್ಪಳ ಸಮುದಾಯ ಆರೋಗ್ಯ ಕೇಂದ್ರ ಕುಕನೂರ ವ್ಯಾಪ್ತಿಯಲ್ಲಿ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಕುಕನೂರ ಕಾಲೇಜ್ ವಿದ್ಯಾರ್ಥಿಗಳಿಗೆ ಡೆಂಗ್ಯೂ ವಿರೋಧಿ ಮಾಸಾಚರಣೆ ಸಪ್ತಾಹ ಕಾರ್ಯಕ್ರಮದ ಅಂಗವಾಗಿ ರಾಷ್ಟ್ರೀಯ ಆರೋಗ್ಯ ಜಾಗೃತಿ ಕಾರ್ಯಕ್ರಮದ ಕುರಿತು ಪ್ರಾಸ್ತಾವಿಕ ನುಡಿಗಳನ್ನು ಗೋವಿಂದರಾವ್ ಆರೋಗ್ಯ ಮಿತ್ರ. ಆಯುಷ್ಮಾನ್ ಭಾರತ ಪ್ರಧಾನ ಮಂತ್ರಿ ಜನ ಆರೋಗ್ಯ ಹಾಗೂ ಮುಖ್ಯಮಂತ್ರಿಗಳ ಆರೋಗ್ಯ ಕರ್ನಾಟಕ ಯೋಜನೆ ಬಗ್ಗೆ ಕಾಲೇಜ್ ವಿದ್ಯಾರ್ಥಿಗಳಿಗೆ ಸರಕಾರದ ಯೋಜನೆಗಳನ್ನು ಪಡೆದುಕೊಳ್ಳುವ ಮಾಹಿತಿಯನ್ನು ನೀಡಿದರು ಮತ್ತು ಕರಪತ್ರದೊಂದಿಗೆ ಸುವರ್ಣ ಆರೋಗ್ಯ ಸುರಕ್ಷ ಟ್ರಸ್ಟ್ ಅಡಿಯಲ್ಲಿ ಗಂಭೀರವಾದ ಕಾಯಿಲೆಗಳ ಬಗ್ಗೆ ಹಾಗೂ ಜ್ಯೋತಿ ಸಂಜೀವಿನಿ ಯೋಜನೆ ಬಗ್ಗೆ, ಹಾಗೂ ಅಂಗಾಂಗ ಕಸಿ ಯೋಜನೆ ಬಗ್ಗೆ, ಯಶಸ್ವಿನಿ ಯೋಜನೆ ಕುರಿತು ವಿದ್ಯಾರ್ಥಿಗಳಿಗೆ ಇವತ್ತಿನ ಪಾತ್ರ ಬಹು ಮುಖ್ಯವಾಗಿರುತ್ತದೆ ಮತ್ತು ಆರೋಗ್ಯ ಇಲಾಖೆಯ ರಾಷ್ಟ್ರೀಯ ಆರೋಗ್ಯ ಅಭಿಯಾನದ ಕಾರ್ಯಕ್ರಮದ ಯೋಜನೆಗಳನ್ನು ಯಾವ ರೀತಿ ಸದುಪಯೋಗ ತೆಗೆದುಕೊಳ್ಳುವ ಬಗ್ಗೆ ಮಾಹಿತಿಯನ್ನು ಆರೋಗ್ಯ ಮಿತ್ರ ಅವರು ಸ್ವ ವಿವರಣೆಯನ್ನು ನೀಡಿದರು.




ಸದರಿ ಕಾರ್ಯಕ್ರಮದ ಶಿಲ್ಪ ಸಿಎಚ್‌ಒ ಮಾರಕವಾದ ಡೆಂಗ್ಯೂ ರೋಗದಿಂದ ತಪ್ಪಿಸಿಕೊಳ್ಳಲು ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು ಕಾಲೇಜ್ ವಿದ್ಯಾರ್ಥಿ ವಿದ್ಯಾರ್ಥಿಗಳ ಪಾತ್ರ ಬಹು ತಮ್ಮ ತಮ್ಮ ಮನೆ ಸುತ್ತಮುತ್ತಲಿನ ಸೊಳ್ಳೆ ಉತ್ಪತ್ತಿಗೆ ಕಾರಣ ವಾಗುವ ತ್ಯಾಜ್ಯ ವಸ್ತು ಹಾಗೂ ಇನ್ನಿತರ ವಸ್ತುಗಳಲ್ಲಿ ನೀರು ನಿಲ್ಲದಂತೆ ಎಚ್ಚರ ವಹಿಸಬೇಕು ಎಂದು ವಿದ್ಯರ್ಥಿಗಳಿಗೆ ಕರೆ ನೀಡಿದರು.

ಸದರಿ ಕಾರ್ಯಕ್ರಮದ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಂಶುಪಾಲರಾದ ಚನ್ನಬಸಪ್ಪ ಹಳ್ಳಿಕೇರಿ ಇವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು. ಸದರಿ ಕಾರ್ಯಕ್ರಮ ಉದ್ದೇಶಿಸಿ ಆರೋಗ್ಯ ಇಲಾಖೆಯು ನಮ್ಮ ಸಂಸ್ಥೆಗೆ ಆಗಮಿಸಿದಾಗ ಹಲವಾರು ಯೋಜನೆಗಳ ಬಗ್ಗೆ ಮಾಹಿತಿಯನ್ನು ನೀಡುತ್ತಾ ಬಂದಿರುವ ಅದು ನಮ್ಮ ವಿದ್ಯಾರ್ಥಿಗಳ ಬಗ್ಗೆ ಮುಂದಿನ ದಿನಗಳಲ್ಲಿ ಸಮಾಜದಲ್ಲಿ ಉತ್ತಮ ಸಮಾಜವನ್ನು ನಿರ್ವಹಿಸುವ ವ್ಯಕ್ತಿಗಳು ಆಗಬಹುದು ಎಂದು ಹೇಳಿದರು

ಚಿದಾನಂದಪ್ಪ ಡಿ, ಮಂಜಪ್ಪ, ಆರೋಗ್ಯ ಇಲಾಖೆಯ ಕಾಳಪ್ಪ ಕುಂಬಾರ, ಸಿನಿಯರ ಕಾಲೇಜಿನ ಎಲ್ಲಾ ವಿಬಾಗದ ವಿರ್ಥಿಗಳು ವಿರ್ಥಿನಿಯರು ಬಾಗವಹಿಸಿ ಕಾರ್ಯಕಮ ಯಸಶ್ವಿಗೂಳಿಸಿದರು.

## ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ: ವಿವಿಧ ಸೌಲಭ್ಯಗಳಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.04–ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದಿಂದ 2025–26ನೇ ಸಾಲಿಗೆ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳಡಿ ಸಹಾಯಧನ ಮತ್ತು ಸಾಲ–ಸೌಲಭ್ಯಕ್ಕಾಗಿ ಆನ್‌ಲೈನ್ ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

**ಅರ್ಹತೆ:**

ನಿಗಮದ ಯೋಜನೆಗಳಲ್ಲಿ ಸೌಲಭ್ಯಗಳನ್ನು ಪಡೆಯಲು ಇಚ್ಛಿಸುವವರು ವಿಶ್ವಕರ್ಮ ಸಮುದಾಯ ಹಾಗೂ ಅದರ ಉಪ ಜಾತಿಗಳಿಗೆ ಸೇರಿರಬೇಕು. ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಕಡ್ಡಾಯ. ವಯೋಮಿತಿ 18 ವರ್ಷಗಳಿಂದ 55 ವರ್ಷಗಳ ಮಿತಿಯಲ್ಲಿರಬೇಕು. ನಿಗಮದ/ಸರ್ಕಾರದ ಯಾವುದಾದರೂ ಯೋಜನೆಗಳಡಿ ಈ ಹಿಂದೆ ಸೌಲಭ್ಯ ಪಡೆದಿರಬಾರದು.

ಕುಟುಂಬದ ಒಬ್ಬರಿಗೆ ಮಾತ್ರ ಸೌಲಭ್ಯ ಒದಗಿಸಲಾಗುವುದು. ಅರಿವು ಯೋಜನೆಯಡಿ ವಯೋಮಿತಿ 18 ವರ್ಷಗಳಿಂದ 30 ವರ್ಷಗಳ ಮಿತಿಯಲ್ಲಿರಬೇಕು ವಾರ್ಷಿಕ ವರಮಾನ ರೂ.3.50 ಲಕ್ಷ ಒಳಗಿರಬೇಕು. ಸ್ವಾವಲಂಬಿ ಸಾರಥಿ ಯೋಜನೆಯಡಿ ಅರ್ಜಿದಾರರು 21 ವರ್ಷ ಮೇಲ್ಪಟ್ಟು 45 ವರ್ಷದ ಮಿತಿಯಲ್ಲಿರಬೇಕು. ಅರ್ಜಿದಾರರು ತಮ್ಮ ಮೊಬೈಲ್ ಸಂಖ್ಯೆ ಹಾಗೂ ಬ್ಯಾಂಕ್ ಖಾತೆಯನ್ನು ತಮ್ಮ ಆಧಾರ್ ಸಂಖ್ಯೆಗೆ ಜೋಡಣೆ ಮಾಡಿಸಿರಬೇಕು. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ರೂ. 98 ಸಾವಿರ ಮತ್ತು ನಗರ ಪ್ರದೇಶದವರಿಗೆ ರೂ.1.20 ಲಕ್ಷ ಮಿತಿಯೊಳಗಿರಬೇಕು. ಆಯ್ಕೆ ಮಾಡುವಾಗ ಮಹಿಳೆಯರಿಗೆ ಶೇ.33, ವಿಕಲಚೇತನರಿಗೆ ಶೇ.5 ಹಾಗೂ ತೃತೀಯ ಲಿಂಗಿಗಳಿಗೆ ಶೇ.1 ಮೀಸಲಾತಿ ಇದೆ.

ನಿಗಮದ ಯೋಜನೆಗಳ ವಿವರ:

ಪಂಚವೃತ್ತಿ ಅಭಿವೃದ್ಧಿಗಾಗಿ ಆರ್ಥಿಕ ನೆರವು, ಸ್ವಯಂ ಉದ್ಯೋಗ ನೇರಸಾಲ ಯೋಜನೆ, ಅರಿವು–ಶೈಕ್ಷಣಿಕ ನೇರಸಾಲ ಯೋಜನೆ (ಹೊಸದು) ಮತ್ತು (ನವೀಕರಣ), ಗಂಗಾ ಕಲ್ಯಾಣ ಯೋಜನೆ, ಸ್ವಯಂ ಉದ್ಯೋಗ ನೇರಸಾಲ (ಬ್ಯಾಂಕ್‌ಗಳ ಸಹಯೋಗದೊಂದಿಗೆ), ಸ್ವಾವಲಂಬಿ ಸಾರಥಿ ಯೋಜನೆ, ವಿದೇಶಿ ವ್ಯಾಸಂಗ ಯೋಜನೆ (ಈ ಯೋಜನೆಯಡಿ ವಾರ್ಷಿಕ ವರಮಾನವು ರೂ.15 ಲಕ್ಷಗಳ ಮಿತಿಯಲ್ಲಿರಬೇಕು), ಸ್ವಾತಂತ್ರ್ಯ ಅಮೃತ ಮುನ್ನಡೆ ಯೋಜನೆ(ಈ ಯೋಜನೆಯಡಿ ಅರ್ಜಿ www.kaushalkar.com ನಲ್ಲಿ ಸಲ್ಲಿಸಬೇಕು). ಅರ್ಜಿದಾರರು ಅರ್ಜಿ ಸಲ್ಲಿಸುವಾಗ ಕಡ್ಡಾಯವಾಗಿ ಆಧಾರ್ ಕಾರ್ಡ್‌ನಲ್ಲಿರುವಂತೆ ಅರ್ಜಿದಾರರ ಹೆಸರು/ವಿಳಾಸ/ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಮತ್ತು ಬ್ಯಾಂಕ್ ಪಾಸ್ ಪುಸ್ತಕಗಳಲ್ಲಿ ತಾಳೆಯಾಗಬೇಕು(ಶ್ರೀ/ಶ್ರೀಮತಿ/ಕುಮಾರಿ ಮುಂತಾದ ಮಾಹಿತಿ).

ಬೆಂಗಳೂರು–ಒನ್/ಕರ್ನಾಟಕ–ಒನ್/ಅಟಲ್–ಜಿ ಜನಸ್ನೇಹಿ ಕೇಂದ್ರ ಮತ್ತು ನಾಗರೀಕ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಸೇವಾಸಿಂಧು ಪೋರ್ಟಲ್‌ನಡಿ ಅರ್ಜಿ ಸಲ್ಲಿಸಬಹುದು.

ವಿಶೇಷ ಸೂಚನೆ: 2023–24 ಹಾಗೂ 2024–25ನೇ ಸಾಲಿನಲ್ಲಿ ಯೋಜನೆಗೆ ಅರ್ಜಿ ಸಲ್ಲಿಸಿರುವ ಅರ್ಜಿದಾರರು ಮತ್ತೊಮ್ಮೆ ಬೇರೆ ಯೋಜನೆಗಳಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಅರ್ಜಿ ಸಲ್ಲಿಸಲು ಜುಲೈ 02 ಕೊನೆಯ ದಿನವಾಗಿದೆ (ಶೈಕ್ಷಣಿಕ ಸಾಲ ಯೋಜನೆಗಳಿಗೆ ಕೊನೆ ದಿನಾಂಕ ಇರುವುದಿಲ್ಲ). ಮಾಹಿತಿಗಾಗಿ ನಿಗಮದ ವೆಬ್‌ಸೈಮ್ https://kvcdcl.karnataka.gov.in ಅಥವಾ ನಿಗಮದ ಕೇಂದ್ರ ಕಚೇರಿಯ ದೂ.080–22374848, ಮೊ.7899899039 ಗೆ ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ನಗರದ ಅನಂತಪುರ ರಸ್ತೆಯ ನೂತನ ಜಿಲ್ಲಾಡಳಿತ ಭವನ ಕಚೇರಿಯ ಎರಡನೇ ಮಹಡಿಯ ಬಿ ಬ್ಲಾಕ್‌ನ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಕಚೇರಿ ಅಥವಾ ಸಹಾಯವಾಣಿ ಸಂಖ್ಯೆ:08392–267038 ಗೆ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕ ಟಿ.ಹೊನ್ನುರಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿಶ್ವ ಪರಿಸರ ದಿನ-ವಿಶೇಷ ಅಭಿಯಾನಕ್ಕೆ ಒತ್ತು

## ಪ್ಲಾಸ್ಟಿಕ್ ಮುಕ್ತ ಗ್ರಾಮ ಅಭಿಯಾನಕ್ಕೆ ಸಿಇಓ ಕುರೇರ ನಿರ್ದೇಶನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.4-ಜೂನ್ 5 ರಂದು ವಿಶ್ವ ಪರಿಸರ ದಿನವನ್ನು ಜಾಗತಿಕವಾಗಿ ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸುವುದು ಎಂಬ ಘೋಷವಾಕ್ಯದೊಂದಿಗೆ ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸುವುದು ಈ ವರ್ಷದ ಉದ್ದೇಶವಾಗಿದೆ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ತಿಳಿಸಿದ್ದಾರೆ.

ಮೇ.22 ರಿಂದಲೇ ಇದರ ಅಭಿಯಾನ ಆರಂಭಿಸಲಾಗಿದೆ. ಪ್ಲಾಸ್ಟಿಕ್ ತ್ಯಾಜ್ಯದಿಂದ ಆಗುವ ದುಷ್ಪರಿಣಾಮಗಳು ಹಾಗೂ ಇದರ ನಿರ್ಮೂಲನೆ ಮಾಡುವ ಸಂಬಂಧ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಗ್ರಾಮ ಪಂಚಾಯತಗಳಲ್ಲಿ ಹಮ್ಮಿಕೊಳ್ಳಲಾಗುತ್ತಿದೆ. ಈ ಅಭಿಯಾನದಲ್ಲಿ ಚುನಾಯಿತ ಪ್ರತಿನಿಧಿಗಳು, ಯುವಕರು, ಮಹಿಳಾ ಸ್ವ-ಸಹಾಯ ಸಂಘದ ಸದಸ್ಯರು, ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿ ಸದಸ್ಯರು, ಸ್ವಯಂ ಸೇವಕರು ಮತ್ತು ಗ್ರಾಮದ ಮುಖಂಡರು ಅಭಿಯಾನದಲ್ಲಿ ಪಾಲ್ಗೊಳ್ಳುವುದು ಕಡ್ಡಾಯವಾಗಿದೆ.



ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆಯು ಸ್ವಚ್ಛ ಭಾರತ ಮಿಷನ್ (ಗ್ರಾಮೀಣ) ಯೋಜನೆಯ ಘನ ತ್ಯಾಜ್ಯ ನಿರ್ವಹಣೆಯ ಪ್ರಮುಖ ಭಾಗವಾಗಿದೆ. ಗ್ರಾಮೀಣ ಪ್ರದೇಶದಲ್ಲಿ ಪ್ಲಾಸ್ಟಿಕ್ ಮತ್ತು ಥರ್ಮಾಕೋಲ್ದಿಂದ ಮಾಡಿದ ಎಲ್ಲ ರೀತಿಯ ವಸ್ತುಗಳ ಬಳಕೆಯನ್ನು ಸಂಪೂರ್ಣವಾಗಿ ತೆಗೆದುಹಾಕುವುದು. ಪ್ಲಾಸ್ಟಿಕ್ ತ್ಯಾಜ್ಯ ಉತ್ಪಾದನೆಯ ಪ್ರಮಾಣವನ್ನು ಹೆಚ್ಚಿನ ಮಟ್ಟದಲ್ಲಿ ಕಡಿಮೆಗೊಳಿಸುವುದು. ಸಾವಯವ ತ್ಯಾಜ್ಯವನ್ನು ಗೊಬ್ಬರವಾಗಿ ಪರಿವರ್ತಿಸಿ ವೈಜ್ಞಾನಿಕವಾಗಿ ಸಂಸ್ಕರಿಸುವುದು. ಹಾಗೂ ಮನೆಗಳು, ಸಂಸ್ಥೆಗಳು, ಸಾರ್ವಜನಿಕ ಸ್ಥಳಗಳು ಮತ್ತು ಜಲ ಮೂಲಗಳನ್ನು ಸ್ವಚ್ಛವಾಗಿಡುವ ಮೂಲಕ ಒಂದು ಪರಿಸರ ಸ್ನೇಹಿ ವಾತಾವರಣ ಸೃಷ್ಟಿಸುವುದು ಮುಖ್ಯ ಉದ್ದೇಶವಾಗಿರುತ್ತದೆ.

ಈ ಹಿನ್ನೆಲೆಯಲ್ಲಿ Reduce, Recycle, Reuse ಮತ್ತು Refuse ವಿಧಾನಗಳನ್ನು ಅಳವಡಿಸಿಕೊಂಡು ಪ್ಲಾಸ್ಟಿಕ್ ಮುಕ್ತ ಗ್ರಾಮಗಳನ್ನಾಗಿ ರೂಪಿಸಲು ಪ್ರತಿ ಗ್ರಾಮ ಪಂಚಾಯತ ಕ್ರಮವಹಿಸಬೇಕು ಎಂದು ಜಿ.ಪಂ ಸಿಇಓ ತಿಳಿಸಿದ್ದಾರೆ.

ಏಕ ಬಳಕೆಯ ಪ್ಲಾಸ್ಟಿಕ್ ತ್ಯಜಿಸುವುದು ಮತ್ತು ಅದರ ದುಷ್ಪರಿಣಾಮಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದು. ಪ್ಲಾಸ್ಟಿಕ್ ಕವರಗಳನ್ನು ಗ್ರಾಹಕರಿಗೆ ನೀಡುವ ಅಂಗಡಿ, ಬೇಕರಿ, ಇತರೆ ವಾಣಿಜ್ಯ ಕೇಂದ್ರಗಳ ತಪಾಸಣೆ, ಜಲ ಮೂಲಗಳ ಸ್ವಚ್ಛಗೊಳಿಸುವುದು ಮತ್ತು ಬಯಲು ಬಹಿರ್ದೆಸೆ ಮುಕ್ತಗೊಳಿಸಲು ಶೌಚಾಲಯಗಳನ್ನು ಬಳಕೆ ಮಾಡಲು ಅರಿವು ಮೂಡಿಸುವುದು. ಗ್ರಾಮಗಳಲ್ಲಿ ಪ್ಲಾಸ್ಟಿಕ್ ತ್ಯಾಜ್ಯ ಸಂಗ್ರಹವಾಗದಂತೆ ಕ್ರಮಕೈಗೊಳ್ಳುವುದು ಹಾಗೂ ಚರಂಡಿಗಳಲ್ಲಿ ತ್ಯಾಜ್ಯ ಮತ್ತು ಪ್ಲಾಸ್ಟಿಕ್ ಎಸೆಯದಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದು ಸಿಇಓ ಶಶಿಧರ ಕುರೇರ ತಿಳಿಸಿದರು.

### ಅಂಗನವಾಡಿ ಕಟ್ಟಡ ಉದ್ಘಾಟನಾ ಸಮಾರಂಭದಲ್ಲಿ ಶಾಸಕ ರಾಜುಗೌಡ ಹೇಳಿಕೆ

## ಅಭಿವೃದ್ಧಿ ಕಾರ್ಯ ಹಂತ ಹಂತವಾಗಿ ಮಾಡಲಾಗುವುದು




ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಮತಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ವೇಗವಾಗಿ ಮಾಡಲು ಅನುದಾನದ ಕೊರತೆ ಇದೆ ನಾನು ವಿರೋಧ ಪಕ್ಷದಲ್ಲಿರುವುದರಿಂದ ಹೆಚ್ಚಿನ ಅನುದಾನ ಸಿಗುತ್ತಿಲ್ಲ ಆದರೂ ಕಷ್ಟಪಟ್ಟು ಅನುದಾನ ತಂದು ಕ್ಷೇತ್ರದ ಎಲ್ಲ ಗ್ರಾಮಗಳ ಮೂಲಭೂತ ಸೌಕರ್ಯಕ್ಕೆ ಆದ್ಯತೆ ಕೊಟ್ಟು ಕೆಲಸ ಮಾಡುತ್ತಿದ್ದೇನೆ ಇದಕ್ಕೆ ನಿಮ್ಮೆಲ್ಲರ ಸಹಕಾರ ನನಗೆ ಬೇಕು ಎಂದು ದೇವರ ಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ ಹೇಳಿದರು. ತಾಳಿಕೋಟಿ ತಾಲೂಕಿನ ದೇವರ ಹಿಪ್ಪರಗಿ ಮತಕ್ಷೇತ್ರ ವ್ಯಾಪ್ತಿಯ ಬೊಮ್ಮನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆವರಣದಲ್ಲಿ ಜಿಪಂ, ಪಂಚಾಯತ ರಾಜ್ ಇಂಜಿನಿಯರಿಂಗ ವಿಭಾಗ ವಿಜಯಪುರ 2022- 23ನೇ ಸಾಲಿನ ನರೇಗಾ ಕನ್ವರ್ಜನ್ಸ್ ಎಸ್ ಡಿ ಪಿ ಯೋಜನೆಯ ರೂ.60 ಲಕ್ಷ ಮೊತ್ತದ ಅನುದಾನದ ಅಡಿಯಲ್ಲಿ ಬೊಮ್ಮನಹಳ್ಳಿ ಹಾಗೂ ಬೋಳವಾಡ ಗ್ರಾಮಗಳಲ್ಲಿ ನಿರ್ಮಾಣಗೊಂಡಿರುವ ಮೂರು ಅಂಗನವಾಡಿ ನೂತನ ಕಟ್ಟಡಗಳನ್ನು ಮಂಗಳವಾರ ಉದ್ಘಾಟಿಸಿ ಅವರು ಮಾತನಾಡಿದರು. ಶಿಕ್ಷಣ ಅತಿ ಮುಖ್ಯವಾದದ್ದು ಈ ಕ್ಷೇತ್ರಕ್ಕೆ ನಾನು ಆದ್ಯತೆ ಕೊಟ್ಟು ಕೆಲಸ ಮಾಡುತ್ತಿದ್ದೇನೆ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಅಗತ್ಯ ಶಾಲಾ ಕಟ್ಟಡಗಳ ಹಾಗೂ ಅವುಗಳ ಮೂಲಭೂತ ಸೌಕರ್ಯಗಳ ಕುರಿತು ಶಿಕ್ಷಣ ಸಚಿವರೊಂದಿಗೆ ಮಾತನಾಡಿದ್ದೇನೆ ಅವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಪಿಡಿಓಗಳು ಇದರ ಕುರಿತು ಅಗತ್ಯ ಮಾಹಿತಿಯನ್ನು ಇಲಾಖೆ ಹಾಗೂ ನನಗೆ ನೀಡಬೇಕು. ಈ ಶಾಲೆಯ ಮುಖ್ಯ ಗುರುಗಳು ಶಾಲಾ ಆವರಣದಲ್ಲಿರುವ ಶಿಥಲಗೊಂಡ ಕೊಠಡಿಗಳನ್ನು ಮಕ್ಕಳ ರಕ್ಷಣೆ ಹಿತ ದೃಷ್ಟಿಯಿಂದ ತೆಗೆದ ಹಾಕಲು ಹಾಗೂ ಕೆಲವು ಸಣ್ಣಪುಟ್ಟ ಕೆಲಸಗಳಿಗಾಗಿ ಮನವಿ ಮಾಡಿಕೊಂಡಿದ್ದಾರೆ ಅದನ್ನು ಬಿಇಓ ಹಾಗೂ ಗ್ರಾಮ ಪಂಚಾಯತಿಯವರು ಬೇಗ ಮಾಡಿಸಿಕೊಡಲು ಕಾರ್ಯೋನ್ಮುಖರಾಗಬೇಕೆಂದು ಸೂಚನೆ ನೀಡುತ್ತೇನೆ ಎಂದ ಅವರು ಕ್ಷೇತ್ರದಲ್ಲಿ ಮಾಡಬೇಕಾದ ಅಭಿವೃದ್ಧಿಯ ಕಾರ್ಯಗಳು ಸಾಕಷ್ಟಿವೆ ಇನ್ನೂ ನನಗೆ ಮೂರು ವರ್ಷಗಳ ಅವಧಿ ಇದೆ ಎಲ್ಲ ಕಾರ್ಯಗಳನ್ನು ಹಂತ ಹಂತವಾಗಿ ಮಾಡುತ್ತೇನೆ. ಇಂದು ನೀವು ನನಗೆ ಆತ್ಮೀಯವಾಗಿ ಬರಮಾಡಿಕೊಂಡು ಸನ್ಮಾನಿಸಿ ಗೌರವಿಸಿದ್ದೀರಿ ಈ ನಿಮ್ಮ ಸನ್ಮಾನ ನನ್ನ ಜವಾಬ್ದಾರಿಯನ್ನು ಇನ್ನಷ್ಟು ಹೆಚ್ಚಿಸಿದೆ ನಿಮ್ಮ ಸೇವೆಯನ್ನು ಪ್ರಾಮಾಣಿಕವಾಗಿ ಮಾಡುತ್ತೇನೆ ಎಂದರು. ಜೆಡಿಎಸ್ ಮುಖಂಡ ಮಡು ಸಾಹುಕಾರ ಬಿರಾದಾರ ಪ್ರಸ್ತಾವಿಕವಾಗಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಶಾಸಕ ರಾಜುಗೌಡರು ಸರ್ಕಾರಿ ಪ್ರಾಥಮಿಕ ಶಾಲಾ ಮಕ್ಕಳಿಗೆ ಈ ವರ್ಷದ ಪಠ್ಯ ಪುಸ್ತಕಗಳನ್ನು ವಿತರಿಸಿದರು. ಗ್ರಾಪಂ, ಸಿಡಿಪಿಓ, ಬಿಇಓ ಸಿಬ್ಬಂದಿ ಹಾಗೂ ಗ್ರಾಮಸ್ಥರಿಂದ ಶಾಸಕ ರಾಜುಗೌಡರಿಗೆ ಸನ್ಮಾನಿಸಲಾಯಿತು. ಗ್ರಾಪಂ ಅಧ್ಯಕ್ಷೆ ಸರೋಜಿನಿ ಮಲ್ಕಣ್ಣ ಮಸರಕಲ್ಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಗ್ರಾಮದ ಗಣ್ಯರಾದ ಯಮನಪ್ಪ ಮಸರಕಲ್, ಶಿವಶಂಕರಪ್ಪ ಕಟ್ಟಿಮನಿ, ನಿಂಗನಗೌಡ ಕಲಬುರ್ಗಿ, ವೀರೇಶಗೌಡ ಕಾರಗನೂರ, ಸಿದ್ದಣ್ಣ ಕಟ್ಟಿಮನಿ, ಸಾಹೇಬಗೌಡ ಪಾಟೀಲ, ಜಗನ್ನಾಥ ಮಸರ್ಕಲ್, ಶಿವು ಕಲಬುರ್ಗಿ, ಬಿಇಓ ಬಿ.ಎಸ್.ಸಾವಳಗಿ, ಬಿ.ಆರ್.ಪಿ. ಎಸ್.ಎಸ್.ಹಿರೇಮಠ, ಇಲಿಯಾಸ್ ಬಾಗವಾನ, ಸಿ.ಆರ್.ಪಿ. ಎಲ್. ಜಿ.ಬಾಗೇವಾಡಿ, ಮು.ಗು.ಎ.ಡಿ.ಗೋನಾಳ, ಎಇಇ ಶಿವರಾಜ ನಾಯಕ, ಅಭಿಯಂತರ ಪ್ರವೀಣ ಬಿರಾದಾರ, ಎಸಿಡಿಪಿಓ ಲಕ್ಷ್ಮಿ ಬಡಿಗೇರ, ಎಸ್.ಸಿ.ದೇಸಾಯಿ, ಪಿಡಿಓ ಪಿ.ಬಿ.ಚೆನ್ನೂರ, ತಾಪಂ, ಗ್ರಾಪಂ, ಸಿಬ್ಬಂದಿಗಳು, ಪಿಕೆಪಿಎಸ್ ಸದಸ್ಯರು, ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರು ಗ್ರಾಮಸ್ಥರು ಇದ್ದರು. ಶರಣಮ್ಮ ಪ್ರಾರ್ಥಿಸಿದರು. ಪಿಡಿಓ ಪ್ರಭು ಚೆನ್ನೂರ ಸ್ವಾಗತಿಸಿದರು. ಶಿಕ್ಷಕ ಜಿ.ಕೆ.ಪತ್ತಾರ ನಿರೂಪಿಸಿ ವಂದಿಸಿದರು.

> ಮತಕ್ಷೇತ್ರ ವ್ಯಾಪ್ತಿಗೆ ಬರುವ ಗ್ರಾಮಗಳ ಕೆಲವು ಶಾಲೆಗಳ ದುರಸ್ತಿ ಹಾಗೂ ಹೊಸ ಕೋಣೆಗಳ ನಿರ್ಮಾಣದ ಕುರಿತು ಶಿಕ್ಷಣ ಸಚಿವರೊಂದಿಗೆ ಇತ್ತೀಚೆಗೆ ಮಾತನಾಡಿದ್ದೇನೆ, ಅವರು ಮನವಿಗೆ ಸ್ಪಂದಿಸಿ ಶಿಕ್ಷಣ ಇಲಾಖೆಯ ಮೂಲಕ ವರದಿ ಕಳಿಸಲು ತಿಳಿಸಿದ್ದಾರೆ.
> ಬಿಇಓ ಅವರು ಈ ವರದಿಯನ್ನು ಸಿದ್ಧಪಡಿಸಿ ಕಳಿಸಿಕೊಡಬೇಕು.
> **-ರಾಜುಗೌಡ ಪಾಟೀಲ ಶಾಸಕ ದೇವರ ಹಿಪ್ಪರಗಿ ಮತಕ್ಷೇತ್ರ.**

## ದೇಶದ ಅಭಿವೃದ್ಧಿಗೆ ಎಲ್ಐಸಿ ಕೊಡುಗೆ ಅಪಾರ-ರಕ್ಷಿತ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.4-ದೇಶದ ಸಮಗ್ರ ಅಭಿವೃದ್ಧಿಗೆ ಆರ್ಥಿಕ ಸಂಪನ್ಮೂಲ ಒದಗಿಸಿ, ಜನರಿಗೆ ಆರ್ಥಿಕ ಭದ್ರತೆಯ ಜೊತೆ ಜೀವವಿಮೆ ನೀಡುವ ಮಹತ್ತರ ಕಾರ್ಯವನ್ನು ಭಾರತೀಯ ಜೀವವಿಮಾ ನಿಗಮ ಮಾಡುತ್ತಿದೆ ಎಂದು ಎಲ್ಐಸಿ ಬಾಗಲಕೋಟೆ ಶಾಖೆಯ ವ್ಯವಸ್ಥಾಪಕ ಎಂ.ಡಿ.ರಕ್ಷಿತ ಹೇಳಿದರು.

ಎಲ್ಐಸಿ ಬಾಗಲಕೋಟೆ ಶಾಖೆ ವತಿಯಿಂದ ಬುಧವಾರ ತಾಲೂಕಿನ ಶಿರೂರ, ಭಗವತಿ, ಬೇವೂರು, ಸುತಗುಂಡಾರ, ರಾಂಪುರಗಳಲ್ಲಿ ಎಲ್ಐಸಿ ಗಿನ್ನಿಸ್ ರೆಕಾರ್ಡ ಸಾಧನೆಯ ಹಿನ್ನೆಲೆಯಲ್ಲಿ ಪ್ರತಿನಿಧಿಗಳು ಮತ್ತು ಗ್ರಾಹಕರನ್ನು ಅಭಿನಂದಿಸಲು ಹಮ್ಮಿಕೊಳ್ಳಲಾಗಿದ್ದ ಕ್ಲಸ್ಟರ್ ಮಟ್ಟದ ಸಭೆಗಳಲ್ಲಿ ಅವರು ಮಾತನಾಡಿದರು.

ಎಲ್ಐಸಿ 68 ವರ್ಷಗಳ ಸುದೀರ್ಘ ಅವಧಿಯಲ್ಲಿ ಹಲವಾರು ಸಾಧನೆಗಳನ್ನು ಮಾಡಿದ್ದು, ವಿಮಾ ಕಂಪನಿಗಳಲ್ಲಿ ಬಹುದೊಡ್ಡ ಸಂಸ್ಥೆಯಾಗಿ ಬೆಳೆದಿದೆ. ವಿಮಾ ಗ್ರಾಹಕರಿಗೆ ಪಾರದರ್ಶಕ ಸೇವೆ ನೀಡುವ ಮೂಲಕ ಹೆಸರು ಮಾಡಿದ್ದು, ಇದೀಗ ಗಿನ್ನಿಸ್ ದಾಖಲೆಯನ್ನು ಪೂರೈಸಿದೆ. ಇದಕ್ಕೆ ಪಾಲಸಿದಾರರು, ಸಂಸ್ಥೆಯ ಪ್ರತಿನಿಧಿಗಳು ಕಾರಣರಾಗಿದ್ದು, ಅವರನ್ನು ಅಭಿನಂದಿಸುವುದೇ ಕಾರ್ಯಕ್ರಮದ ಉದ್ದೇಶ ಎಂದು ರಕ್ಷಿತ ತಿಳಿಸಿ, ಎಲ್ಐಸಿ ಸಾಮಾಜಿಕವಾಗಿಯೂ ಕಳಕಳಿಯುಳ್ಳ ಸಂಸ್ಥೆಯಾಗಿದೆ ಎಂದು ಹೇಳಿದರು.

ಅಭಿವೃದ್ಧಿ ಅಧಿಕಾರಿ ಎ.ಆರ್. ಜಂಬಗಿ ಮಾತನಾಡಿ, ಎಲ್ಐಸಿಯಲ್ಲಿ ವಿಮಾ ಗ್ರಾಮ, ವಿಮಾ ಸ್ಕೂಲ್ ಯೋಜನೆಗಳಿದ್ದು, ಈ ಯೋಜನೆಯಡಿ ಗ್ರಾಮದ ಸಾಮಾಜಿಕ ಕಾರ್ಯಗಳಿಗೆ ಸಹಾಯಧನ ನೀಡಲಾಗುತ್ತಿದ್ದು, ಇದರ ಪ್ರಯೋಜನ ಪಡೆಯಲು ಸಾರ್ವಜನಿಕರು ಪ್ರತಿನಿಧಿಗಳಿಂದ ಮಾಹಿತಿ ಪಡೆದುಕೊಳ್ಳಬೇಕು ಎಂದರು. ಭಗವತಿ ಗ್ರಾಮ ಪಂಚಾಯತಿ ಪಿಡಿಓ ಶಶಿಕಲಾ ಕೊಡತೆ, ಕಾರ್ಯದರ್ಶಿ ಪುಟ್ಟು ಲಮಾಣಿ, ಎಲ್ಐಸಿ ಅಭಿವೃದ್ಧಿ ಅಧಿಕಾರಿಗಳಾದ ಎ.ಎಸ್.ತೊಗರಿ, ಚರಣ ಲಗಳಿ, ಭಗವತಿ ಗ್ರಾಮದ ಹಿರಿಯರಾದ ರಾಜು ಮುದೇನೂರ, ಮುದ್ದಣ್ಣ ಹಳ್ಳೂರ, ಮಲ್ಲಣ್ಣ ರಕರಡ್ಡಿ, ಬಸವರಾಜ ರಕರಡ್ಡಿ, ವಿಮಾ ಪ್ರತಿನಿಧಿಗಳಾದ ಎಫ್.ಎನ್. ಮುರನಾಳ, ಸಂಗಣ್ಣ ಕಲ್ಲೋಲ, ಸೊಲಬಣ್ಣ ತಿಮ್ಮಾಪೂರ, ಸುರೇಶ ಕಲಗುಡಿ, ಭೀಮಸಿ ಮಾದರ, ಸಂಜೀವ ಹೊಸಮನಿ, ನಾಗರಾಜ ಹೊಸಮನಿ, ಜಗದೀಶ ಜೈನಾಪೂರ, ಮಹಾಂತೇಶ ಗಟ್ಟಿಗನೂರ, ಪ್ರಕಾಶ ಮಂಕಣಿ ಇದ್ದರು.

## ಶಾಂತಿ,ಸೌಹಾರ್ದತೆಯಿಂದ ಬಕ್ರೀದ್ ಹಬ್ಬ ಆಚರಿಸಿ: ಸಿಪಿಐ ಘಸಿಯುದ್ದೀನ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಪಟ್ಟಣದಲ್ಲಿ ಜೂನ್ 7ರಂದು ಆಚರಿಸಲಾಗುತ್ತಿರುವ ಬಕ್ರೀದ ಹಬ್ಬವನ್ನು ಶಾಂತಿ ಹಾಗೂ ಸೌಹಾರ್ದತೆಯಿಂದ ಆಚರಿಸಬೇಕು ಎಂದು ಮುದ್ದೇಬಿಹಾಳ ಸಿಪಿಐ ಮೊಹಮ್ಮದ್ ಘಸಿಯುದ್ದೀನ ತಿಳಿಸಿದರು. ಪಟ್ಟಣದ ಪೊಲೀಸ ಠಾಣೆಯಲ್ಲಿ ಬಕ್ರೀದ್ ಹಬ್ಬದ ನಿಮಿತ್ಯ ಬುಧವಾರ ಹಮ್ಮಿಕೊಂಡ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪಟ್ಟಣದಲ್ಲಿ ಕಾನೂನು ಬಾಹಿರ ಚಟುವಟಿಕೆಗಳ ಮೇಲೆ ನಿಗಾವಹಿಸಲು ಗುರುವಾರದಿಂದಲೇ ಚೆಕ್ಪೋಸ್ಟ್ ಗಳನ್ನು ಸ್ಥಾಪಿಸಲಾಗುತ್ತಿದೆ, ಹಬ್ಬದ ಎಲ್ಲ ಪ್ರಕ್ರಿಯೆಗಳನ್ನು ಕಾನೂನಿನ ಚೌಕಟ್ಟಿನಲ್ಲಿ ಶಾಂತಿಯುತವಾಗಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ನೋಡಿಕೊಂಡು ಆಚರಿಸಲು ಪ್ರಯತ್ನಿಸಬೇಕು. ಮುಸ್ಲೀಮ ಬಾಂಧವರು ಸಾಮೂಹಿಕ ಪ್ರಾರ್ಥನೆಗೆ ಈದ್ಗಾ ತೆರಳುವಾಗ ರಸ್ತೆ ಶಿಷ್ಟಾಚಾರಗಳನ್ನು ಪಾಲಿಸಿಕೊಂಡು ಯಾರಿಗೂ ತೆ-ಒಂದರೆ ಆಗದಂತೆ ಹೋಗಬೇಕು. ಇದಗಾದಲ್ಲಿ ಶಾಂತ ರೀತಿಯಿಂದ ಪ್ರಾರ್ಥನೆ ಸಲ್ಲಿಸಿ ನಂತರ ತಮ್ಮ ಕುಟುಂಬದ ಸದಸ್ಯರೊಂದಿಗೆ ಸಂತೋಷದಿಂದ ಹಬ್ಬವನ್ನು ಆಚರಿಸಬೇಕು ಎಂದರು. ಪುರಸಭೆ ಮಾಜಿ ಸದಸ್ಯ ಪ್ರಭುಗೌಡ ಮದರಕಲ್ಲ ಮಾತನಾಡಿ ತಾಳಿಕೋಟಿ ಪಟ್ಟಣವು ಶಾಂತಿ ಸೌಹಾರ್ದತೆಗೆ ಹೆಸರುವಾಸಿಯಾಗಿದೆ ಇಲ್ಲಿ ನಾವೆಲ್ಲರೂ ಸೇರಿಕೊಂಡು ಎಲ್ಲ ಹಬ್ಬ ಹರಿದಿನಗಳನ್ನು ಆಚರಿಸುತ್ತಿದ್ದೇವೆ, ಬಕ್ರೀದ್ ಹಬ್ಬವನ್ನು ಮುಸ್ಲಿಂ ಬಾಂಧವರು ಶಾಂತರೀತಿಯಿಂದ ಆಚರಿಸುವಂತಾಗಲು ನಾವೆಲ್ಲರೂ ಸಹಕಾರ ನೀಡುತ್ತೇವೆ ಎಂದರು. ಮುಸ್ಲಿಂ ಮುಖಂಡ ಮೋದಿನಸಾ ನಗಾರ್ಚಿ ಮಾತನಾಡಿ ಪಟ್ಟಣದಲ್ಲಿ ಸರ್ವಧರ್ಮಿಯರು ಒಂದಾಗಿ ಹಬ್ಬಗಳನ್ನು ಆಚರಿಸುತ್ತಿದ್ದೇವೆ ನಮ್ಮೆಲ್ಲರ ಪ್ರಯತ್ನ ದಿಂದಾಗಿ ಪಟ್ಟಣದಲ್ಲಿ ಇಂದು ಶಾಂತಿ ನೆಲಸಿದೆ ಇದನ್ನು ಉಳಿಸಿಕೊಂಡು ಹೋಗುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದರು. ಪಿಎಸ್ಐ ರಾಮನಗೌಡ ಸಂಕನಾಳ ಮಾತನಾಡಿ ಪಟ್ಟಣದಲ್ಲಿ ಜೂನ್ 7ರಂದು ಆಚರಿಸಲ್ಪಡುವ ಬಕ್ರೀದ್ ಹಬ್ಬವು ಶಾಂತಿಯುತವಾಗಿ ನಡೆಯುವಂತಾಗಲು ಅಗತ್ಯ ವ್ಯವಸ್ಥೆಗಳನ್ನು ಮಾಡಿಕೊಳ್ಳಲಾಗುತ್ತಿದೆ ಸಾರ್ವಜನಿಕರು ಇಲಾಖೆಯೊಂದಿಗೆ ಸಹಕರಿಸಬೇಕು ಎಂದರು. ಶಾಂತಿ ಸಭೆಯಲ್ಲಿ ಪಟ್ಟಣದ ಗಣ್ಯರಾದ ಶಶಿಧರ ಡಿಸಲೆ, ಹುಸೇನ ಸಾಬ ಜಮಾದಾರ, ಜಾವೇದ ಕೆಂಭಾವಿ, ಎಂ.ಎಚ್.ಕೆಂಭಾವಿ, ಪೀರಮೊಹಮ್ಮದ್ ಖಾಜಿ, ಶಫೀಕ ಇನಾಮದಾರ, ಆಸಿಫ್ ಕೆಂಭಾವಿ, ನದೀಮ ಕಡು ಹಾಗೂ ಪೊಲೀಸ್ ಸಿಬ್ಬಂದಿಗಳು ಇದ್ದರು.

# ಮಕ್ಕಳ ಆರೋಗ್ಯಕ್ಕೆ ಮನೆ ಆಹಾರ ಯೋಗ್ಯ-ಡಾ.ಶಿಲ್ಪಾ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.4-ಮಕ್ಕಳ ಬೆಳವಣಿಗೆಗೆ ಪೌಷ್ಠಿಕ ಆಹಾರದ ಅವಶ್ಯಕತೆಯಿದ್ದು, ತಾಯಂದಿರು ಮಕ್ಕಳಿಗೆ ಮನೆಯಲ್ಲಿ ತಯಾರಿಸಿದ ಆಹಾರವನ್ನೇ ನೀಡಬೇಕು ಎಂದು ಬಾಗಲಕೋಟೆಯ ಸಜ್ಜಲಶ್ರೀ ನರ್ಸಿಂಗ್ ವಿಜ್ಞಾನ ಮಹಾವಿದ್ಯಾಲಯದ ಸಮುದಾಯ ಆರೋಗ್ಯ ಕೇಂದ್ರದ ಶುಶ್ರೂಷ ವಿಭಾಗದ ಮುಖ್ಯಸ್ಥೆ ಡಾ.ಶಿಲ್ಪಾ ಕೂಗಲಿ ಹೇಳಿದರು.

ಸಮುದಾಯ ಆರೋಗ್ಯ ಕೇಂದ್ರದ ವತಿಯಿಂದ ಬುಧವಾರ ಭಗವತಿ ಗ್ರಾಮದಲ್ಲಿ ಜರುಗಿದ ಅಂಗನವಾಡಿ ಮಕ್ಕಳ ಆರೋಗ್ಯ ತಪಾಸಣೆ ಹಾಗೂ ಪೌಷ್ಠಿಕ ಆಹಾರದ ಮಹತ್ವ ಕುರಿತು ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮನೆಯಲ್ಲಿ ತಯಾರಿಸಿದ ಆಹಾರವನ್ನು ಮಕ್ಕಳಿಗೆ ನೀಡುವುದರಿಂದ ಅವರು ಆರೋಗ್ಯವಂತರಾಗಿ ಬೆಳೆಯುತ್ತಾರೆ ಎಂದರು.

ಪೌಷ್ಠಿಕ ಆಹಾರದ ಕೊರತೆಯಿಂದಾಗಿ ಇಂದು ಮಕ್ಕಳಲ್ಲಿ ಅನೇಕ ನ್ಯೂನತೆಗಳು ಕಂಡು ಬರುತ್ತಿವೆ. ಇದರಿಂದ ಮಕ್ಕಳಲ್ಲಿ ರೋಗ ನಿರೋಧಕ ಶಕ್ತಿ ಇಲ್ಲವಾಗಿ ಸೋಂಕುಗಳು ಅಂಟಿಕೊಳ್ಳುತ್ತಿವೆ ಎಂದ ಡಾ.ಶಿಲ್ಪಾ ಕೂಗಲಿ, ತಾಯಂದಿರು ಮಕ್ಕಳನ್ನು ಆರೋಗ್ಯವಂತರನ್ನಾಗಿ ಬೆಳೆಸುವ ನಿಟ್ಟಿನಲ್ಲಿ ಉತ್ತಮ ಆಹಾರ ನೀಡುವುದು ಸಹ ಮುಖ್ಯವಾಗಿದೆ ಎಂದು ಹೇಳಿದರು.

ಮಹಾವಿದ್ಯಾಲಯದ ಸ್ನಾತ-ಕೋತ್ತರ ಪದವಿ ವಿದ್ಯಾರ್ಥಿಗಳು ಹೈದರಾಬಾದ ಮಿಕ್ಸ್, ದಾವಣಗೆರೆ ಮಿಕ್ಸ್ ತಯಾರಿಕಾ ವಿಧಾನಗಳ ಬಗೆಗೆ ಮಾಹಿತಿ ನೀಡಿದರಲ್ಲದೇ ಭಿತ್ತಿ ಚಿತ್ರಗಳನ್ನು ಪ್ರದರ್ಶಿಸಿ ಪೌಷ್ಠಿಕ ಆಹಾರದ ಮಹತ್ವ ಕುರಿತಾಗಿ ಮಕ್ಕಳ ತಾಯಂದಿರಿಗೆ ಆರೋಗ್ಯ ಶಿಕ್ಷಣ ನೀಡಿದರು.

ಮಹಾವಿದ್ಯಾಲಯದ ಸಹ ಪ್ರಾಧ್ಯಾಪಕ ರೇಣುಕರಾಜ ನಾಗಮ್ಮನವರ, ಡಾ॥ ರಾಜಶೇಖರ ಹಿರೇಗೌಡರ, ಉಪನ್ಯಾಸಕರಾದ ಜಗದೀಶ ಹಿರೇಮಠ, ಲಕ್ಷ್ಮಿ ಪಾಟೀಲ ಹಾಗೂ ಶ್ರೀದೇವಿ ವನಗೇರಿ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ 30ಕ್ಕೂ ಹೆಚ್ಚು ಅಂಗನವಾಡಿ ಮಕ್ಕಳು ಹಾಗೂ ಅವರ ತಾಯಂದಿರು ಪಾಲ್ಗೊಂಡಿದ್ದರು.

## ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಶೈಕ್ಷಣಿಕ ವಾತಾವರಣ ಮುಖ್ಯ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.4-ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನವಾಗಲು ಶೈಕ್ಷಣಿಕ ವಾತಾವರಣ ಬಹಳ ಪ್ರಮುಖವಾಗಿದ್ದು ಪ್ರತಿನಿತ್ಯ ತರಗತಿಗಳಿಗೆ ಕಡ್ಡಾಯವಾಗಿ ಹಾಜರಾಗುವುದರ ಮುಖಾಂತರ ಒಳ್ಳೆಯ ಜ್ಞಾನವನ್ನು ಸಂಪಾದಿಸಿಕೊಳ್ಳಬೇಕೆಂದು ಪ್ರಾಚಾರ್ಯ ಜಗನ್ನಾಥ ಚವ್ಹಾಣ ಹೇಳಿದರು.

ಬಸವೇಶ್ವರ ವಾಣಿಜ್ಯ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ನಡೆದ ಶೈಕ್ಷಣಿಕ ಸಾಲಿನ ಪ್ರಥಮ ವರ್ಷ ಹಾಗೂ ದ್ವಿತೀಯ ವರ್ಷದ ವಿದ್ಯಾರ್ಥಿಗಳಿಗೆ ಹೂಗುಚ್ಛ ನೀಡುವ ಮೂಲಕ ಸ್ವಾಗತಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ತಮ್ಮ ಪ್ರತಿಭೆ, ಸಾಮರ್ಥ್ಯವನ್ನು ಗುರುತಿಸಿಕೊಳ್ಳುವುದೇ ಶಿಕ್ಷಣದ ಮೂಲ ಉದ್ದೇಶ ಎಂದರು.

ಪ್ರತಿಯೊಬ್ಬರಲ್ಲೂ ಯಾವುದಾದರೊಂದು ಸೂಪ್ತ ಪ್ರತಿಭೆ ಅಡಗಿರುತ್ತದೆ. ಅದನ್ನು ಬೆಳೆಸಿ ಪೋಷಿಸಲು ಕಾಲೇಜಿನಲ್ಲಿ ಹಲವಾರು ಅವಕಾಶಗಳಿವೆ. ವಿದ್ಯಾರ್ಥಿಗಳು ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಪ್ರಾಚಾರ್ಯ ಚವ್ಹಾಣ ಹೇಳಿದರು.

## ಕಾಲೇಜು ಪ್ರಾರಂಭೋತ್ಸವ-ವಿದ್ಯಾರ್ಥಿನಿಯರಿಗೆ ಸ್ವಾಗತ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ : ನಗರದ ಕೇಂದ್ರ ಭಾಗದಲ್ಲಿರುವ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾರಂಭೋತ್ಸವ ಹಿನ್ನೆಲೆಯಲ್ಲಿ ಉಪನ್ಯಾಸಕರು ವಿದ್ಯಾರ್ಥಿನಿಯರನ್ನು ಅದ್ದೂರಿಯಾಗಿ ಸ್ವಾಗತಿಸಿದರು.

ಕಾಲೇಜು ಸುಧಾರಣಾ ಸಮಿತಿಯ ಸದಸ್ಯ ನಾರಾಯಣಾಚಾರ್ಯ ಸಗರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಕಾಲೇಜು ಉತ್ತಮ ಸಾಧನೆ ಮಾಡುತ್ತಿದೆ, ವಿದ್ಯಾರ್ಥಿನಿಯರು ಮೊಬೈಲ್ ಬಳಕೆಯನ್ನು ಕಡಿಮೆ ಮಾಡಿ ಪುಸ್ತಕಗಳನ್ನು ಓದುವ ಹವ್ಯಾಸವನ್ನು ಬೆಳೆಸಿಕೊಳ್ಳಬೇಕು, ಕಾಲೇಜಿನಲ್ಲಿ ಉತ್ತಮ ವಾತಾವರಣ ಮತ್ತು ಎಲ್ಲಾ ರೀತಿಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ, ಹೆಚ್ಚು ವಿದ್ಯಾರ್ಥಿಗಳು ಸರ್ಕಾರಿ ಕಾಲೇಜಿಗೆ ದಾಖಲಾತಿ ಪಡೆದುಕೊಳ್ಳಬೇಕು, ಉತ್ತಮ ವಿದ್ಯಾಭ್ಯಾಸ ಮಾಡಿ ತಂದೆ ತಾಯಿಗಳಿಗೆ ಹಾಗೂ ಗುರುಗಳಿಗೆ ಕೀರ್ತಿ ತರಬೇಕು ಎಂದು ಹೇಳಿದರು.

ಕಾಲೇಜಿನ ಪ್ರಾಚಾರ್ಯ ಬಿ.ಶಂಕರ ರೆಡ್ಡಿ ಮಾತನಾಡಿ, ನಮ್ಮ ಕಾಲೇಜಿನಲ್ಲಿ ಗುಣಾತ್ಮಕ ಶಿಕ್ಷಣವನ್ನು ನೀಡುತ್ತಾ ಬಂದಿದ್ದು, ಪ್ರತಿ ವರ್ಷ ದಾಖಲಾಗುವ ಮಕ್ಕಳಿಗೆ ಉತ್ತಮ ಫಲಿತಾಂಶ ತೆಗೆದುಕೊಳ್ಳುವ ಕ್ರಮಕೈಗೊಳ್ಳುತ್ತಿದ್ದೇವೆ, ವಿದ್ಯಾರ್ಥಿನಿಯರು ಉತ್ತಮ ಅಧ್ಯಯನ ಮಾಡುವುದು ಅಗತ್ಯತೆ ಇದೆ ಎಂದರು.

ಕಾರ್ಯಕ್ರಮದಲ್ಲಿ ಪ್ರಮುಖರಾದ ಭೀಮರಾಯ ಪೂಜಾರಿ, ಅಬ್ದುಲ್ ಪಟೇಲ್, ಅಲ್ಲಾ ಪಟೇಲ್, ಪಾಲಕರಾದ ರೇಣುಕಮ್ಮ, ಪ್ರೌಢಶಾಲಾ ವಿಭಾಗದ ಶಿಕ್ಷಕರು, ಕಾಲೇಜಿನ ಉಪನ್ಯಾಸಕರು ಹಾಗೂ ಸಿಬ್ಬಂದಿ ವೃಂದದವರು ಉಪಸ್ಥಿತರಿದ್ದರು. ಕಾಲೇಜಿನ ಉಪನ್ಯಾಸಕ ಸುರೇಶ ಬಾಬು ಅರುಣಿ ಕಾರ್ಯಕ್ರಮ ನಿರ್ವಹಿಸಿ ವಂದಿಸಿದರು. ಪ್ರಾರಂಭದ ದಿನವೇ ಮೂರುನೂರುಕ್ಕೂ ಅಧಿಕ ವಿದ್ಯಾರ್ಥಿನಿಯರು ಹಾಜರಾಗಿದ್ದರು.

## ವಿದ್ಯಾರ್ಥಿಗಳ ಉಚಿತ/ರಿಯಾಯಿತಿ ಬಸ್‌ಪಾಸ್‌ಗಾಗಿ ಸೇವಾಸಿಂಧು ಪೋರ್ಟಲ್ ಮೂಲಕ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.4-ಪ್ರಸಕ್ತ 2025-26ನೇ ಸಾಲಿನ ವಿದ್ಯಾರ್ಥಿಗಳ ಉಚಿತ/ರಿಯಾಯಿತಿ ಬಸ್‌ಪಾಸ್‌ಗಾಗಿ ಅರ್ಹ ವಿದ್ಯಾರ್ಥಿಗಳು ಸೇವಾಸಿಂಧು ಪೋರ್ಟಲ್‌ದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕೆಂದು ಕಲಬುರಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಭಾಗ-1ರ ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

ವಿದ್ಯಾರ್ಥಿಗಳ Ähttps://sevasindhuservices.karnataka.gov.in/bus-passservices ವೆಬ್‌ಸೈಟ್‌ನಲ್ಲಿ ಕಲಬುರಗಿ ವಿಭಾಗ-1ರ ವ್ಯಾಪ್ತಿಯಲ್ಲಿ ಬರುವ ಘಟಕ ಹಾಗೂ ಪಾಸ್ ವಿತರಿಸುವ ಬಿಂದುಗಳನ್ನು ಆಯ್ಕೆ ಮಾಡಿ ಅರ್ಜಿ ಸಲ್ಲಿಸಿ ಈ ಕೆಳಕಂಡ ಕೆ-1 ಕೇಂದ್ರಗಳಲ್ಲಿ ನಿಗದಿತ ಬಸ್‌ಪಾಸ್ ದರ ಪಾವತಿಸಿ ಬಸ್‌ಪಾಸ್ ಮುದ್ರಿಸಿಕೊಳ್ಳಬಹುದಾಗಿದೆ.

ಕಲಬುರಗಿ ಘಟಕ-1ಕ್ಕೆ ಸಂಬಂಧಿಸಿದ ವಿದ್ಯಾರ್ಥಿಗಳು ಕಲಬುರಗಿಯ ರಾಷ್ಟ್ರಪತಿ ಚೌಕ ಹಾಗೂ ಖರ್ಗೆ ಪೆಟ್ರೋಲ್ ಪಂಪ್ ಬಿಂದು ಆಯ್ಕೆ ಮಾಡಿಕೊಳ್ಳಬೇಕು. ನಂತರ ವಿದ್ಯಾರ್ಥಿಗಳು ಕಲಬುರಗಿ ಮಿನಿ ವಿಧಾನಸೌಧದಲ್ಲಿನ ಕೆ-1 ಕೇಂದ್ರದಲ್ಲಿ ಬಸ್‌ಪಾಸ್ ಮುದ್ರಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಸಾರಿಗೆ ನಿಯಂತ್ರಕ ಇಬ್ರಾಹಿಂ-9611792140 ಹಾಗೂ ಹಣಮಂತ-8197034666 ಇವರನ್ನು ಸಂಪರ್ಕಿಸಬೇಕು.

ಕಲಬುರಗಿ ಘಟಕ-4ಕ್ಕೆ ಸಂಬಂಧಿಸಿದ ವಿದ್ಯಾರ್ಥಿಗಳು ಕಲಬುರಗಿ ಎಸ್.ಟಿ.ಬಿ.ಟಿ. ಬಸ್ ನಿಲ್ದಾಣ, ಗುಲಬರ್ಗಾ ವಿಶ್ವವಿದ್ಯಾಲಯ, ರೈಲು ನಿಲ್ದಾಣ ಬಸ್ ನಿಲ್ದಾಣ ಹಾಗೂ ಸೂಪರ ಮಾರ್ಕೇಟ್ ಬಸ್ ನಿಲ್ದಾಣದ ಬಿಂದು ಆಯ್ಕೆ ಮಾಡಿಕೊಳ್ಳಬೇಕು. ನಂತರ ವಿದ್ಯಾರ್ಥಿಗಳು ಸೇಡಂ ರಿಂಗ್ ರಸ್ತೆ ಹತ್ತಿರದ ಕೆಎಚ್‌ಬಿ ಕಾಂಪ್ಲೇಕ್ಸ್ ಕೆ-1 ಕೇಂದ್ರ, ಮಿನಿವಿಧಾನ ಸೌಧ ಕೆ-1 ಕೇಂದ್ರ ಹಾಗೂ ಮಹಾನಗರಪಾಲಿಕೆ ಕೆ-1 ಕೇಂದ್ರ ಇಲ್ಲಿ ಬಸ್‌ಪಾಸ್ ಮುದ್ರಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಸಾರಿಗೆ ನಿಯಂತ್ರಕರಾದ ಶರಣಮ್ಮ-9686812466, ಶ್ರೀಮಂತ-9972898325, ಮಹಮ್ಮದಸಾಬ್-6361177933, ಭಾರತಿ-8884516009 ಹಾಗೂ ಕಾಂಚನಾ-8123047073 ಗಳಿಗೆ ಸಂಪರ್ಕಿಸಬೇಕು.

ಚಿಂಚೋಳಿ ಘಟಕಕ್ಕೆ ಸಂಬಂಧಿಸಿದ ವಿದ್ಯಾರ್ಥಿಗಳು ಚಿಂಚೋಳಿ ಬಸ್ ನಿಲ್ದಾಣ ಬಿಂದು ಆಯ್ಕೆ ಮಾಡಿಕೊಳ್ಳಬೇಕು. ನಂತರ ಚಿಂಚೋಳಿ ಚಂದಾಪೂರದ ಕೆ-1 ಕೇಂದ್ರ ಇಲ್ಲಿ ಬಸ್‌ಪಾಸ್ ಮುದ್ರಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಸಾರಿಗೆ ನಿಯಂತ್ರಕ ಕಲಮೇಶ-6362884028 ಇವರನ್ನು ಸಂಪರ್ಕಿಸಬೇಕು.

# ಡಿ.ಇಎಲ್.ಇಡಿ. ಹಾಗೂ ಡಿ.ಪಿ.ಎಸ್.ಇ ಪ್ರಥಮ ವರ್ಷದ ಕೋರ್ಸುಗಳಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.4- ಪ್ರಸಕ್ತ 2025-26ನೇ ಸಾಲಿಗೆ ಕಲಬುರಗಿ ದರ್ಗಾ ರಸ್ತೆಯ (ಎಸ್.ಟಿ.ಬಿ.ಟಿ) ಸರ್ಕಾರಿ ಶಿಕ್ಷಕರ/ ಶಿಕ್ಷಕಿಯರ ತರಬೇತಿ ಸಂಸ್ಥೆ ಸಂಸ್ಥೆಯಲ್ಲಿ ಡಿ.ಇಎಲ್.ಇಡಿ. (ಕನ್ನಡ & ಉರ್ದು ಮಾಧ್ಯಮ) ಮತ್ತು ಡಿ.ಪಿ.ಎಸ್.ಇ. (ಆಂಗ್ಲ ಮಾಧ್ಯಮ) ಪ್ರಥಮ ವರ್ಷದ ಸರ್ಕಾರಿ ಕೋಟಾದಡಿ ಲಭ್ಯವಿರುವ ಸೀಟುಗಳಿಗೆ ಪ್ರವೇಶ ಪಡೆಯಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಕಲಬುರಗಿ ಸರ್ಕಾರಿ ಶಿಕ್ಷಕಿಯರ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

ಅರ್ಹ ಅಭ್ಯರ್ಥಿಗಳು ಭರ್ತಿ ಮಾಡಿದ ಅರ್ಜಿಯೊಂದಿಗೆ ಅವಶ್ಯಕ ದಾಖಲೆಗಳನ್ನು ಲಗತ್ತಿಸಿ ಸರಕಾರಿ ಶಿಕ್ಷಕರ/ಶಿಕ್ಷಕಿಯರ ತರಬೇತಿ ಸಂಸ್ಥೆ (ಎಸ್.ಟಿ.ಬಿ.ಟಿ), ದರ್ಗಾ ರಸ್ತೆ, ಕಲಬುರಗಿ ಇಲ್ಲಿ 2025ರ ಜೂನ್ 25 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಪ್ರಾಚಾರ್ಯರು/ ಉಪನ್ಯಾಸಕರನ್ನು ಹಾಗೂ ಮೊಬೈಲ್ ಸಂಖ್ಯೆ 9901100298, 9902814130 ಮತ್ತು 9844011486 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ಪಂಚ ಗ್ಯಾರಂಟಿ ಪ್ರಗತಿ ಪರಿಶೀಲನೆ: ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಫಲಾನುಭವಿಗಳೊಂದಿಗೆ ಮುಕ್ತ ಚರ್ಚೆ ಅಗತ್ಯ:ಎಸ್.ಆರ್.ಮೆಹರೋಜ್ ಖಾನ್

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.4:ರಾಜ್ಯ ಸರ್ಕಾರ ಜನರ ಬದುಕು ಸುಸ್ಥಿರಗೊಳಿಸಲು ಪಂಚ ಗ್ಯಾರಂಟಿ ಯೋಜನೆಗಳು ಜಾರಿಗೆ ತಂದಿದ್ದು, ಇದನ್ನು ಅರ್ಹರಿಗೆ ತಲುಪಲು ಜಿಲ್ಲಾ ಗ್ಯಾರಂಟಿ ಪ್ರಾಧಿಕಾರದ ಸಮಿತಿಯು ಫಲಾನುಭವಿಗಳೊಂದಿಗೆ ಸಂವಾದ ನಡೆಸಿ ಸಮರ್ಪಕ ಅನುಷ್ಠಾನಕ್ಕೆ ಶ್ರಮಿಸಬೇಕೆಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಕಲಬುರಗಿ ವಿಭಾಗದ ಉಪಾಧ್ಯಕ್ಷ ಎಸ್.ಆರ್.ಮೆಹರೋಜ್ ಖಾನ್ ಹೇಳಿದರು.

ಬುಧವಾರ ಇಲ್ಲಿನ ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗ್ಯಾರಂಟಿ ಯೋಜನೆಯಲ್ಲಿ ಏನೆ ತೊಡಕಿದಲ್ಲಿ ಅದಮ್ನು ಬಗೆಹರಿಸಬೇಕು ಎಂದರು.

ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಲು ಮತ್ತು ಮುಕ್ತವಾಗಿ ಫಲಾನುಭವಿಗಳೊಂದಿಗೆ ಸಂವಾದ ನಡೆಸಲು ಜಿಲ್ಲಾ ಗ್ಯಾರಂಟಿ ಸಮಿತಿಯ ಅಧ್ಯಕ್ಷರು ತಾಲೂಕಾ, ಹಳ್ಳಿ ಪ್ರವಾಸ ಕೈಗೊಳ್ಳಬೇಕು. ಮುಂಚಿತವಾಗಿ ಅಧಿಕಾರಿಗಳಿಗೆ ಮಾಹಿತಿ ನೀಡಬೇಕೆಂದರು.

ಗೃಹಲಕ್ಷ್ಮೀಯೋಜನೆಯಿಂದ ಲಿಂಗತ್ವ ಅಲ್ಪಸಂಖ್ಯಾತರು ಹೊರಗುಳಿಯದಂತೆ ಎಚ್ಚರವಹಿಸಬೇಕು. ಅನ್ನ ಭಾಗ್ಯ ಯೋಜನೆಯಡಿ ನೀಡಲಾಗುವ ಉಚಿತ ಅಕ್ಕಿ ಕಾಳ ಸಂತೆಯಲ್ಲಿ ಮಾರಾಟವಾಗದಂತೆ ನಿಗಾ ಇಡಬೇಕು. ಯುವ ನಿಧಿ ನೋಂದಣಿ ಹೆಚ್ಚಿಸಲು



ಕಾಲೇಜು, ವಿ.ವಿ.ಗಳಿಗೆ ಭೇಟಿ ನೀಡಿ ಅರಿವು ಮೂಡಿಸಬೇಕು ಮತ್ತು ಯುವ ನಿಧಿ+ ಯೋಜನೆಯಡಿ ಉದ್ಯೋಗ ಪಡೆಯಲು ಕೌಶಲ್ಯ ತರಬೇತಿ ನೀಡಬೇಕು ಎಂದರು.

ಗೃಹ ಲಕ್ಷ್ಮೀ ಯೋಜನೆಯಡಿ ಜಿಲ್ಲೆಯ 5,81,715 ಜನರ ನೋಂದಣಿಯಾಗಿದ್ದು, ಇದೂವರೆಗೆ 1,997.81ಕೋಟಿ ರೂ., ಗೃಹ ಜ್ಯೋತಿ ಯೋಜನೆಯಡಿ 5,42,950 ಗ್ರಾಹಕರು ನೊಂದಾಯಿಸಿಕೊಂಡು ಉಚಿತ ವಿದ್ಯುತ್ ಪಡೆಯುತ್ತಿದ್ದಾರೆ. ಶಕ್ತಿ ಯೋಜನೆಯಡಿ ಇದೂವರೆಗೆ 1,352.72 ಲಕ್ಷ ಮಹಿಳಾ ಪ್ರಯಾಣಿಕರು ಉಚಿತ ಪ್ರಯಾಣದ ಸೌಲಭ್ಯ ಪಡೆದಿದ್ದು, ಇದರಿಂದ ಸಾರಿಗೆ ಸಂಸ್ಥೆಗೆ 458.44 ಕೋಟಿ ರೂ. ಆದಾಯ ಸಂದಾಯವಾಗಿದೆ. ಯುವ ನಿಧಿ ಯೋಜನೆಯಡಿ 18,981 ಅಭ್ಯರ್ಥಿಗಳು ನೋಂದಣಿ ಮಾಡಿದ್ದು, ಅರ್ಹರಿಗೆ 4.41 ಕೋಟಿ ರೂ. ನಿರುದ್ಯೋಗ ಭತ್ಯೆ ನೀಡಿದೆ. ಅನ್ನ ಭಾಗ್ಯ ಯೋಜನೆಯಡಿ ಡಿಸೆಂಬರ್ ಅಂತ್ಯದ ವರೆಗೆ 5.80 ಲಕ್ಷ ಪಡಿತರ ಚೀಟಿಯ ಮುಖ್ಯಸ್ಥರಿಗೆ ಡಿ.ಬಿ.ಟಿ ಮೂಲಕ ಹಣ ಪಾವತಿಸಿದೆ. ಫೆಬ್ರವರಿ ಮಾಹೆಯಿಂದ ಪ್ರತಿ ಸದಸ್ಯನಿಗೆ ತಲಾ 10ಕೆ.ಜಿ. ಅಕ್ಕಿ ನೀಡಲಾಗುತ್ತಿದೆ ಎಂದು ಆಯಾ ಇಲಾಖೆಯ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಕಾಳ ಸಂತೆಯಲ್ಲಿ ಅಕ್ಕಿ ಮಾರಾಟ, 53 ಎಫ್.ಐ.ಆರ್.ದಾಖಲು: ಅನ್ನಭಾಗ್ಯ ಯೋಜನೆಯಡಿ ನೀಡಲಾಗುವ ಉಚಿತ ಅಕ್ಕಿಯನ್ನು ಕಾಳ ಸಂತೆಯಲ್ಲಿ ಮಾರಾಟ ಮಾಡುತ್ತಿದ್ದವರ ಇಲಾಖೆ ನಿಗಾ ಇಟ್ಟಿದ್ದು, ಪ್ರತಿ ಚೆಕ್ ಪೋಸ್ಟ್ ನಲ್ಲಿ ಆಹಾರ ನಿರೀಕ್ಷರನ್ನು ನಿಯೀಜಿಸಲಾಗಿದೆ. 2024ರ ಏಪ್ರಿಲ್ ನಿಂದ ಇಲ್ಲಿಯವರೆಗೆ ಅಕ್ರಮ ಅಕ್ಕಿ ಮಾರಾಟ ಸಂಬಂಧ 54 ಎಫ್.ಐ.ಆರ್ ಪ್ರಕರಣ ದಾಖಲಿಸಿ, 103 ಜನರನ್ನು ವಶಕ್ಕೆ ಪಡೆಯಲಾಗಿದೆ. ಇವರಿಂದ 2.78 ಕೋಟಿ ರೂ. ಮೊತ್ತದ 4,244 ಕ್ವಿಂಟಾಲ್ ಆಹಾರ ಧಾನ್ಯ ಸೀಜ್ ಮಾಡಲಾಗಿದೆ ಎಂದು ಆಹಾರ ಇಲಾಖೆ ಉಪನಿರ್ದೇಶಕ ಭೀಮರಾಯ ಮಾಹಿತಿ ನೀಡಿದರು.

ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರಿ, ಉಪಾಧ್ಯಕ್ಷರಾದ ಸೋಮಶೇಖರ ಹಿರೇಮಠ, ನರಸಿಂಹಲು, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಮುಖ್ಯ ಯೋಜನಾಧಿಕಾರಿ

ಎಸ್.ಎಸ್.ಮಠಪತಿ, ಜೆಸ್ಕಾಂ ಅಧೀಕ್ಷಕ ಅಭಿಯಂತ ಖಂಡೆಪ್ಪ ಸೋನಾವಣೆ, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಸಹಾಯಕ ನಿರ್ದೇಶಕಿ ಭಾರತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಮುರುಗೇಶ ಗುಣಾರೆ, ಕೆ.ಕೆ.ಆರ್.ಟಿ.ಸಿ ಅಧಿಕಾರಿಗಳು ಸೇರಿದಂತೆ ಮೊದಲಾದವರು ಇದ್ದರು.

# ವಿಶೇಷ ಅಧಿವೇಶನ ಬೇಡಿಕೆ ತಪ್ಪಿಸಲು 47 ದಿನ ಮುಂಚಿತವಾಗಿ ಮುಂಗಾರು ಅಧಿವೇಶನ ಘೋಷಣೆ: ಕಾಂಗ್ರೆಸ್

ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ:ಜೂ.4: ಪಹಲ್ಗಾಮ್ ಉಗ್ರ ದಾಳಿ ಮತ್ತು ಪಾಕಿಸ್ತಾನದ ಭಯೋತ್ಪಾದಕರ ನೆಲೆಗಳ ಮೇಲೆ ನಡೆಸಿದ ಆಪರೇಷನ್ ಸಿಂಧೂರ ಕುರಿತು ಚರ್ಚಿಸಲು ತಕ್ಷಣ ವಿಶೇಷ ಅಧಿವೇಶನ ಕರೆಯಬೇಕು ಎಂಬ ಪ್ರತಿಪಕ್ಷಗಳ ಬೇಡಿಕೆಯಿಂದ ತಪ್ಪಿಸಿಕೊಳ್ಳಲು ಕೇಂದ್ರ ಸರ್ಕಾರ ಸಂಸತ್ ಮುಂಗಾರು ಅಧಿವೇಶನವನ್ನು 47 ದಿನ ಮುಂಚಿತವಾಗಿ ಘೋಷಿಸಿದೆ ಎಂದು ಕಾಂಗ್ರೆಸ್ ಬುಧವಾರ ಆರೋಪಿಸಿದೆ. ಸಂಸತ್ ಮುಂಗಾರು ಅಧಿವೇಶನ ಜುಲೈ 21 ರಿಂದ ಆಗಸ್ಟ್ 12 ರವರೆಗೆ ನಡೆಯಲಿದೆ ಎಂದು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಬುಧವಾರ ಹೇಳಿದ್ದಾರೆ. ಕಿರಣ್ ರಿಜಿಜು ಹೇಳಿಕೆಗೆ ಎಕ್ಸ್ ನಲ್ಲಿ ಪ್ರತಿಕ್ರಿಯಿಸಿರುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್, ಸಾಮಾನ್ಯವಾಗಿ ಸಂಸತ್ ಅಧಿವೇಶನದ ದಿನಾಂಕಗಳನ್ನು ಕೆಲವು ದಿನಗಳ ಮುಂಚಿತವಾಗಿ ಘೋಷಿಸಲಾಗುತ್ತದೆ. ಆದರೆ ಮುಂಗಾರು "ಅಧಿವೇಶನವನ್ನು ಆರಂಭವಾಗುವ 47 ದಿನಗಳ ಮುಂಚೆ ಯಾವತ್ತೂ ಘೋಷಿಸಿಲ್ಲ"



ಎಂದು ಹೇಳಿದ್ದಾರೆ."ಪಹಲ್ಗಾಮ್ ಉಗ್ರ ದಾಳಿ ಮತ್ತು ಭಯೋತ್ಪಾದಕರನ್ನು ಬಂಧಿಸುವಲ್ಲಿ ಕೇಂದ್ರದ ವಿಫಲತೆ, ಆಪರೇಷನ್ ಸಿಂಧೂರ್‌ನ ಪರಿಣಾಮಗಳು ಮತ್ತು ಅದರ ಸ್ಪಷ್ಟ ರಾಜಕೀಯೀಕರಣ, ಭಾರತ ಮತ್ತು ಪಾಕಿಸ್ತಾನ ಕದನ ವಿರಾಮಕ್ಕೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಮಧ್ಯಸ್ಥಿಕೆಯ ನಿರಂತರ ಹೇಳಿಕೆ, ನಮ್ಮ ವಿದೇಶಾಂಗ ನೀತಿ ಮತ್ತು ರಾಜತಾಂತ್ರಿಕ ವೈಫಲ್ಯಗಳ ಕುರಿತು ಚರ್ಚಿಸಲು ತಕ್ಷಣ ವಿಶೇಷ ಅಧಿವೇಶನ ಕರೆಯಬೇಕೆಂಬ ಇಂಡಿಯಾ ಮೈತ್ರಿಕೂಟ ಮತ್ತು ಇತರ ಪ್ರತಿಪಕ್ಷಗಳ ಬೇಡಿಕೆಯಿಂದ ತಪ್ಪಿಸಿಕೊಳ್ಳಲು ಮಾತ್ರ ಮುಂಗಾರು ಅಧಿವೇಶನದ ದಿನಾಂಕ ಪ್ರಕಟಿಸಲಾಗಿದೆ" ಎಂದು ಜೈರಾಮ್ ರಮೇಶ್ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.

# ಜು. 21 ರಿಂದ ಆ. 12 ರವರೆಗೆ ಸಂಸತ್ ಮುಂಗಾರು ಅಧಿವೇಶನ: ಕಿರಣ್ ರಿಜಿಜು



ಮಲ್ಲಮ್ಮ ನುಡಿ ವಾರ್ತೆ

ನವದೆಹಲಿ: ಜೂ.4:ಸಂಸತ್ ಮಳೆಗಾಲದ ಅಧಿವೇಶನ ಜುಲೈ 21 ರಿಂದ ಆಗಸ್ಟ್ 12 ರವರೆಗೆ ನಡೆಯಲಿದೆ ಎಂದು ಕೇಂದ್ರ ಸಚಿವ ಕಿರಣ್ ರಿಜಿಜು ಅವರು ಬುಧವಾರ ತಿಳಿಸಿದ್ದಾರೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅಧ್ಯಕ್ಷತೆಯ ಸಂಸದೀಯ ವ್ಯವಹಾರಗಳ ಸಂಪುಟ ಸಮಿತಿಯು ಈ ದಿನಾಂಕಗಳನ್ನು ಶಿಫಾರಸು ಮಾಡಿದೆ ಎಂದು ಅವರು ಸುದ್ದಿಗಾರರಿಗೆ ತಿಳಿಸಿದ್ದಾರೆ.

ಅಧಿವೇಶನ ಕರೆಯುವ ಶಿಫಾರಸನ್ನು ರಾಷ್ಟ್ರಪತಿಗಳಿಗೆ ಕಳುಹಿಸಲಾಗುವುದು ಎಂದು ಸಂಸದೀಯ ವ್ಯವಹಾರಗಳ ಸಚಿವರು ಹೇಳಿದ್ದಾರೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅಧ್ಯಕ್ಷತೆಯ ಸಂಸದೀಯ ವ್ಯವಹಾರಗಳ ಸಂಪುಟ ಸಮಿತಿಯು ಈ ದಿನಾಂಕಗಳನ್ನು ಶಿಫಾರಸು ಮಾಡಿದೆ ಎಂದು ಅವರು ಸುದ್ದಿಗಾರರಿಗೆ ತಿಳಿಸಿದ್ದಾರೆ.

# ಕೇಸ್ ಹಾಕಿ ಹೋರಾಟ ಹತ್ತಿಕ್ಕಲು ಸಾಧ್ಯವಿಲ್ಲ ಸರ್ಕಾರದ ವರ್ತನೆಗೆ ಬೆಲ್ದಾಳೆ, ಸೋಮನಾಥ ಕಿಡಿ



ರಾಜ್ಯ ಸರ್ಕಾರದ ಓಲೈಕೆ ಧೋರಣೆಯಿಂದಲೇ ಕಾನೂನು ಸುವ್ಯವಸ್ಥೆ ಹಾಳಾಗಿ ಜನರು ನಿತ್ಯ ಭಯದಲ್ಲಿ ಬದುಕುತ್ತಿದ್ದಾರೆ. ಆದರೂ ಸಿಎಂ ಸಿದ್ಧರಾಮಯ್ಯ, ಗೃಹ ಸಚಿವ ಡಾ.ಪರಮೇಶ್ವರ ಅವರು ತಮಗೇನೂ ಗೊತ್ತಿಲ್ಲ ಎಂದು ಜಾರಿಕೊಳ್ಳುತ್ತಿರುವುದು ನಾಡಿನ ದುರ್ದೈವ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸರ್ವಾಧಿಕಾರಿ ಧೋರಣೆ, ಅಧಿಕಾರ ದುರ್ಬಳಕೆ ಮಾಡಿಕೊಳ್ಳುವುದು ಜನರು ಯಾವತ್ತೂ ಸಹಿಸುವುದಿಲ್ಲ.

**-ಡಾ.ಶೈಲೇಂದ್ರ ಬೆಲ್ದಾಳೆ**
**ಬಿಜೆಪಿ ರಾಜ್ಯ ಕಾರ್ಯದರ್ಶಿ, ದಕ್ಷಿಣ ಶಾಸಕ**



ಕಾಂಗ್ರೆಸ್ ಗೂಂಡಾಗಿರಿ ಧೋರಣೆಗೆ ನಾವು ಹೆದರುವುದಿಲ್ಲ. ನಮ್ಮ ಕಾರ್ಯಕರ್ತರ ರಕ್ಷಣೆಗಾಗಿ ನಾವು ಸದಾ ಸಿದ್ಧರಿದ್ದೇವೆ, ಹೋರಾಟಕ್ಕೂ ಬದ್ಧರಾಗಿದ್ದೇವೆ. ಅಧಿಕಾರ ಶಾಶ್ವತವಲ್ಲ. ಪೊಲೀಸ್ ಬಲ, ಆಡಳಿತ ದುರ್ಬಳಕೆಯಿಂದ ಬಹಳ ಕಾಲ ಮನ್ ಮಾನಿ ಮಾಡಲು ಸಾಧ್ಯವಿಲ್ಲ. ಯಾವ ಕಾರಣಕ್ಕೂ ಕಾರ್ಯಕರ್ತರು ಧೃತಿಗೆಡಬಾರದು. ಈ ಸರ್ಕಾರ ಕಿತ್ತೊಗೆಯುವವರೆಗೂ ನಮ್ಮ ಹೋರಾಟ ನಿಲ್ಲುವುದಿಲ್ಲ.

**-ಸೋಮನಾಥ ಪಾಟೀಲ್**
**ಬಿಜೆಪಿ ಜಿಲ್ಲಾ ಅಧ್ಯಕ್ಷ**

ಮಲ್ಲಮ್ಮ ನುಡಿ ವಾರ್ತೆ

ಬೀದರ್:ಜೂ.4:ತುಷ್ಟೀಕರಣ, ಓಲೈಕೆ ರಾಜಕಾರಣಕ್ಕಾಗಿ ಕಾಂಗ್ರೆಸ್ ಸರ್ಕಾರ ಅಧಿಕಾರ ದುರ್ಬಳಕೆ ಮಾಡಿಕೊಂಡು ಬಿಜೆಪಿ ಶಾಸಕರು, ಮುಖಂಡರು, ಹಿಂದು ಹೋರಾಟಗಾರರ ವಿರುದ್ಧ ಕೇಸ್ ಹಾಕುವ, ಗಡಿಪಾರು ಮಾಡುವ ಕೆಲಸದಲ್ಲಿ ತೊಡಗಿದೆ. ವಿನಾಶಕಾಲೇ ವಿಪರೀತ ಬುದ್ಧಿ ಎಂಬಂತೆ ಇದು ರಾಜ್ಯದಲ್ಲಿ ಕಾಂಗ್ರೆಸ್ ಅವನತಿಗೆ ನಾಂದಿ ಹಾಡಲಿದೆ ಎಂದು ಬಿಜೆಪಿ ರಾಜ್ಯ ಕಾರ್ಯದರ್ಶಿಯೂ ಆಗಿರುವ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ, ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ್ ಹೇಳಿದ್ದಾರೆ.

ರಾಜ್ಯ ಸರ್ಕಾರ ಪೊಲೀಸ್ ಇಲಾಖೆ ಬಳಸಿಕೊಂಡು ಪ್ರತಿಪಕ್ಷ ಹಾಗೂ ಹಿಂದುತ್ವದ ಹೋರಾಟವನ್ನು ಹತ್ತಿಕ್ಕುವ ಕೆಲಸ ಮಾಡುತ್ತಿದೆ. ಕರಾವಳಿ ಭಾಗದ ಜಿಲ್ಲೆಗಳು ಸೇರಿದಂತೆ ವಿವಿಧೆಡೆ ಸರ್ಕಾರವೇ ಗೂಂಡಾ ವರ್ತನೆಗೆ ಇಳಿದಿದೆ. ಇದು ಈ ಸರ್ಕಾರದ ನಿಜಬಣ್ಣವನ್ನು ಬಯಲು ಮಾಡಿದೆ. ಸರ್ಕಾರ ಎಷ್ಟೇ ಅಧಿಕಾರ ದುರ್ಬಳಕೆ ಮಾಡಿಕೊಂಡರೂ ನಮ್ಮ ಜನಪರ, ಸಮಾಜಪರ, ರಾಷ್ಟ್ರಪರ ವಿಚಾರದ ಕೆಲಸ, ಹೋರಾಟಕ್ಕೆ ಹತ್ತಿಕ್ಕಲು ಸಾಧ್ಯವಿಲ್ಲ ಎಂದು ಜಂಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಜ್ಯದಲ್ಲಿ ಕಾನೂನು, ಸುವ್ಯವಸ್ಥೆ ಸಂಪೂರ್ಣ ಹಳಿ ತಪ್ಪಿದೆ. ಸಮಾಜಘಾತುಕರು, ದುಷ್ಟರು ಭಯವಿಲ್ಲದೆ ವಿವಿಧ ದುಷ್ಕೃತ್ಯಗಳಲ್ಲಿ ತೊಡಗಿದ್ದಾರೆ. ಕೊಲೆ, ದರೋಡೆ, ಅತ್ಯಾಚಾರ, ಸುಲಿಗೆ ಹೆಚ್ಚಾಗಿದ್ದು ಸಾರ್ವಜನಿಕರು ಭಯಭೀತರಾಗಿದ್ದಾರೆ. ಕೇವಲ ತುಷ್ಟೀಕರಣ ರಾಜಕಾರಣದಲ್ಲಿ ತೊಡಗಿ ಒಬ್ಬರನ್ನು ಎತ್ತಿಕಟ್ಟುತ್ತ, ಮತ್ತೊಬ್ಬರನ್ನು ತುಳಿಯುತ್ತ ಸರ್ಕಾರವೇ ಸಮಾಜದಲ್ಲಿ ಕೋಮುದ್ವೇಷದ ಭಾವನೆ ಬೆಳೆಸುತ್ತಿದೆ. ಪಾಕಿಸ್ತಾನ ಜಿಂದಾಬಾದ್ ಎಂದವರಿಗೆ ಸಾಥ್ ನೀಡುವ, ಪೊಲೀಸ್ ಠಾಣೆಗೆ ಬೆಂಕಿ ಹಚ್ಚಿದವರಿಗೆ ಬೆಂಬಲಿಸಿರುವುದು ಇವರ ಮನಸ್ಥಿತಿ? ನಿಲುವು ಏನು ಎಂಬುದು ತೋರಿಸಿಕೊಟ್ಟಿದೆ. ಈ ಭಂಡ ಸರ್ಕಾರಕ್ಕೆ ಜನರು ತಕ್ಕ ಪಾಠ ಕಲಿಸುವ ದಿನ ಹತ್ತಿರವಾಗಿವೆ ಎಂದು ಹೇಳಿದ್ದಾರೆ. ಬೀದರಿನಿಂದ ಹಿಡಿದು ಚಾಮರಾಜನಗರವರೆಗೆ ರಾಜ್ಯದ ಎಲ್ಲಾ ಪೊಲೀಸ್ ಠಾಣೆಗಳು ಅಕ್ಷರಶಃ ಕಾಂಗ್ರೆಸ್ ಕಚೇರಿಗಳಾಗಿ ಮಾರ್ಪಟ್ಟಿವೆ.

ಸರ್ಕಾರದ ಜನ ವಿರೋಧಿ, ರೈತ ವಿರೋಧಿ, ಸಮಾಜ ವಿರೋಧಿ ಕ್ರಮದ ಬಗ್ಗೆ ಧ್ವನಿ ಎತ್ತುವವರ ಮೇಲೆ ಎಫ್ಐಆರ್ ಅಸ್ತ್ರವನ್ನು ಪ್ರಯೋಗಿಸಲಾಗುತ್ತಿದೆ. ಟಾರ್ಗೆಟ್ ಕಿಲ್ಲಿಂಗ್ ನಡೆಯುತ್ತಿವೆ. ವಿಧಾನ ಪರಿಷತ್ ಸಭಾಪತಿ ಛಲವಾದಿ ನಾರಾಯಣಸ್ವಾಮಿ, ಸಿ.ಟಿ. ರವಿ, ಹರೀಶ್ ಪೂಂಜಾ, ಪುತ್ತಿಲ ಸೇರಿ ವಿಪಕ್ಷ ನಾಯಕರ ಮೇಲೆ ಖಟ್ಲೆ ಹೂಡಲಾಗುತ್ತಿದೆ. ಹಿಂದು ಹೋರಾಟಗಾರರಿಗೆ ಗಡಿಪಾರು ಮಾಡಲಾಗುತ್ತಿದೆ. ಪೊಲೀಸರು ಕಾಂಗ್ರೆಸ್ ಕಾರ್ಯಕರ್ತರ ತರಹ ಕೆಲಸ ಮಾಡುತ್ತಿದ್ದಾರೆ. ಇಷ್ಟಾದರೂ ಗೃಹ ಸಚಿವ ಡಾ. ಪರಮೇಶ್ವರ ಅವರು ಮೌನಕ್ಕೆ ಜಾರಿದ್ದಾರೆ. ಇಂಥ ನಿಷ್ಕ್ರಿಯ ಗೃಹ ಸಚಿವರನ್ನು ಕನ್ನಡ ನಾಡು ಹಿಂದೆಂದೂ ಕಂಡಿಲ್ಲ ಎಂದು ಕಿಡಿಕಾರಿದ್ದಾರೆ.

ರಾಜ್ಯದಲ್ಲಿ ಪ್ರತಿ ಜಿಲ್ಲೆಗೂ ಗೃಹ ಮಂತ್ರಿ ಇದ್ದಂತಾಗಿದೆ. ಸಚಿವ ಪ್ರಿಯಾಂಕ್ ಖರ್ಗೆ

ರಿಪಬ್ಲಿಕ್ ಆಫ್ ಕಲಬುರ್ಗಿ ಹೆಡ್ ಆಗಿದ್ದಾರೆ. ಸದ್ಯಕ್ಕಂತೂ ಕಲಬುರಗಿ ಜಿಲ್ಲೆಯಲ್ಲಿ ತುರ್ತು ಪರಿಸ್ಥಿತಿ ವಿಧಿಸಿದಂತಾಗಿದೆ.

ಚಿತ್ತಾಪುರದಲ್ಲಿ ಕಾಂಗ್ರೆಸ್ ಕಿಡಿಗೇಡಿಗಳು ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರ ಮೇಲೆ ಹಲ್ಲೆಗೆ ಯತ್ನಿಸಿದರೂ, ಖರ್ಗೆ ಸೂಚನೆ ಪ್ರಕಾರ ಪೊಲೀಸರು ಕ್ರಮ ಕೈಗೊಳ್ಳಲಿಲ್ಲ. ದಿನ ಬೆಳೆಗಾದರೆ ಉದ್ದುದ್ದ ಭಾಷಣ ಮಾಡಿ, ದೊಡ್ಡ ಹೇಳಿಕೆ ಪೋಜ್ ನೀಡುವ ಖರ್ಗೆ, ಕಲಬುರಗಿಯಲ್ಲಿ ಮರಳು, ಲ್ಯಾಂಡ್ ಸೇರಿ ವಿವಿಧ ಮಾಫಿಯಾ, ಸಮಾಜಘಾತುಕರು, ಗೂಂಡಾಗಳ ವಿರುದ್ಧ ಕ್ರಮ ಕೈಗೊಳ್ಳದೇ ಅವರನ್ನು ರಕ್ಷಿಸುವಲ್ಲಿ ತೊಡಗಿದ್ದಾರೆ ಎಂದು ದೂರಿದ್ದಾರೆ.

# ಅಪ್ರಾಪ್ತ ಬಾಲಕಿಗೆ ಲೈಂಗಿಕ ಕಿರುಕುಳ: ಆರೋಪಿಗೆ ಶಿಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಜೂ.4:ಅಪ್ರಾಪ್ತ ವಯಸ್ಸಿನ ಬಾಲಕಿಗೆ ಲೈಂಗಿಕ ಕಿರುಕುಳ ನೀಡಿದ ಹಿನ್ನೆಲೆಯಲ್ಲಿ ಆರೋಪ ಸಾಭಿತಾಗಿ ಎಂದು ಗಂಗಾವತಿ ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು ಆರೋಪಿಗೆ ಶಿಕ್ಷೆ ವಿಧಿಸಿದ್ದಾರೆ.

ಗಂಗಾವತಿ ಗ್ರಾಮೀಣ ಪೋಲಿಸ್ ಠಾಣೆ ವ್ಯಾಪ್ತಿಯ ಪಿರ್ಯಾಧಿದಾರರ ಮಗಳು 3ನೇ ತರಗತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದು, 2022ರ ಸೆಪ್ಟೆಂಬರ್ 8ರಂದು ಸಂಜೆ 4.30 ಗಂಟೆಗೆ ಮಗಳು ಮನೆಗೆ ಬಂದಾಗ ಹಾಲಿನ ಕೇಂದ್ರದಲ್ಲಿ ಹಾಲು ತರಲು ಕಳುಹಿಸಿದ್ದು, ಮಲ್ಲಾಪುರ ಗ್ರಾಮದ ಆಂಜಿನಪ್ಪ ಬಂಡಿ ಇತನ ಮನೆಯ ಮುಂದೆ ಬಾಧಿತ ಮಗು ಹೋಗುತ್ತಿದ್ದಾಗ ಆಂಜಿನಪ್ಪನು ಬಾಧಿತ ಮಗುವಿಗೆ ನಮಗೂ ಹಾಲು ತರುವಂತೆ ನೆಪ ಹೇಳಿ ತನ್ನ ಮನೆಯ ಒಳಗೆ ಕ-ರೆದುಕೊಂಡು ಹೋಗಿ ಮಂಚದ ಮೇಲೆ ಮಲಗಿಸಿ ಮೈ ಮೇಲೆ ಬಿದ್ದಾಗ ಬಾಧಿತ ಮಗು ಚೀರಾಡಿದ ಶಬ್ದ ಕೇಳಿ ಓಣಿಯ ಜನರು ಬಂದು ಬುದ್ದಿವಾದ ಹೇಳಿ ಛೀಮಾರಿ ಹಾಕಿದ್ದಾರೆ. ಈ ಹಿನ್ನೆಲೆಯಲ್ಲಿ ಗಂಗಾವತಿ ಗ್ರಾಮೀಣ ಪೋಲಿಸ್ ಠಾಣೆಯ ಪಿ.ಐ ಮಂಜುನಾಥ ಎಸ್. ಅವರು ದೂರು ಸ್ವೀಕರಿಸಿ ಪ್ರಕರಣದ ತನಿಖೆ ನಿರ್ವಹಿಸಿ ಆರೋಪಿತನ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು. ಈ ಪ್ರಕರಣವು ಸ್ಪೇ.ಎಸ್‌ಸಿ(ಪೋಕ್ಸೊ)ಸಂ:12/2024 ರಲ್ಲಿ ದಾಖಲಾಗಿದ್ದು, ವಿಚಾರಣೆಯನ್ನು ನಡೆಸಿದ ನ್ಯಾಯಾಲಯವು ಆರೋಪಿ ಮಲ್ಲಾಪುರದ ಆಂಜಿನಪ್ಪ ಬಂಡಿ ಇತನ ಮೇಲಿನ ಆರೋಪಣೆಗಳು ಸಾಭೀತಾಗಿದೆ ಎಂದು 4 ವರ್ಷಗಳ ಜೈಲು ಶಿಕ್ಷೆ ಹಾಗೂ ರೂ. 60,000 ಗಳ ದಂಡವನ್ನು ಭರಿಸುವಂತೆ ಆದೇಶಿಸಿ ಗಂಗಾವತಿ ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರಾದ ಸದಾನಂದ ನಾಗಪ್ಪ ನಾಯಕ ಅವರು 2025ರ ಮೇ 30ರಂದು ತೀರ್ಪು ಹೊರಡಿಸಿರುತ್ತಾರೆ. ಸರ್ಕಾರದ ಪರವಾಗಿ ವಿಶೇಷ ಸರ್ಕಾರಿ ಅಭಿಯೋಜಕರಾದ ಗೌರಮ್ಮ ದೇಸಾಯಿ ಅವರು ಪ್ರಕರಣ ನಡೆಸಿ ವಾದ ಮಂಡಿಸಿದ್ದರು. ಗಂಗಾವತಿ ಗ್ರಾಮೀಣ ಪೋಲಿಸ್ ಠಾಣೆಯ ಪೋಲಿಸ್ ಸಿಬ್ಬಂದಿ ವಿಶ್ವನಾಥ ಅವರು ನ್ಯಾಯಾಲಯದಲ್ಲಿ ಸಾಕ್ಷಿದಾರರನ್ನು ಸಕಾಲಕ್ಕೆ ಹಾಜರಪಡಿಸಿ ಆರೋಪ ಸಾಭೀತುಪಡಿಸಲು ಸಹಕರಿಸಿರುತ್ತಾರೆ ಎಂದು ಕೊಪ್ಪಳ ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಲಯದ ವಿಶೇಷ ಸರ್ಕಾರಿ ಅಭಿಯೋಜಕರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ಅಮರನಾಥ ಯಾತ್ರೆಗೆ ಉಗ್ರರ ದಾಳಿ ಭೀತಿ : ಭದ್ರತಾ ಪಡೆಗಳಿಂದ ಆಪರೇಷನ್ ಶಿವ'ಆರಂಭ

ಮಲ್ಲಮ್ಮ ನುಡಿ ವಾರ್ತೆ

ಶ್ರೀನಗರ:ಜೂ.4: ಅಮರನಾಥ ಯಾತ್ರೆಗೆ ಉಗ್ರರ ಭೀತಿ ಇರುವುದರಿಂದ ಯಾತ್ರೆಯನ್ನು ಸುಗಮವಾಗಿ ನಡೆಸಲು ಭಾರತೀಯ ಭದ್ರತಾ ಪಡೆಗಳು ಆಪರೇಷನ್ ಶಿವ' ಹೆಸರಿನಲ್ಲಿ ಕಾರ್ಯಾಚರಣೆ ಆರಂಭಿಸಿವೆ. ಯಾತ್ರೆ ಜು.3 ರಂದು ಪ್ರಾರಂಭವಾಗಿ ಆ.9 ರವರೆಗೆ 38 ದಿನಗಳವರೆಗೆ ಅಮರನಾಥ ಯಾತ್ರೆ ನಡೆಯಲಿದೆ. ಈ ಅವಧಿಯಲ್ಲಿ ಹಿಮಾಲಯದ 3,880 ಮೀಟರ್ ಎತ್ತರದಲ್ಲಿರುವ ಶಿವನ ಗುಹಾ ದೇವಾಲಯಕ್ಕೆ ಲಕ್ಷಾಂತರ ಭಕ್ತರು ಭೇಟಿ ನೀಡಲಿದ್ದಾರೆ. ಭಕ್ತರ ಸುರಕ್ಷತೆಗಾಗಿ ಸೇನೆ ಸಕಲ ಸಿದ್ಧತೆ ಮಾಡಿಕೊಂಡಿದೆ. ಯಾತ್ರಿ ನಿವಾಸದಿಂದ ಇಡೀ ಮಾರ್ಗದಲ್ಲಿ ಭದ್ರತೆ ಕೈಗೊಳ್ಳಲಾಗಿದೆ. ಯಾತ್ರೆಯ ಸಮಯದಲ್ಲಿ ಭದ್ರತಾ ಪಡೆಗಳು ಹೆಚ್ಚಿನ ಎಚ್ಚರಿಕೆ ವಹಿಸುವಂತೆ ಗೃಹ ಸಚಿವ ಅಮಿತ್ ಶಾ ನಿರ್ದೇಶನ ನೀಡಿದ್ದಾರೆ.

# ಆರ್‌ಸಿಬಿ ವಿಜಯೋತ್ಸವದ ವೇಳೆ ಕಾಲ್ತುಳಿತ : ಹೃದಯ ವಿದ್ರಾವಕ ಘಟನೆ; ರಮ್ಯಾ ಬೇಸರ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜೂ.4: ಆರ್‌ಸಿಬಿ ಸಂಭ್ರಮಾಚರಣೆ ವೇಳೆ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ಕಾಲುಳ್ತಿತ ಉಂಟಾಗಿ 11 ಮಂದಿ ಅಭಿಮಾನಿಗಳು ಮೃತಪಟ್ಟಿದ್ದು, ಈ ಬಗ್ಗೆ ನಟಿ ರಮ್ಯಾ ಎಕ್ಸ್ ಮೂಲಕ ಬೇಸರ ವ್ಯಕ್ತಪಡಿಸಿದ್ದಾರೆ.

ಸ್ಟೇಡಿಯಂನಲ್ಲಿ ಕಾಲುಳ್ತಿತದ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ಅವರು,



ಸಂಭ್ರಮಾಚರಣೆಯು ಯಾವ ರೀತಿ ದುಃಖಕರ ಸಂಗತಿಯಾಗಿ ಬದಲಾಯಿತು. ನಿಜಕ್ಕೂ ಇದು ಹೃದಯವಿದ್ರಾಕ ಘಟನೆ ಎಂದು ಬರೆದುಕೊಂಡು ಘಟನೆ ಬಗ್ಗೆ ಬೇಸರ ವ್ಯಕ್ತಪಡಿಸಿದ್ದಾರೆ.

ಆರ್‌ಸಿಬಿ ಗೆಲುವು ವಿಜಯೋತ್ಸವದ ವೇಳೆ ಯಡವಟ್ಟು ಸಂಭವಿಸಿ, ಚಿನ್ನಸ್ವಾಮಿ ಸ್ಟೇಡಿಯಂ ಬಳಿ ಕಾಲ್ತುಳಿತಕ್ಕೆ 11 ಮಂದಿ ಆರ್‌ಸಿಬಿ ಫ್ಯಾನ್ಸ್ ದುರ್ಮರಣಕ್ಕೀಡಾಗಿದ್ದಾರೆ. 50ಕ್ಕೂ ಹೆಚ್ಚು ಮಂದಿ ಗಂಭೀರವಾಗಿ ಗಾಯಗೊಂಡಿರುವ ಘಟನೆ ನಡೆದಿದೆ.

# ಬೈಕ್ ಗೆ ಲಾರಿ ಡಿಕ್ಕಿ; ಭೀಕರ ಅಪಘಾತದಲ್ಲಿ ಮೂವರು ಸಾವು

ಮೈಸೂರು:ಜೂ.4:ನಂಜನಗೂಡು ತಾಲೂಕಿನ ಸಂಗಮ ಮತ್ತು ಹುಲ್ಲಹಳ್ಳಿ ಮುಖ್ಯರಸ್ತೆಯಲ್ಲಿ ಬುಧವಾರ ಲಾರಿಯೊಂದು ಬೈಕ್ ಗೆ ಡಿಕ್ಕಿ ಹೊಡೆದಿದ್ದು, ಭೀಕರ ಅಪಘಾತದಲ್ಲಿ ಬೈಕ್‌ನಲ್ಲಿ ತೆರಳುತ್ತಿದ್ದ ದಂಪತಿ ಮತ್ತು ಓರ್ವ ಮಹಿಳೆ ಸೇರಿ ಮೂವರು ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ.

ಮೃತರನ್ನು ಹಂಚೀಪುರ ಗ್ರಾಮದ ಚಿಕ್ಕಸ್ವಾಮಿ(45), ಅವರ ಪತ್ನಿ ರೂಪಾ(38) ಮತ್ತು ಕಣೇನೂರು ಗ್ರಾಮದ ಚನ್ನಮಲ್ಲಮ್ಮ(55) ಎಂದು ಗುರುತಿಸಲಾಗಿದೆ.

ಚಿಕ್ಕಸ್ವಾಮಿ, ಪತ್ನಿ ರೂಪಾ ಮತ್ತು ಚನ್ನಮಲ್ಲಮ್ಮ ಅವರಿದ್ದ ಬೈಕ್‌ಗೆ ಲಾರಿ ಡಿಕ್ಕಿ ಹೊಡೆದಿದೆ. ಗುದ್ದಿದ ರಭಸಕ್ಕೆ ಮೂವರೂ ರಸ್ತೆ ಮೇಲೆ ಬಿದ್ದಿದ್ದಾರೆ. ಈ ವೇಳೆ, ಲಾರಿಯು ಅವರ ಮೇಲೆ ಹರಿದಿದೆ. ಚಕ್ರಕ್ಕೆ ಸಿಲುಕಿದ ಮೂವರು ನುಜ್ಜುಗುಜ್ಜಾಗಿ ಸ್ಥಳದಲ್ಲೇ ಅಸುನೀಗಿದ್ದಾರೆ.

ಡಿವೈಎಸ್‌ಪಿ ರಘು, ಪಿಎಸ್ಐ ಚೇತನ್ ಕುಮಾರ್ ಅವರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅಪಘಾತವಾದ ಲಾರಿಯು ತಮಿಳುನಾಡು ಮೂಲದ್ದಾಗಿದೆ. ಲಾರಿ ಚಾಲಕನನ್ನು ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ.

ಈ ಸಂಬಂಧ ಹುಲ್ಲಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಭಾರತದ ವಿರೋಧದ ಮಧ್ಯ ಪಾಕಿಸ್ತಾನಕ್ಕೆ ೮೦೦ ಮಿಲಿಯನ್ ಡಾಲರ್ ಪ್ಯಾಕೇಜ್‌ಗೆ ಎಡಿಬಿ ಅನುಮೋದನೆ

ನವದೆಹಲಿ:ಜೂ.4: ಏಷ್ಯನ್ ಅಭಿವೃದ್ಧಿ ಬ್ಯಾಂಕ್ ಪಾಕಿಸ್ತಾನಕ್ಕೆ ಯುಎಸ್‌ಡಿ 300 ಮಿಲಿಯನ್ ನೀತಿ ಆಧಾರಿತ ಸಾಲ ಮತ್ತು ಯುಎಸ್‌ಡಿ 500 ಮಿಲಿಯನ್ ಕಾರ್ಯಕ್ರಮ ಆಧಾರಿತ ಗ್ಯಾರಂಟಿ ಒಳಗೊಂಡ ಮಹತ್ವದ ಹಣಕಾಸು ಪ್ಯಾಕೇಜ್ ನ್ನು ಅನುಮೋದಿಸಿದೆ. ಭಾರತ ವ್ಯಕ್ತಪಡಿಸಿದ ಕಳವಳಗಳ ಹೊರತಾಗಿಯೂ ಈ ಬೆಳವಣಿಗೆ ಸಂಭವಿಸಿದೆ ಎಂದು ವರದಿಗಳು ತಿಳಿಸಿವೆ. ಪಾಕಿಸ್ತಾನ ಅಂತರರಾಷ್ಟ್ರೀಯ ಹಣಕಾಸು ನಿಧಿಯಿ ೨ಂದ $1 ಬಿಲಿಯನ್ (ಸುಮಾರು ರೂ. 8,500 ಕೋಟಿ) ಪ್ಯಾಕೇಜ್ ನ್ನು ಪಡೆದ ಒಂದು ತಿಂಗಳ ನಂತರ ಈ ಬೆಳವಣಿಗೆ ಸಂಭವಿಸಿದೆ.

ಹಣಕಾಸು ಸಚಿವರ ಸಲಹೆಗಾರ ಖುರ್ರಾಮ್ ಶೆಹ್ಜಾದ್ ಸಾಮಾಜಿಕ ಮಾಧ್ಯಮದಲ್ಲಿ ಸಂಕ್ಷಿಪ್ತ ಹೇಳಿಕೆಯಲ್ಲಿ ೦ಆಃ ಪ್ಯಾಕೇಜ್‌ಗೆ ಸಂಬಂಧಿಸಿದ ಬೆಳವಣಿಗೆಯನ್ನು ದೃಢಪಡಿಸಿದ್ದಾರೆ.

**ಕರ್ನಾಟಕ ಸರ್ಕಾರ**
**ಜಿಲ್ಲಾ ಪಂಚಾಯತ್, ಬಳ್ಳಾರಿ.**
**ಕಾರ್ಯನಿರ್ವಾಹಕ ಅಭಿಯಂತರವರ ಕಛೇರಿ,**
**ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಳ್ಳಾರಿ.**

ಸಂ: ಕಾನಿಇಂ/ಪಂ.ರಾ.ಇಂ.ವಿ/ಬ/ಎಇ-1 /ವಿ.ವಿ.ಲೆ.ಶಿ/ ಟೆಂಡರು /2025-26/289
ದಿನಾಂಕ 03-06-2025

**ಟೆಂಡರು ಪ್ರಕಟಣೆ (ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಮಾತ್ರ)**

ಕರ್ನಾಟಕ ರಾಜ್ಯಪಾಲರ ಪರವಾಗಿ ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರಿಂದ ಪಂ.ರಾ.ಇಂ. ವಿಭಾಗ, ಬಳ್ಳಾರಿ ವ್ಯಾಪ್ತಿಯ **2024-25 ನೇ ಸಾಲಿನ ರಾಜ್ಯವಲಯದ ಮುಂದುವರೆದ ಯೋಜನೆಯಡಿ 4202-01-201-1-08-423 ಹೊಸ ಕೊಠಡಿಗಳು ನಿರ್ಮಾಣ, 2024-25 ನೇ ಸಾಲಿನ ರಾಜ್ಯವಲಯದ ಯೋಜನೆಯಡಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಶೌಚಾಲಯ ನಿರ್ಮಾಣ ಮತ್ತು 2024-25 ನೇ ಸಾಲಿನ ರಾಜ್ಯವಲಯದ ಯೋಜನೆಯಡಿ ಸರ್ಕಾರಿ ಶಾಲಾ ಕೊಠಡಿ ಮೈನರ್ ಮತ್ತು ಮೇಜರ್ ದುರಸ್ಥಿ** ಒಟ್ಟು **18** ಕಾಮಗಾರಿಗಳಿಗೆ ಇ-ಪ್ರೊಕ್ಯೂರ್‌ಮೆಂಟ್ (ಕೆ.ಕೆ.ಪಿ.ಪಿ. ಪೋರ್ಟಲ್) ಮುಖಾಂತರ ಐಟಂವಾರು ದರಗಳಲ್ಲಿ ಟೆಂಡರು ಅಹ್ವಾನಿಸಿದೆ. ಸದರಿ ಕಾಮಗಾರಿಗಳಲ್ಲಿ **ಪರಿಶಿಷ್ಟ ಜಾತಿ ಗುತ್ತಿಗೆದಾರರಿಗೆ 06, ಪರಿಶಿಷ್ಟ ಪಂಗಡ ಗುತ್ತಿಗೆದಾರರಿಗೆ 02 ಕೆಟಗರಿ II A 03 ಮತ್ತು ಕೆಟಗರಿ I 01** ಕಾಮಗಾರಿಗಳನ್ನು ಕಾಯ್ದಿರಿಸಲಾಗಿದೆ.

**ಕಾಮಗಾರಿಗಳ ಇಂಡೆಂಟ್ ಸಂಖ್ಯೆ- 15513, 15515, 15440, 15521, 15555, 15558, 15559, 15566, 15588, 15587, 15586, 15585, 15583, 15581, 15580, 15577, 15572 ಮತ್ತು 15569**

ಟೆಂಡರ್ ನಮೂನೆಗಳನ್ನು **https://kppp.karnataka.gov.in** ಅಂತರ್ಜಾಲದಲ್ಲಿ **ದಿನಾಂಕ 27-05-2025 ರಿಂದ ದಿನಾಂಕ 03-06-2025 ರಂದು ಸಂಜೆ 4.30** ಗಂಟೆವರೆಗೆ ಡೌನ್ ಲೋಡ್ ಮಾಡಿಕೊಂಡು ಅವಶ್ಯ ಮಾಹಿತಿ ಹಾಗೂ ನಿಗಧಿತ ಇ.ಎಂ.ಡಿ. ಯೊಂದಿಗೆ **ದಿನಾಂಕ: 03-06-2025 ರ 16.30** ಗಂಟೆಯವರಗೆ ಸ್ವೀಕರಿಸಲಾಗುವುದು. ಕಾಮಗಾರಿಯ ತಾಂತ್ರಿಕ ಬಿಡ್‌ನ್ನು ಆನ್ ಲೈನ್‌ನಲ್ಲಿ **ದಿನಾಂಕ: 04-06-2025 ರಂದು 17.30** ಗಂಟೆಗೆ ತೆರೆಯುಲಾಗುವುದು. ಈ ಕುರಿತು ತಿದ್ದುಪಡಿಗಳೇನಾದರೂ ಇದ್ದಲ್ಲಿ ತಿದ್ದುಪಡಿಯನ್ನು **(https://kppp.karnataka.gov.in)** ವೆಬ್ ಸೈಟ್‌ನಲ್ಲಿ ಮಾತ್ರ ಪ್ರಕಟಿಸಲಾಗುವುದು. ಟೆಂಡರನ್ನು ಯಾವುದೇ ಕಾರಣ ನೀಡದೇ ತಿರಸ್ಕರಿಸುವ ಹಕ್ಕನ್ನು ಕಾಯ್ದಿರಿಸಲಾಗಿದೆ. ಹೆಚ್ಚಿನ ವಿವರಗಳನ್ನು ಈ ಕಛೇರಿ ವೇಳೆಯಲ್ಲಿ ಖುದ್ದಾಗಿ ಪಡೆಯಬಹುದಾಗಿರುತ್ತದೆ. ಕಛೇರಿ ದೂರವಾಣಿ ಸಂಖ್ಯೆ 08392-266173.

**ಸಹಿ/- ಕಾರ್ಯನಿರ್ವಾಹಕ ಅಭಿಯಂತರರು, ಪಂ.ರಾ.ಇಂ. ವಿಭಾಗ, ಬಳ್ಳಾರಿ.**
**ಡಿಐಪಿಆರ್/ಬಳ್ಳಾರಿ/162/ಕೆಎಸ್ಎಂಸಿಎ/2025-26**

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.